
# ಬೆಳಗಾವಿ ವರದಿ

ಕನ್ನಡ ದಿನಪತ್ರಿಕೆ
14 ಎಪ್ರಿಲ್ । ರವಿವಾರ
14 APRIL 2024

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನ್ನಟ್ಟಿ
BELAGAVI VARADI KANNADA DAILY NEWS PAPER
ಗಡಿ ಜಿಲ್ಲೆಯ ಧ್ವನಿ...

₹4 ಸಂಪುಟ – 5 ಸಂಚಿಕೆ – 48 ಪುಟ – 4 | RNI. KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26


## ಏ.17ರಂದು ಜಗದೀಶ್ ಶೆಟ್ಟರ್ ನಾಮಪತ್ರ ಸಲ್ಲಿಕೆ



ಬೆಳಗಾವಿ: ಬೆಳಗಾವಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿಯಾಗಿ ಜಗದೀಶ್ ಶೆಟ್ಟರ ಏ.17ರಂದು ನಾಮಪತ್ರ ಸಲ್ಲಿಸಲಿದ್ದಾರೆ.

ಅಂದು ಬೆಳಗ್ಗೆ ಬೃಹತ್ ಮೆರವಣಿಗೆ ಮೂಲಕ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ ಮೆರವಣಿಗೆಯಲ್ಲಿ ಆಗಮಿಸಿ ಜಿಲ್ಲಾಧಿಕಾರಿ ಕಚೇರಿಯಲ್ಲಿ ನಾಮಪತ್ರ ಸಲ್ಲಿಸುವರು. ಅಂದು ಬೆಳಗಾವಿ ಲೋಕಸಭಾ ಚುನಾವಣೆಯ ಉಸ್ತುವಾರಿಯಾಗಿ ನೇಮಕಗೊಂಡಿರುವ ಹನುಮಂತ ನಿರಾಣಿ, ಬೆಳಗಾವಿ ಲೋಕಸಭಾ ಅಭ್ಯರ್ಥಿ ಜಗದೀಶ್ ಶೆಟ್ಟರ್ ಹಾಗೂ ಮಾಜಿ ಮುಖ್ಯಮಂತ್ರಿ ಸೇರಿದಂತೆ ಬಿಜೆಪಿ ಅನೇಕ ಗಣ್ಯರು ನಾಮಪತ್ರ ಸಲ್ಲಿಸುವ ವೇಳೆ ಹಾಜ-ರಿರಲಿದ್ದಾರೆ.

## ಮೋದಿ ರಾಜ್ಯ ಭೇಟಿಗೆ ನನ್ನ ತಕರಾರಿಲ್ಲ, ಆದರೆ ಕರ್ನಾಟಕಕ್ಕೆ ಕೊಟ್ಟ ಕೊಡುಗೆ ತಿಳಿಸಲಿ: ಸಿದ್ದರಾಮಯ್ಯ



ಬೆಂಗಳೂರು: ಮೋದಿಯವರು ರಾಜ್ಯಕ್ಕೆ ಬಂದು ಹೋಗಲು ನನ್ನದೇನೂ ತಕರಾರಿಲ್ಲ. ಆದರೆ, ಕರ್ನಾಟಕಕ್ಕೆ ಏನು ಮಾಡಿದ್ದಾರೆ ಎಂದು ರಾಜ್ಯದ ಜನತೆಗೆ ಹೇಳಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಆಗ್ರಹಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೋದಿಯವರು ಪ್ರಚಾರಕ್ಕಾಗಿ ಮೈಸೂರಿಗೆ ಬರುತ್ತಿರುವುದಕ್ಕೆ ನನ್ನ ಅಭ್ಯಂತರವೇನಿಲ್ಲ. ನಿರುದ್ಯೋಗ ನಿವಾರಣೆಗೆ ಏನು ಮಾಡಿದ್ದಾರೆ? ತೆರಿಗೆ ಹಂಚಿಕೆಯಲ್ಲಿ ಕರ್ನಾಟಕಕ್ಕೆ ಅನ್ಯಾಯ ಆಗಿದೆ. ಅದನ್ನು ಪರಿಹರಿಸಲು ಏನು ಮಾಡಿದ್ದಾರೆ? ಬರ ಪರಿಹಾರವನ್ನು ಈವರೆಗೂ ಕೊಟ್ಟಿಲ್ಲವೇಕೆ? ಎಂಬುದನ್ನೆಲ್ಲ ತಿಳಿಸಬೇಕು ಎಂದು ಒತ್ತಾಯಿಸಿದರು.

ಬಳಿಕ ಅಂಬೇಡ್ಕರ್ ಬಂದರೂ ಸಂವಿಧಾನ ಬದಲಾಯಿಸಲು ಸಾಧ್ಯ ಇಲ್ಲ ಎಂಬ ಮೋದಿ ಹೇಳಿಕೆಗೆ ತಿರುಗೇಟು ನೀಡಿದ ಅವರು, ಅಂಬೇಡ್ಕರ್ ಬಂದರೂ ಸಂವಿಧಾನ ಬದಲಿಸಲು ಸಾಧ್ಯವಿಲ್ಲ.

ಬಿಜೆಪಿ ಸಂವಿಧಾನದ ಪರವಾಗಿದೆ ಎಂಬುದು ಮೋದಿಯವರು ಮನಸಿನ ಮಾತಾಗಿದ್ದರೆ ಸಂವಿಧಾನ ಬದಲಿಸುತ್ತೇವೆ ಎಂದ ಅನಂತಕುಮಾರ್ ಹೆಗಡೆ ಮೇಲೆ ಕ್ರಮ ಯಾಕೆ ತೆಗೆದುಕೊಂಡಿಲ್ಲ? ಅವರನ್ನು ಪಕ್ಷದಿಂದ ಅಥವಾ ಮಂತ್ರಿ ಸ್ಥಾನದಿಂದ ಕೈಬಿಟ್ಟರೇ? ಉತ್ತರ ಕರ್ನಾಟಕದಲ್ಲಿ ಐದು ವರ್ಷಗಳಿಂದ ಏನೂ ಕೆಲಸ ಮಾಡದೇ ಮನೆಯಲ್ಲಿ ಕುಳಿತಿದ್ದರು. ಕೊನೆಯ 3–4 ತಿಂಗಳು ಬಂದು ಭಾಷಣ ಮಾಡಿದರು. ಟಿಕೆಟ್ ಕೊಟ್ಟರೆ ಸೋಲುತ್ತಾರೆ ಎಂಬ ವರದಿ ಬಂದಿದ್ದಕ್ಕೆ ಅನಂತಕುಮಾರ್ ಅವರಿಗೆ ಟಿಕೆಟ್ ಕೊಟ್ಟಿಲ್ಲ ಎಂದು ಟೀಕಿಸಿದರು.

ಬಿಜೆಪಿ ಯಾವತ್ತೂ ಸಂವಿಧಾನದ ಪರವಾಗಿಲ್ಲ. ಸಂವಿಧಾನ ಜಾ-ರಿಯಾದಾಗ ಸಾವರ್ಕರ್ ಹಾಗೂ ಗೋಲ್ವಾಲ್ಕರ್ ಅವರು ಸಂವಿಧಾನವನ್ನು ವಿರೋಧಿಸಿದ್ದರು.

ಈ ಬಾರಿ ದೇಶದಲ್ಲಿ ಎನ್‌ಡಿಎಗೆ ಬಹುಮತ ಬರುವುದಿಲ್ಲ. ಇಂಡಿಯಾ ಒಕ್ಕೂಟಕ್ಕೆ ಬಹುಮತ ಸಿಗುವ ನಿರೀಕ್ಷೆ ಇದೆ.

ರಾಜ್ಯದಲ್ಲೂ ಕಾಂಗ್ರೆಸ್ ಪಕ್ಷಕ್ಕೆ ಹೆಚ್ಚು ಸ್ಥಾನ ಸಿಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

NIA ಮತ್ತು ರಾಜ್ಯ ಪೊಲೀಸರಿಗೆ ಧನ್ಯವಾದ: ರಾಮೇಶ್ವರಂ ಕೆಫೆ ಸ್ಫೋಟ ಪ್ರಕರಣದ ಆರೋಪಿಗಳ ಬಂಧನಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಷ್ಟ್ರೀಯ ತನಿಖಾ ಸಂಸ್ಥೆ ಮತ್ತು ರಾಜ್ಯ ಪೊಲೀಸರಿಗೆ ಶನಿವಾರ ಧನ್ಯವಾದ ಅರ್ಪಿಸಿದ್ದಾರೆ.

“ನಾನು ಎನ್‌ಐಎ ಮತ್ತು ಕರ್ನಾಟಕ ಪೊಲೀಸರಿಗೆ ಧನ್ಯವಾದ ಹೇಳುತ್ತೇನೆ. ವಿಚಾರಣೆ ಬಳಿಕ ಸತ್ಯಾಂಶ ಹೊರಬರಲಿದೆ ಎಂದರು. ಅವರು ಆರೋಪಿಗಳನ್ನು ಪತ್ತೆಹಚ್ಚಲು ಮತ್ತು ಅವರನ್ನು ಕೋಲ್ಕತ್ತಾದಲ್ಲಿ ಬಂಧಿಸಲು ಸಾಧ್ಯವಾಯಿತು ಎಂದು ಸಿದ್ದರಾಮಯ್ಯ ಇಲ್ಲಿ ಸುದ್ದಿಗಾರರಿಗೆ ತಿಳಿಸಿದರು.





## ಯತ್ನಾಳ್ ಆರೋಪ ಸಾಬೀತಾದರೆ ರಾಜಕೀಯ ನಿವೃತ್ತಿ: ಶಿವಾನಂದ ಪಾಟೀಲ್ ಸವಾಲು

ಬಾಗಲಕೋಟೆ: ಬಿಜೆಪಿ ಶಾಸಕ ಬಸನಗೌಡ ಪಾಟೀಲ ಯತ್ನಾಳ ಆರೋಪಕ್ಕೆ ಸಚಿವ ಶಿವಾನಂದ ಪಾಟೀಲ್ ತಿರುಗೇಟು ನೀಡಿದ್ದು, “ಸಕ್ಕರೆ ಕಾರ್ಖಾನೆಗಳಿಂದ 50 ಲಕ್ಷ ಕೇಳಿದ್ದಾರೆ ಎಂಬ ಆರೋಪ ಸಾಬೀತು ಮಾಡಿದರೆ ನಾನು ರಾಜಕೀಯ ತ್ಯಜಿಸುವೆ” ಎಂದು ಸವಾಲು ಹಾಕಿದ್ದಾರೆ.

ಒಂದು ವೇಳೆ ಆರೋಪವನ್ನು ಸಾಬೀತು ಮಾಡಲು ವಿಫಲರಾದರೆ ಶಾಸಕ ಯತ್ನಾಳ್ ಅವರು ರಾಜಕೀಯ ಬಿಡಲಿ ಎಂದಿದ್ದಾರೆ. ವಿಜಯಪುರದಿಂದ ಪಕ್ಷೇತರರಾಗಿ ಸ್ಪರ್ಧೆಗೆ ಸವಾಲೆಸೆದ ಸಚಿವ ಶಿವಾನಂದ, ಒಂದು ವೇಳೆ ಯತ್ನಾಳ್ ನನಗಿಂತ ಒಂದೇ ಮತ ಹೆಚ್ಚು ಪಡೆದರೂ ನಾನು ರಾಜಕೀಯ ನಿವೃತ್ತಿ ಪಡೆಯುವೆ ಎಂದರು. ಸಹೋದರನ ಪುತ್ರ ಬಿಜೆಪಿಗೆ ಹೋಗಿದ್ದು ಅವರ ವೈಯಕ್ತಿಕ ನಿರ್ಧಾರ. ನನ್ನ ಪುತ್ರನೇ ಹೋದರೂ ನಾನು ಬೇಡ ಎನ್ನಲಾಗದು ಎಂದರು. ಪಂಚಮಸಾಲಿ ಸಮಾಜದ ಮೀಸಲಾತಿ ಕುರಿತ ಪ್ರಶ್ನೆಗೆ ಉತ್ತರಿಸಲು ಸಚಿವ ಶಿವಾನಂದ ಅವರು ನಿರಾಕರಿಸಿದರು.



## ಐಷಾರಾಮಿ ಕಾರಿನಲ್ಲಿ ಕೋಟಿ ಕೋಟಿ ಹಣ ಪತ್ತೆ

ಬೆಂಗಳೂರು: ಬೆಂಗಳೂರಿನ ಜಯನಗರದಲ್ಲಿ ನಿಲ್ಲಿಸಿದ್ದ ಐಷಾರಾಮಿ ಕಾರಿನಲ್ಲಿ ಕೋಟಿ ಕೋಟಿ ರೂಪಾಯಿ ಹಣ ಪತ್ತೆಯಾಗಿದೆ.

ಜಯನಗರದ 4ನೇ ಬ್ಲಾಕ್ ನಲ್ಲಿ ಮಯ್ಯಾಸ್ ಹೋಟೆಲ್ ಎದುರು ನಿಲ್ಲಿಸಿದ್ದ ಕೆಂಪು ಬಣ್ಣದ ಐಷಾರಾಮಿ ಕಾರಿನಲ್ಲಿ ಚೀಲದಲ್ಲಿ ಕೋಟ್ಯಂತರ ರೂಪಾಯಿ ಹಣ ಪತ್ತೆಯಾಗಿದೆ. ಲೋಕಸಭಾ ಚುನಾವಣೆ ಸಮೀಪಿಸುತ್ತಿರುವ ಹಿನ್ನೆಲೆಯಲ್ಲಿ ಕಾರಿನಲ್ಲಿ ಕೋಟಿ ಕೋಟಿ ಹಣ ಪತ್ತೆಯಾಗಿರುವುದು ಸಾಕಷ್ಟು ಅನುಮಾನಕ್ಕೆ ಕಾರಣವಾಗಿದೆ.

ಸ್ಥಳಕ್ಕೆ ಜಯನಗರ ಪೊಲೀಸರು ಭೇಟಿ ನೀಡಿದ್ದು, ಕಾರು ಹಾಗೂ ಹಣ ಯಾರದ್ದು? ಹಣದ ಬಗ್ಗೆ ಸೂಕ್ತ ದಾಖಲೆಗಳು ಇವೆಯೇ ಎಂಬ ಬಗ್ಗೆ ಪರುಶೀಲನೆ ನಡೆಸಿದ್ದಾರೆ.

## ಚಾಮರಾಜನಗರ: ರೈತನ ಮೇಲೆ ಹುಲಿ ದಾಳಿ

ಬೆಂಗಳೂರು: ಚಾಮರಾಜನಗರ ಜಿಲ್ಲೆಯ ಹಳ್ಳಿಯೊಂದರಲ್ಲಿ ರೈತನ ಮೇಲೆ ಹುಲಿ ದಾಳಿ ನಡೆಸಿದ್ದು, ಘಟನೆಯಲ್ಲಿ 22 ವರ್ಷದ ಯುವಕ ಗಾಯಗೊಂಡಿದ್ದಾರೆ ಎಂದು ಅರಣ್ಯ ಇಲಾಖೆ ಶನಿವಾರ ತಿಳಿಸಿದೆ.

ಗಾಯಗೊಂಡ ರೈತನನ್ನು ಮನು ಎಂದು ಗುರುತಿಸಲಾಗಿದ್ದು, ಆತನ ಕುತ್ತಿಗೆ ಮತ್ತು ಕೈಗಳಿಗೆ ಗಾಯಗಳಾಗಿವೆ.

ಸದ್ಯ ಮನು ಆರೋಗ್ಯ ಸ್ಥಿರವಾಗಿದ್ದು, ಮೈಸೂರಿನ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ ಮತ್ತು ಅಪಾಯದಿಂದ ಪಾರಾಗಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ಸಂಜಯ ಪಾಟೀಲ ನೀಚತನದ ಹೇಳಿಕೆ ಬಿಜೆಪಿಯ ಹಿಡನ್ ಅಜೆಂಡಾ: ಸಚಿವೆ ಲಕ್ಷ್ಮೀ ಹೆಬ್ಬಾಳಕರ್

ಬೆಳಗಾವಿ: ಶನಿವಾರ ಬೆಳಗಾವಿ ಗ್ರಾಮೀಣ ಕ್ಷೇತ್ರದಲ್ಲಿ ನಡೆದ ಬಿಜೆಪಿಯ ಬಹಿರಂಗ ಸಭೆಯಲ್ಲಿ ಮಾಜಿ ಶಾಸಕ ಸಂಜಯ ಪಾಟೀಲ ನೀಡಿದ ನೀಚತನದ ಹೇಳಿಕೆ ಬಿಜೆಪಿಯ ಹಿಡನ್ ಅಜೆಂಡಾ ಆಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಖಾರವಾಗಿ ಪ್ರತಿಕ್ರಿಯಿಸಿದ್ದಾರೆ.

ಈ ಕುರಿತು ವೀಡಿಯೋ ಬಿಡುಗಡೆ ಮಾಡಿರುವ ಸಚಿವರು, ಕರ್ನಾಟಕ ರಾಜ್ಯದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆಯಾದ ನನ್ನ ಬಗ್ಗೆ ಇಂತಹ ಅವಹೇಳನಕಾರಿ ಹೇಳಿಕೆ ನೀಡುವ ಮೂಲಕ ಸಂಜಯ ಪಾಟೀಲ ಅವರು, ಬಿಜೆಪಿಯವರಿಗೆ ಮಹಿಳೆಯರ ಬಗ್ಗೆ ಇರುವ ಗೌರವ ಎಂತಹುದು ಎನ್ನುವುದನ್ನು ತೋರಿಸಿದ್ದಾರೆ ಎಂದಿದ್ದಾರೆ.



ಬಿಜೆಪಿಯವರು ಕೇವಲ ಬಾಯಿ ಮಾತಿನಲ್ಲಿ ರಾಮ ಎಂದರೆ ಸಾಲುವುದಿಲ್ಲ, ಬೇಟಿ ಬಚಾವೋ, ಬೇಟಿ ಪಡಾವೋ ಎಂದರೆ ಸಾಲುವುದಿಲ್ಲ.

ಪ್ರತಿಯೊಬ್ಬ ಮಹಿಳೆಯನ್ನು ಗೌರವಿಸುವುದು ಹಿಂದೂ ಸಂಸ್ಕೃತಿ. ಮಾತನಾಡುವಾಗ ಹಿಂದೂ ಸಂಸ್ಕೃತಿ ಬಗ್ಗೆ ದೊಡ್ಡ ದೊಡ್ಡ ಮಾತನಾಡುವ ಸಂಜಯ ಪಾಟೀಲ ಇಂತಹ ಹೇಳಿಕೆ ಮೂಲಕ ಈ ದೇಶದ ಮಹಿಳೆಯರಿಗೆ ಅವಮಾನ ಮಾಡಿದ್ದಾರೆ.

ಇಂತಹ ನೀಚತನದ ಹೇಳಿಕೆ ಅತ್ಯಂತ ಖಂಡನೀಯವಾದದ್ದು, ಕರ್ನಾಟಕದ ಎಲ್ಲ ಮಹಿಳೆಯರು ಇಂತಹ ಹಿಡನ್ ಅಜೆಂಡಾ ಇಟ್ಟು ಕೊಂಡಿರುವ ಬಿಜೆಪಿಯನ್ನು ತಿರಸ್ಕರಿಸಬೇಕು, ಖಂಡಿಸಬೇಕು ಎಂದು ಹೆಬ್ಬಾಳಕರ್ ಕರೆ ನೀಡಿದ್ದಾರೆ.

ಸಂಜಯ ಪಾಟೀಲ ಅವರು ಈ ರೀತಿಯ ನೀಚ ಹೇಳಿಕೆ ನೀಡುವುದು, ಮಹಿಳೆಯರ ಬಗ್ಗೆ ಕೆಟ್ಟದಾಗಿ ಮಾತನಾಡುವುದು ಹೊಸದೇನಲ್ಲ.

ಆದರೆ, ಈ ಹೇಳಿಕೆ ಕೊಡುವ ಸಂದರ್ಭದಲ್ಲಿ ವೇದಿಕೆಯ ಮೇಲೆ ಮಾಜಿ ಮುಖ್ಯಮಂತ್ರಿ, ಬೆಳಗಾವಿ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಜಗದೀಶ ಶೆಟ್ಟರ್, ಸಂಸದೆ ಮಂಗಲಾ ಅಂಗಡಿ ಮತ್ತಿತರರೂ ಇದ್ದರು.

ಆದರೆ ಅವರೆಲ್ಲ ನಗುವ ಮೂಲಕ ಸಂಜಯ ಪಾಟೀಲ ಹೇಳಿಕೆಗೆ ಸಮ್ಮತಿ ಸೂಚಿಸಿದರೇ ವಿನಃ ಖಂಡಿಸಲಿಲ್ಲ. ವೇದಿಕೆಯಲ್ಲೇ ಯಾರಾದರೊಬ್ಬರು ಇದನ್ನು ಖಂಡಿಸಿದ್ದರೆ ಬಿಜೆಪಿಗೆ ಮಹಿಳೆಯರ ಬಗ್ಗೆ ಗೌರವ ಇದೆ ಎಂದು ಭಾವಿಸಬಹುದಿತ್ತು.

ಆದರೆ ಹಾಗೆ ಮಾಡದೆ ಇರುವುದ-ರಿಂದ ಬಿಜೆಪಿಯ ಮುಖವಾಡ ಕಳಚಿ ಬಿದ್ದಿದೆ. ಇಂತಹ ಹಿಡನ್ ಅಜೆಂಡಾ ಇಟ್ಟುಕೊಂಡಿರುವ ಬಿಜೆಪಿಯನ್ನು ಎಲ್ಲರೂ ತಿರಸ್ಕರಿಸೋಣ ಎಂದು ಲಕ್ಷ್ಮೀ ಹೆಬ್ಬಾಳಕರ್ ಕರೆ ನೀಡಿದ್ದಾರೆ.

## ನಗರದಲ್ಲಿ ಸಿಸಿಬಿ ಪೊಲೀಸರ ಭರ್ಜರಿ ಕಾರ್ಯಾಚರಣೆ: ಭಿಕ್ಷಾಟನೆ ಮಾಡುತ್ತಿದ್ದ 47 ಮಕ್ಕಳ ರಕ್ಷಣೆ, 36 ಮಹಿಳೆಯರು ವಶಕ್ಕೆ




ಬೆಂಗಳೂರು: ನಗರದಲ್ಲಿ ಭಿಕ್ಷಾಟನೆ ಮಾಡುವವರ ವಿರುದ್ಧ ವಿಶೇಷ ಕಾರ್ಯಾಚರಣೆ ನಡೆಸಿರುವ ಸಿಸಿಬಿ ಪೊಲೀಸರು, 47 ಮಕ್ಕಳನ್ನು ರಕ್ಷಿಸಿ, 36 ಮಂದಿ ಮಹಿಳೆಯರನ್ನು ವಶಕ್ಕೆ ಪಡೆದುಕೊಂಡಿದ್ದಾರೆ.

ಸಿಸಿಬಿಯ ಮಹಿಳಾ ಸಂರಕ್ಷಣಾ ದಳ, ವಿಶೇಷ ವಿಚಾರಣ ದಳ, ಪುಲಕೇಶಿ ನಗರ ಉಪ ವಿಭಾಗದ ಪೊಲೀಸರು ಹಾಗೂ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಧಿಕಾರಿಗಳು ಗುರುವಾರ ಜಂ-ಟಿಯಾಗಿ ಈ ಕಾರ್ಯಾಚರಣೆ ನಡೆಸಿದ್ದಾರೆ.


ಪುಲಕೇಶಿ ನಗರ ಪೊಲೀಸ್ ಠಾಣೆ ವ್ಯಾಪ್ತಿಯ ಹಜೀಸರ್ ಇಸ್ಮಾಯಿಲ್ ಸೈಟ್ ಮಜೀದ್ ಬಳಿ ಸೇರಿದಂತೆ ಸುತ್ತಮುತ್ತಲ ಸ್ಥಳಗಳ ಬೀದಿ ಬದಿಯಲ್ಲ ಈ ಮಕ್ಕಳು ಭಿಕ್ಷಾಟಣೆಯಲ್ಲಿ ತೊಡಗಿದ್ದರು. ಮಕ್ಕಳನ್ನು ಭಿಕ್ಷಾಟನೆಯಲ್ಲಿ ತೊಡಗಿಸಿದ್ದ 37 ಮಹಿಳೆಯರನ್ನು ವಶಕ್ಕೆ ಪಡೆದು ಮಕ್ಕಳ ಕಲ್ಯಾಣ ಸಮಿತಿ ಎದುರು ಹಾಜರುಪಡಿಸಲಾಗಿದೆ.

ಭಿಕ್ಷಾಟನೆಯಿಂದ ರಕ್ಷಿಸಿರುವ 47 ಮಂದಿ ಮಕ್ಕಳಲ್ಲಿ 28 ಹುಡುಗಿಯರು ಮತ್ತು 19 ಗಂಡು ಮಕ್ಕಳಿದ್ದು, ಎಲ್ಲರನ್ನೂ ಮಕ್ಕಳು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸುಪರ್ದಿಗೆ ನೀಡಲಾಗಿದೆ.

ರಕ್ಷಣೆಗೊಳಗಾದ ಮಕ್ಕಳಲ್ಲಿ 6 ಮಕ್ಕಳು ಒಂದು ವರ್ಷದೊಳಗಿನವರು, 12 ಮಕ್ಕಳು 1 ರಿಂದ 2 ವರ್ಷದವರು, ಆರು ಮಕ್ಕಳು 3ರಿಂದ 6 ವರ್ಷದವರು, 16 ಮಕ್ಕಳು 6ರಿಂದ 10 ವರ್ಷದವರು, ಏಳು ಮಂದಿ 10 ವರ್ಷಕ್ಕಿಂತ ಮೇಲ್ಪಟ್ಟವರಾಗಿದ್ದಾರೆ.

## ಮೈ ಮೇಲೆ ಖರ್ಗೆ ಸಾಧನೆಯ ಟ್ಯಾಟೂ ಹಾಕಿಕೊಂಡ ಅಭಿಮಾನಿ

ಬೆಂಗಳೂರು: ನೆಚ್ಚಿನ ನಟ, ನಟಿಯರು ಹಾಗೂ ದೇವರ ಚಿತ್ರ ಹೀಗೆ ತಮಗೆ ಇಷ್ಟವಾದದ್ದನ್ನು ಟ್ಯಾಟೂ ಹಾಕಿಸಿಕೊಳ್ಳುವುದನ್ನು ಕೇಳಿದ್ದೇವೆ. ಆದರೆ ಈಗ ಇಲ್ಲೊಬ್ಬ ಅಭಿಮಾನಿ ಎಐಸಿಸಿ ಅಧ್ಯಕ್ಷ ಡಾ.ಮಲ್ಲಿಕಾರ್ಜುನ ಖರ್ಗೆ, ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆಯವರ ಅಭಿಮಾನಿಯೊಬ್ಬರು ತಮ್ಮ ಎದೆ, ಬೆನ್ನು, ತಲೆ ಮೇಲೆ ಈ ಇಬ್ಬರು ನಾಯಕರ ಭಾವಚಿತ್ರಗಳ ಟ್ಯಾಟೂ ಹಾಕಿಸಿಕೊಂಡು ಗಮನ ಸೆಳೆದಿದ್ದಾರೆ.





ಯಾದಗಿರಿ ಜಿಲ್ಲೆಯ ಸುರಪುರ ತಾಲೂಕಿನ ಜಿಲಕೇರಿ ಗ್ರಾಮದ ಹಣಮಂತ ಹೊಸ್ಮನಿ ಎಂಬುವರೇ ಟ್ಯಾಟೂ ಹಾಕಿಸಿಕೊಂಡು ಗಮನ ಸೆಳೆದ ಅಭಿಮಾನಿ. ಹಣಮಂತ ಹೊಸ್ಮನಿಯವರ ಅಭಿಮಾನಕ್ಕೆ ಮನಸೋತ ಪ್ರಿಯಾಂಕ್ ಖರ್ಗೆಯವರು ಇವರನ್ನು ಕಾಂಗ್ರೆಸ್ ಸಮಾವೇಶದಲ್ಲಿ ಆಹ್ವಾನಿಸಿ ಅವರಿಗೆ ಡಾ. ಖರ್ಗೆಯವರಿಂದ ಸತ್ಕಾರ ಮಾಡಿಸಿದ್ದಾರೆ.

ಎದೆಯ ಮೇಲೆ ಡಾ. ಖರ್ಗೆ, ಪ್ರಿಯಾಂಕ್ ಭಾವಚಿತ್ರ ಟ್ಯಾಟೂ ಹಾಕಿಸಿಕೊಂಡಿದ್ದಾರೆ. ತಲೆಯ ಮೇಲೆ ಪಿಕೆ ಬಾಸ್ ಎಂದು ಕೇಶ ವಿನ್ಯಾಸ ಮಾಡಿಸಿಕೊಂಡಿದ್ದಾರೆ. ಬೆನ್ನ ಮೇಲೆಲ್ಲಾ ಡಾ.ಮಲ್ಲಿಕಾರ್ಜುನ ಖರ್ಗೆಯವರು ರಾಜ-ಕೀಯವಾಗಿ 5 ದಶಕಗಳ ಕಾಲ ನಡೆದು ಬಂದ ದಾರಿಯ ಮಾಹಿತಿಯನ್ನು ಟ್ಯಾಟೂ ಮೂಲಕ ಬರೆದುಕೊಂಡಿದ್ದಾರೆ.

## ಪ್ರಧಾನಿ ಮೋದಿ ಆಗಮನ ವಿರೋಧಿಸಿ ಕಾಂಗ್ರೆಸ್ ಪ್ರತಿಭಟನೆ

ಬೆಳಗಾವಿ: ಕೇಂದ್ರ ಸರಕಾರ ರಾಜ್ಯಕ್ಕೆ ನೀಡಬೇಕಾದ ತೆರಿಗೆಯಲ್ಲಿ ವಂಚನೆ, ಜಿ.ಎಸ್.ಟಿಯಲ್ಲಿ ಮೋಸ ಮಾಡಿದೆ. ಪ್ರವಾಹ ಮತ್ತು ಬರ ಪರಿಹಾರದ ಸಹಾಯನುಧಾನವನ್ನು ನೀಡದೇ ವಂಚನೆ ಮಾಡಿದೆ ಎಂದು ಆರೋಪಿಸಿ, ರಾಜ್ಯಕ್ಕೆ ಪ್ರಧಾನಿ ಮೋದಿಯವರು ಆಗಮಿಸುವುದನ್ನು ವಿರೋಧಿಸಿ ಕಾಂಗ್ರೆಸ್ ಕಾರ್ಯಕರ್ತರು ಶನಿವಾರ ಬೆಳಗಾವಿ ನಗರದ ಚನ್ನಮ್ಮಾ ಸರ್ಕಲ್ ನಲ್ಲಿ ಪ್ರತಿಭಟನೆ ನಡೆಸಿ, ಆಕ್ರೋಶ ವ್ಯಕ್ತ ಪಡಿಸಿದರು.



ಬೆಳಗಾವಿ ಜಿಲ್ಲಾ ಗ್ರಾಮೀಣ ಕಾಂಗ್ರೆಸ್ ಅಧ್ಯಕ್ಷ ವಿನಯ ನಾವಲಗಟ್ಟಿ ಮಾತನಾಡಿ, ತೆರಿಗೆ ಪಾಲು ಕಡಿತ ಮಾಡಿರುವುದರಿಂದ ರಾಜ್ಯಕ್ಕೆ 45,000 ಕೋಟಿ ರೂ. ನಷ್ಟವಾಗಿದೆ.

ಬರ, ನೆರೆ, ಕೋವಿಡ್, ಇತರ ತೊಂದರೆಯಾದಾಗ ರಾಜ್ಯಕ್ಕೆ ಮೋದಿಯವರು ಬಂದಿಲ್ಲ. ಈಗ ಯಾಕೆ ಬರುತ್ತಿದ್ದೀರಿ? ಮೋದಿ ಬರುವುದು ರಾಜ-ಕೀಯಕ್ಕಾಗಿ ಹೊರತು ರಾಜ್ಯದ ಜನರ ಹಿತಕ್ಕಾಗಿ ಅಲ್ಲ ಎಂದು ವಾಗ್ದಾಳಿ ನಡೆಸಿದರು.

ಈ ಸಂದರ್ಭದಲ್ಲಿ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಎನ್.ಐ. ಕಡೋಳಿ, ಆರ್ ಪಿ. ಪಾಟೀಲ್, ರಸುಲ್ ಪಿರ್ಜಾದೆ, ವಿಜಯ ಗೆಜ್ಜಿ, ಇರ್ಮಾನ್ ತಪ್ಪಕೀರ್, ರಾಜದೀಪ್ ಕೌಜಲಗಿ, ಶೇಖರ ಇಟಿ, ಅಕ್ಬರ್ ಸಡೇಕರ್, ಶೇಕಿಲ್ ಮುಲ್ಲಾ, ಪರುಶುಮಾರ್ ವಗ್ಗಣ್ಣವರ್, ಕೆಪಿಸಿಸಿ ಸದಸ್ಯ ಆಯಿಷಾ ಸನದಿ, ರೋಹಿಣಿ ಬಾಬಸೇಠ್ ಸೇರಿದಂತೆ ಹಲವರು ಇದ್ದರು.


## ಕಾಂಗ್ರೆಸ್ ಅಧಿಕಾರಕ್ಕೆ ಬಂದ ನಂತರ ರೈತರ ಸಾಲ ಮನ್ನಾ: ರಾಹುಲ್ ಗಾಂಧಿ



ಮಹಾರಾಷ್ಟ್ರ: ಕೇಂದ್ರದಲ್ಲಿ ತಮ್ಮ ಪಕ್ಷ ಅಧಿಕಾರಕ್ಕೆ ಬಂದರೆ ರೈತರ ಸಾಲ ಮನ್ನಾ ಮಾಡಲಾಗುವುದು ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಶನಿವಾರ ಹೇಳಿದ್ದಾರೆ. ಮಹಾರಾಷ್ಟ್ರದ ಭಂಡಾರಾ ಜಿಲ್ಲೆಯ ಸಾಕೋಲಿಯಲ್ಲಿ ರ್ಯಾಲಿಯನ್ನುದ್ದೇಶಿಸಿ ಮಾತನಾಡಿದ ಅವರು, ನಿರುದ್ಯೋಗ ಮತ್ತು ಹಣದುಬ್ಬರ ದೇಶದ ಜನರನ್ನು ಕಾಡುತ್ತಿರುವ ಪ್ರಮುಖ ಸಮಸ್ಯೆಗಳಾಗಿವೆ. ಆದರೆ ಇವುಗಳನ್ನು ಪ್ರಧಾನಿ ಮತ್ತು ಸೆಲೆಬ್ರಿಟಿಗಳ ಕಾರ್ಯಕ್ರಮಗಳತ್ತ ಕೇಂದ್ರೀಕ-ರಿಸಿರುವ ಮಾಧ್ಯಮಗಳು ನಿರ್ಲಕ್ಷಿಸಿವೆ ಎಂದು ಕಿಡಿಕಾರಿದರು. “ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ರೈತರ ಸಾಲ ಮನ್ನಾ ಮಾಡಲಾಗುವುದು ಎಂದು ಹೇಳಿದ ರಾಹುಲ್ ಗಾಂಧಿ, ನಿರುದ್ಯೋಗ ಮತ್ತು ಹಣದುಬ್ಬರದಿಂದ ಜನರು ಕಂಗಾಲಾಗಿದ್ದಾರೆ. ಕೇವಲ ಸಾವಿರಾರು ರೂ. ಆದಾಯ ಗಳಿಸುವವರು ಮತ್ತು ಕೋಟಿ ಗಳಿಸುವ ಜನರು ಒಂದೇ ಜಿಎಸ್‌ಟಿ ಪಾವತಿಸುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಕೇಂದ್ರದಲ್ಲಿನ ಎನ್ ಡಿಎ ಸರ್ಕಾರ ವಿರುದ್ಧ ವಾಗ್ದಾಳಿ ನಡೆಸಿದರು. ಭಾರತ್ ಜೋಡೋ ಮತ್ತು ಭಾರತ್ ಜೋಡೋ ನ್ಯಾಯ ಯಾತ್ರೆಗಳ ಸಮಯದಲ್ಲಿ ಬಿಲಿಯನೇರ್ ಕೈಗಾ-ರಿಕೋದ್ಯಮಿಗಳಂತಹ ಸಾಲ ಮನ್ನಾದಂತೆ ಸಾಲ ಮನ್ನಾ ಏಕೆ ಸಿಗುತ್ತಿಲ್ಲ ಅಥವಾ ಕೃಷಿ ಉತ್ಪನ್ನಗಳಿಗೆ ಕನಿಷ್ಠ ಬೆಂಬಲ ಬೆಲೆ ಲಾಭ ಹೇಗೆ ಸಿಗುತ್ತಿಲ್ಲ ಎಂದು ರೈತರು ಕೇಳಿದರು. ಎಂಎಸ್‌ಪಿಗೆ ಕಾನೂನುಬದ್ಧ ಖಾತರಿ ನೀಡುತ್ತೇವೆ ಎಂದು ರಾಹುಲ್ ಗಾಂಧಿ ಹೇಳಿದರು.

## ಉತ್ತಮ ಪ್ರಜಾಕೀಯ ಪಕ್ಷ ದಿಂದ ಬೆಳಗಾವಿ ಲೋಕಸಭಾ ಕ್ಷೇತ್ರಕ್ಕೆ ಮೊದಲ ನಾಮಪತ್ರ ಸಲ್ಲಿಕೆ

ಬೆಳಗಾವಿ: ಕರ್ನಾಟಕ ರಾಜ್ಯದ ಎರಡನೇ ಹಂತದ ಚುನಾವಣೆ ಮೇ 7ರಂದು ಮತದಾನ ಪ್ರಕ್ರಿಯೆ ನಡೆಯಲಿದ್ದು ಏಪ್ರಿಲ್ 12 ರಿಂದ ಚುನಾವಣೆ ನಾಮಂಕನ ಪ್ರಾರಂಭವಾಗಿದೆ.



ಬೆಳಗಾವಿ ಲೋಕಸಭಾ ಮತಕ್ಷೇತ್ರಕ್ಕೆ ಇಂದು ಉತ್ತಮ ಪ್ರಜಾಕೀಯ ಪಕ್ಷ ವತಿಯಿಂದ ಫ್ರೇಮ ಮಲ್ಲಪ್ಪ ಚೌಗುಲೆ ನಾಮಪತ್ರ ಸಲ್ಲಿಸಿದ್ದು ಇದು ಮೊದಲ ನಾಮಪತ್ರ ಸಲ್ಲಿಕೆಯಾಗಿದೆ.

ನಾಮಪತ್ರ ಸಲ್ಲಿಸಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಉತ್ತಮ ಪ್ರಜಾಕೀಯ ಪಕ್ಷ ಕರ್ನಾಟಕದಲ್ಲಿ ಒಂದು ಹೊಸ ರಾಜ-ಕೀಯ ವ್ಯವಸ್ಥೆಯನ್ನು ಸೃಷ್ಟಿ ಮಾಡಲು ಅಸ್ತಿತ್ವಕ್ಕೆ ಬಂದಿದೆ. ರಾಜ-ಕೀಯ ಬದಲಾವಣೆ ಹಾಗೂ ಜನರಿಗೆ ತಮ್ಮ ಜವಾಬ್ದಾರಿ ಮತ್ತು ಈ ಭ್ರಷ್ಟ ವ್ಯವಸ್ಥೆಯ ಕುರಿತು ಹೋರಾಡಲು ಉತ್ತಮ ಪ್ರಜಾಕೀಯ ಪಕ್ಷ ಸಿದ್ಧವಾಗಿದೆ ಎಂದು ಹೆಳಿದರು.

ಈ ಸಂದರ್ಭದಲ್ಲಿ ಪ್ರಸಾದ ಹಿರೇಮಠ, ಕೀರ್ತಿ ಸಾಗರ್ ಶೆಟ್ಟಿ, ಬಸವರಾಜ ಗುಮಾಡಿ, ಚಂದ್ರಕಾಂತ ಅಪ್ಪನ್ನವರ, ಶಹಾ ಪೈಸನ್ ನಾಯಕ,ರಾಜು ಕಲ್ಪತ್ರಿ , ಶೀತಲ್ ಶಿವರಾಜ್ ರಾಮಾಪುರೆ ಕುಮಾರ್ ಗೂಡ್ಯಾಹಾಳ,ಗೂಡ್ಯಾಹಾಳ ಮುತ್ತಪ್ಪ, ಮುಂತಾದವರು ಉಪಸ್ಥಿತ-ರಿದ್ದರು.

## ಪ್ರಧಾನಿ ಮೋದಿಗೆ ಬಹಿರಂಗ ಸವಾಲು ಹಾಕಿದ ಖರ್ಗೆ





ಕಲಬುರಗಿ: ನಾನು ಕೇಂದ್ರ ಸಚಿವನಾಗಿದ್ದ ವೇಳೆ ಕಲಬುರಗಿ ಭಾಗಕ್ಕೆ ಮಾಡಿದ ಅಭಿವೃದ್ಧಿ ಕಾರ್ಯಗಳಲ್ಲಿ ಶೇ 10 ರಷ್ಟು ಕೆಲಸ ಮಾಡಿದ್ದರೆ, ಪ್ರಧಾನಿ ನರೇಂದ್ರ ಮೋದಿ ಅವರಿಗೆ ಶಹಬ್ಬಾಶ್ ಗಿರಿ ಹೇಳುತ್ತೇನೆ ಎಂದು ರಾಜ್ಯ ಸಭೆ ವಿರೋಧ ಪಕ್ಷದ ನಾಯಕ ಹಾಗೂ ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ ಬಹಿರಂಗ ಸವಾಲು ಹಾಕಿದರು.

ಲೋಕಸಭಾ ಚುನಾವಣೆ ಹಿನ್ನೆಲೆ ಶುಕ್ರವಾರ ಕಾಂಗ್ರೆಸ್ ಅಭ್ಯರ್ಥಿ ರಾಧಾಕೃಷ್ಣ ದೊಡ್ಡಮನಿ ಅವರು ನಾಮಪತ್ರ ಸಲ್ಲಿಸಿದ ನಂತರ ಎನ್ ವಿ ಕಾಲೇಜು ಮೈದಾನದಲ್ಲಿ ನಡೆದ ಸಾರ್ವಜನಿಕ ಸಭೆಯಲ್ಲಿ ಮಾತನಾಡಿದ ಖರ್ಗೆ ಅವರು, ಕೇಂದ್ರ ಸರ್ಕಾರ ಹಾಗೂ ಪ್ರಧಾನಿ ಅವರನ್ನು ತೀವ್ರವಾಗಿ ತರಾಟೆಗೆ ತೆಗೆದುಕೊಂಡರು.

ಕಲಬುರಗಿಗೆ ಮೋದಿ ಅವರು ಇಲ್ಲಿಗೆ ಬಂದು ಹೋಗಿದ್ದಾರೆ. ಅವರು ಬಂದು ಹೋಗುವುದಕ್ಕೆ ನಮ್ಮ ಅಭ್ಯಂತರ ಇಲ್ಲ. ಆದರೆ, ತಮ್ಮ ಹತ್ತು ವರ್ಷಗಳ ಅವಧಿಯಲ್ಲಿ ಈ ಭಾಗಕ್ಕೆ ಏನು ಕೊಟ್ಟಿದ್ದಾರೆ ಹೇಳಬೇಕಿತ್ತು ಎಂದು ಆಗ್ರಹಿಸಿದರು.

ನಾನು ಕಲಬುರಗಿ ಲೋಕಸಭಾ ಕ್ಷೇತ್ರದಿಂದ ಸಂಸದನಾಗಿ, ಸಚಿವನಾಗಿ ಸಿಕ್ಕಿರುವ ಅವಧಿಯಲ್ಲಿ ಜಿಲ್ಲೆಯ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಕೆಲಸ ಮಾಡಿದ್ದೇನೆ.

ಅದೇ ರೀತಿಹತ್ತು ವರ್ಷದಲ್ಲಿ ಮೋದಿ ಏನು ಅಭಿವೃದ್ಧಿ ಮಾಡಿದ್ದಾರೆ ಹೇಳಲಿ ಎಂದು ಖರ್ಗೆ ಪ್ರಶ್ನಿಸಿದರು. ನನ್ನ ಅವಧಿಯಲ್ಲಿ ಮಂಜೂರಾಗಿದ್ದ ರೇಲ್ವೆ ವಲಯ ಯೋಜನೆ ವಾಪಸ್ ಹೋಯಿತು. ನನ್ನ ಮೇಲೆ ಏನು ಸಿಟ್ಟು ಗೊತ್ತಿಲ್ಲ ನಮ್ಮ ಮನವಿಯನ್ನು ಪುರಸ್ಕ-ರಿಸಲಿಲ್ಲ ಎಂದು ಖರ್ಗೆ ಅವರು ಬೇಸರ ಹೊರಹಾಕಿದರು.

ತಮ್ಮ ಅವಧಿಯಲ್ಲಿ ಕೈಗೊಂಡ ಅಭಿವೃದ್ಧಿ ಕೆಲಸಗಳ ಪಟ್ಟಿ ನೀಡಿದ ಖರ್ಗೆ, ರಾಷ್ಟ್ರೀಯ ಹೆದ್ದಾರಿ, ಕೇಂದ್ರಿಯ ವಿಶ್ವವಿದ್ಯಾಲಯ ಸ್ಥಾಪಿಸಿದ್ದೇನೆ. ಮೂವತ್ತೇಳು ಹೊಸ ರೈಲು ಓಡಿಸಿದ್ದೇನೆ. ಜವಳಿ ಪಾರ್ಕ್ ಮಂಜೂರು ಮಾಡಿಸಿದ್ದೇವೆ.

ಕಲಬುರಗಿಯಲ್ಲಿ ಇಎಸ್ ಐ ಆಸ್ಪತ್ರೆ ಕಟ್ಟಿದ್ದೇವೆ. ಇವುಗಳನ್ನು ನೀವು ಮಾಡಿ ಎಂದು ನನಗೆ ಯಾರೂ ಹೇಳಿರಲಿಲ್ಲ. ಆದರೆ ನಮ್ಮ ಭಾಗದ ಅಭಿವೃದ್ಧಿಗಾಗಿ ಕೆಲಸ ಮಾಡಿದ್ದೇನೆ

ಈಗ ಓಟು ಕೇಳುತ್ತಿದ್ದೇನೆ. ಅಭಿವೃದ್ಧಿ ಆಗಬೇಕೆಂದರೆ ಕಾಂಗ್ರೆಸ್ ಗೆ ಮತ ನೀಡಿ, ಕಳೆದ ಸಲದ ಸೋಲಿನ ಸೇಡು ತೀರಿಸಿಕೊಳ್ಳಿ ಎಂದು ಮತದಾರರಿಗೆಮನವಿ ಮಾಡಿಕೊಂಡರು.

ಬಿಜೆಪಿಯವರು ಈಗ ಎಲ್ಲೆಡೆ ಮೋದಿ ಗ್ಯಾರಂಟಿ ಎಂದು ಸುಳ್ಳು ಹೇಳುತ್ತಿದ್ದಾರೆ. ಮೊದಲು ಜನರಿಗೆ ಮೋದಿ ಗ್ಯಾರಂಟಿ ಎಂದರೆ ಏನು ಎಂಬುದನ್ನು ಬಹಿರಂಗಪಡಿಸಬೇಕು ಎಂದು ಒತ್ತಾಯಿಸಿದರು.

ನಾವು ರಾಜ್ಯದಲ್ಲಿ ಜಾರಿಗೆ ತಂದ ಗ್ಯಾರಂಟಿ ಯೋಜನೆಗಳ ರೀತಿಯಲ್ಲೇ ತಮ್ಮ ಗ್ಯಾರಂಟಿ ಎಂದು ಹೇಳುತ್ತಿದ್ದಾರೆ ಆದರೆ ಯಾವ ಗ್ಯಾರಂಟಿ ಎಂದು ಹೇಳಿಲ್ಲ . ಸುಳ್ಳಿಗೆ ಮತ್ತೊಂದು ಹೆಸರೇ ಬಿಜೆಪಿ ಎಂದು ಖರ್ಗೆ ವಾಗ್ದಾಳಿ ನಡೆಸಿದರು.

# ಸುಳ್ಳನ್ನೇ ಸತ್ಯವೆಂದು ಬಿಂಬಿಸುವ ಕಲೆ ಮೋದಿ, ಬಿಜೆಪಿಯವರಿಗಿದೆ: ಸಚಿವ ಸತೀಶ್ ಜಾರಕಿಹೊಳಿ

ರಾಯಬಾಗ: ಪ್ರಧಾನಿ ನರೇಂದ್ರ ಮೋದಿ, ಬಿಜೆಪಿ ನಾಯಕರು ಒಂದೇ ಸುಳ್ಳನ್ನು ನೂರು ಬಾರಿ ಹೇಳುವ ಮೂಲಕ ಸುಳ್ಳನ್ನೇ ಸತ್ಯ ಎಂದು ಬಿಂಬಿಸುವ ಕೆಲಸವನ್ನು ಮೋದಿ ಸೇರಿದಂತೆ ಬಿಜೆಪಿಯವರು ಮಾಡುತ್ತಾರೆ. ಸುಳ್ಳನ್ನೇ ಸತ್ಯ ಎಂದು ಬಿಂಬಿಸುವ ಕಲೆ ಬಿಜೆಪಿಯವರಿಗಿದೆ ಎಂದು ಲೋಕೋಪಯೋಗಿ ಇಲಾಖೆ ಹಾಗೂ ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಅವರು ಹೇಳಿದರು.

ಚಿಕ್ಕೋಡಿ ಲೋಕಸಭೆ ವ್ಯಾಪ್ತಿಯ ಕುಡಚಿ ವಿಧಾನಸಭಾ ಕ್ಷೇತ್ರದ ಹಾರೂಗೇರಿ ಪಟ್ಟಣದಲ್ಲಿ ಕುಡಚಿ ಶಾಸಕ ಮಹೇಂದ್ರ ತಮ್ಮಣ್ಣವರ ಅವರ ನೇತೃತ್ವದಲ್ಲಿ ಹಮ್ಮಿಕೊಂಡಿದ್ದ ಕಾಂಗ್ರೆಸ್ ಕಾರ್ಯಕರ್ತರ ಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪ್ರಧಾನಿ ಮೋದಿಯವರಿಗೆ ಸುಳ್ಳು ಹೇಳುವುದಕ್ಕೆ ಯಾವುದೇ ಮಿತಿ ಇಲ್ಲ. ಪದೆ ಪದೇ ಸುಳ್ಳು ಹೇಳಿ ಜನರನ್ನು ಮುರ್ಖರನ್ನಾಗಿ ಮಾಡಲೂ ಸಾಧ್ಯವಿಲ್ಲ. ಮೋದಿಯವರ ಬುಲೆಟ್ ಟ್ರೈನ್ ದೇಶದಲ್ಲಿ ಇನ್ನು ಓಡುತ್ತಿಲ್ಲ. ಕಪ್ಪು ಹಣ ವಾಪಸ್ ತರಲಿಲ್ಲ. ರೈತರ ಆದಾಯ ದ್ವಿಗುಣವಾಗಲಿಲ್ಲ. ಆದ್ದರಿಂದ ಸರ್ವರ ಅಭಿವೃದ್ಧಿ, ಪ್ರಗತಿ ಕಾಣುವ ಕಾಂಗ್ರೆಸ್ ಪಕ್ಷವನ್ನು ಲೋಕಸಭೆ ಚುನಾವಣೆಯಲ್ಲಿ ಬೆಂಬಲಿಸಬೇಕೆಂದು ತಿಳಿಸಿದರು.

ನಾವು ಚುನಾವಣೆ ಬಂದಾಗ ಅಷ್ಟೇ ಜನರ ಹತ್ತಿರ ಬರಲ್ಲ. ಕಳೆದ 30 ವರ್ಷಗಳಿಂದ ಬೆಳಗಾವಿ ಜಿಲ್ಲೆಯ ಅಭಿವೃದ್ಧಿಗೆ, ನೀರಾವರಿ ಯೋಜನೆಗಳ ನಿರ್ಮಾಣಕ್ಕೆ ಶ್ರಮಿಸುತ್ತಿದ್ದೇವೆ. ಬೇಸಿಗೆ ಸಮಯದಲ್ಲಿ ನಿಮ್ಮ ಭಾಗಕ್ಕೆ ಪ್ರತಿ ವರ್ಷ ಹಿಡಕಲ್ ಡ್ಯಾಮ್ ನಿಂದ ಎರಡು ಟಿಎಂಸಿ ನೀರು ಬಿಡಲು ಎಲ್ಲಾ ರೀತಿ ತಯಾರಿಗಳನ್ನು ಮಾಡಿಟ್ಟುಕೊಳ್ಳುತ್ತೇವೆಂದು ಹೇಳಿದರು.

ಮಾಜಿ ಡಿಸಿಎಂ, ಶಾಸಕ ಲಕ್ಷ್ಮಣ ಸವದಿ ಮಾತನಾಡಿ, ಪ್ರಧಾನಿ ಮೋದಿ ಅಧಿಕಾರಕ್ಕೆ ಬಂದರೆ ದೇಶದ ಎಲ್ಲ ನದಿಗಳ ಜೋಡಣೆ ಮಾಡುತ್ತೇವೆ ಎಂದು ಹೇಳಿದ್ದರು. ಆದರೆ ಇವರಿಗೆ ಕೃಷ್ಣಾ ನದಿಗೆ ನೀರು ಬಿಡಲು ಆಗುತ್ತಿಲ್ಲ. ಕಳೆದ ಹದಿನೈದು ದಿನಗಳಿಂದ ಜೊಲ್ಲೆ ದಂಪತಗಳು ಮಾಹಾರಾಷ್ಟ್ರಕ್ಕೆ ಅಲೆದಾಡುತ್ತಿದ್ದಾರೆ. ಆದರೆ ಇನ್ನುವರೆಗೆ ನೀರು ಬಿಟ್ಟಿಲ್ಲ. ಆದ್ದರಿಂದ ಈ ಭಾಗದ ಜನಕ್ಕೆ ಸಮಸ್ಯೆ ಆಗಬಾರದೆಂದು ಈಗಾಗಲೇ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಅವರು ಹಿಡಕಲ್ ಡ್ಯಾಮ್ ನಿಂದ ಕೃಷ್ಣಾ ನದಿಗೆ ನೀರು ಬಿಡಲು ತಯಾರಿ ನಡೆಸಲು ಸೂಚಿಸಿದಾರೆಂದು ತಿಳಿಸಿದರು.

ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರು ಚಿಕ್ಕೋಡಿ ಕ್ಷೇತ್ರದಿಂದ ಬಹು ಅಂತರದಿಂದ ಗೆಲ್ಲಬೇಕು. ಅವರ ಗೆಲುವಿಗೆ ನಿಮ್ಮ ಸಹಕಾರ ಬೇಕು. ಕೇಂದ್ರದಲ್ಲಿಯೂ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದರೆ




ಬಡವರ ಬಾಗಿಲು ತೆರೆಯುವುದರಲ್ಲಿ ಯಾವುದೇ ಸಂದೇಹ ಬೇಡ. ಮೇ.7ನೇ ತಾರೀಖಿನವರೆಗೆ ನಿಮ್ಮ ಮನೆ ಕೆಲಸ ಬಿಟ್ಟು ಕಾಂಗ್ರೆಸ್ ಅಭ್ಯರ್ಥಿ ಗೆಲುವಿಗೆ ಶ್ರಮಿಸಬೇಕು. ನಮ್ಮ ಅಭ್ಯರ್ಥಿಯನ್ನು ಗೆಲ್ಲಿಸಿದರೆ ಐದು ವರ್ಷಗಳ ಕಾಲ ಅವರು ನಿಮ್ಮ ಸಮಸ್ಯೆಗಳಿಂದ ಸ್ಪಂದಿಸುತ್ತಾರೆಂದು ತಿಳಿಸಿದರು.

ಶಾಸಕ ಮಹೇಂದ್ರ ತಮ್ಮಣ್ಣವರ್ ಮಾತನಾಡಿ, ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಬಿಜೆಪಿ ಸರ್ಕಾರದ ಒಂಬತ್ತು ವರ್ಷಗಳ ಅವಧಿಯಲ್ಲಿ ಭಾರತದ ಸಾಲ ಸುಮಾರು "ಮೂರು ಪಟ್ಟು" ಹೆಚ್ಚಾಗಿದ್ದು, ಈಗ 155 ಲಕ್ಷ ಕೋಟಿ ರೂ.ಗೆ ಏರಿದೆ. ಮೋದಿ ಸರ್ಕಾರದ "ಆರ್ಥಿಕ ದುರುಪಯೋಗ" ಪ್ರಸ್ತುತ ಆರ್ಥಿಕತೆಯ ಸ್ಥಿತಿಗೆ ಕಾರಣವಾಗಿದೆ. 2014 ರಲ್ಲಿ ಮೋದಿ ಅಧಿಕಾರ ವಹಿಸಿಕೊಂಡ ನಂತರ 100 ಲಕ್ಷ ಕೋಟಿ ರೂಪಾಯಿ ಸಾಲ ಮಾಡಲಾಗಿದೆ ಎಂದರು.

ಭಾರತ ದೇಶದಲ್ಲಿ ಕಾಂಗ್ರೆಸ್, ಬಿಜೆಪಿ ಸೇರಿದಂತೆ ವಿವಿಧ ಪಕ್ಷಗಳ ಪ್ರಧಾನಿಗಳು ಆಡಳಿತ ನಡೆಸಿದ್ದಾರೆ. 67 ವರ್ಷಗಳಲ್ಲಿ 14 ಪ್ರಧಾನಿಗಳ ಆಡಳಿತದ ಅವಧಿಯಲ್ಲಿ ಭಾರತದ ಸಾಲ ಕೇವಲ 55 ಲಕ್ಷ ಕೋಟಿ ರೂಪಾಯಿಗಳಾಗಿದ್ದರೆ, ಪ್ರಧಾನಿ ಮೋದಿ ಅವರ ಅವಧಿಯಲ್ಲಿ 100 ಲಕ್ಷ ಕೋಟಿ ರೂಪಾಯಿ ಸಾಲ ಮಾಡಲಾಗಿದೆ. 2014 ರಲ್ಲಿ ಭಾರತದ ಸಾಲ ಕೇವಲ 55 ಲಕ್ಷ ಕೋಟಿ ರೂಪಾಯಿ ಇತ್ತು. ಆದರೆ ಈಗ 155 ಲಕ್ಷ ಕೋಟಿ ರೂಪಾಯಿಗೂ ಸಾಲ ಹೆಚ್ಚಾಗಿದೆ. ಇದಕ್ಕೆ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಬಿಜೆಪಿ ಸರ್ಕಾರವೇ ನೇರ ಹೊಣೆ ಎಂದು ಆರೋಪಿಸಿದರು.

ಇವತ್ತು ಬಿಜೆಪಿಯವರು ಪ್ರಧಾನಿ ಮೋದಿಯವರ ಮುಖ ನೋಡಿ ಮತ ಹಾಕಿ ಎಂದು ಹೇಳುತ್ತಿದ್ದಾರೆ. ಆದರೆ ಪ್ರಧಾನಿ ಮೋದಿ ಮೂಖ ನೋಡಿ ಮತ ಹಾಕಿದರೆ ನಮ್ಮ ಹೊಟ್ಟೆ ತುಂಬಲ್ಲ ಎಂಬುವುದನ್ನು ನಾವು ಅರ್ಥ ಮಾಡಿಕೊಳ್ಳಬೇಕೆಂದು ತಿಳಿಸಿದ ಅವರು, ನಾವು ಮೋದಿ ಅಂತಹ ಪ್ರಧಾನಿಯನ್ನು ಆಯ್ಕೆ ಮಾಡಿಕೊಂಡಿದ್ದು ನಮ್ಮ ದುರ್ದೈವ. ಕೊವಿಡ್ ನಿವಾರಣೆಗೆ ಔಷಧಿಗಳ ಅಗತ್ಯವಿದ್ದ ಸಮಯದಲ್ಲಿ ಮೋದಿಯವರು ಘಂಟೆ ಬಾರಿಸಿ, ಜಾಂಗಟಿ ಬಾರಿಸಿ, ತಪ್ಪಾಳೆ ಬಾರಿಸಿ, ಮನೆಯಲ್ಲಿನ ವಿದ್ಯುತ್ ಆರಿಸಿ ಎಂದು ಜನರನ್ನು ಮೂರ್ಖರನ್ನಾಗಿಸಿದರು. ಅದಕ್ಕೆ ಈ ಬಾರಿ ಲೋಕಸಭೆ ಚುನಾವಣೆಯಲ್ಲಿ ಚಿಕ್ಕೋಡಿ ಲೋಕಸಭೆ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರನ್ನು ಆಯ್ಕೆಗೊಳಿಸುವ ಮೂಲಕ ಮೋದಿ ಆಡಳಿತಕ್ಕೆ ಅಂತ್ಯ ಹಾಡಬೇಕೆಂದು ಕರೆ ನೀಡಿದರು.

ವಿಧಾನಸಭೆ ಚುನಾವಣೆಯಲ್ಲಿ ನನಗೆ 26 ಸಾವಿರ ಹೆಚ್ಚಿನ ಮತಗಳನ್ನು ನೀಡಿ ಆಯ್ಕೆ ಮಾಡಿದ್ದಿರಿ. ಲೋಕಸಭೆ ಚುನಾವಣೆಯಲ್ಲು ಕುಡಚಿ ಕ್ಷೇತ್ರದಿಂದ ಕಾಂಗ್ರೆಸ್ ಅಭ್ಯರ್ಥಿಗೆ 26 ಸಾವಿರಕ್ಕಿಂತ ಹೆಚ್ಚು ಮತಗಳನ್ನು ನೀಡೋಣ. ಇದಕ್ಕೆ ನಿಮ್ಮೆಲ್ಲರ ಸಹಕಾರ ಬೇಕೆಂದು ಮನವಿ ಮಾಡಿದರು.

ಚಿಕ್ಕೋಡಿ ಲೋಕಸಭೆ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಮಾತನಾಡಿ,ಈ ಬಾರಿಯ ಲೋಕಸಭೆ ಚುನಾವಣೆ ನಮ್ಮ ಚುನಾವಣೆ ಅಲ್ಲಾ, ಈ ಚುನಾವಣೆ ಎಲ್ಲಾ ರೈತರ, ಮಹಿಳೆಯರ, ಚಿಕ್ಕೋಡಿ ಕ್ಷೇತ್ರದ ಜನತೆಯ ಚುನಾವಣೆ. ಚಿಕ್ಕೋಡಿ ಲೋಕಸಭೆ ಕ್ಷೇತ್ರದಲ್ಲಿ ಸಾಕಷ್ಟು ಅಭಿವೃದ್ಧಿ ಕೆಲಸಗಳು ಆಗಬೇಕಿದೆ. ಅದಕ್ಕಾಗಿ ನೀವು ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾದ ನನ್ನನ್ನು ಆಯ್ಕೆಗೊಳಿಸುವ ಮೂಲಕ ಬದಲಾವಣೆಯನ್ನು ತನ್ನಿ. ಶ್ರಮಿಕರು, ಮಹಿಳೆಯರು ಸದಾ ಕಾಂಗ್ರೆಸ್ ಪರ ನಿಲ್ಲುತ್ತಾರೆ ಎಂಬ ಭರವಸೆ ನಮಗಿದೆ. ಯುವ ಜನತೆಯ ಪರವಾಗಿ ನಾನು ಸದಾ ನಿಲ್ಲುತ್ತೇನೆ.

ಸ್ಥಳೀಯ ಶಾಸಕರೊಂದಿಗೆ ಚರ್ಚಿಸಿ ನಿಮ್ಮ ಸಮಸ್ಯೆಗಳನ್ನು ನಿವಾರಿಸುತ್ತೇನೆ. ಕಾರಣ ಮಹಿಳಾ ಸಬಲೀಕರಣಕ್ಕೆ ಇನ್ನಷ್ಟು ಶಕ್ತಿ ತುಂಬಲು ನನ್ನನ್ನು ಲೋಕಸಭೆಗೆ ಆಯ್ಕೆ ಮಾಡಬೇಕು ಎಂದು ವಿನಂತಿಸಿದರು.

ಈ ಸಂದರ್ಭದಲ್ಲಿ ಶಾಸಕ ವಿಶ್ವಾಸ ವೈದ್ಯ, ಮಾಜಿ ಶಾಸಕ ಎಸ್.ಬಿ. ಘಾಟಗೆ, ಮಾಜಿ ಸಚಿವ ವೀರಕುಮಾರ ಪಾಟೀಲ, ಚಿಕ್ಕೋಡಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಶ್ರೀ ಲಕ್ಷ್ಮಣರಾವ್ ಚಿಂಗಳೆ, ಸತೀಶ್ ಶುಗರ್ಸ್ ನಿರ್ದೇಶಕ, ಯುವ ನಾಯಕ ರಾಹುಲ್ ಜಾರಕಿಹೊಳಿ, ಕಾಂಗ್ರೆಸ್ ಮುಖಂಡರಾದ ಗಜಾನನ ಮಂಗಸೂಳಿ, ಅರ್ಜುನ ನಾಯಕವಾಡಿ, ನಿರ್ಮಲಾ ಪಾಟೀಲ್ ಸೇರಿದಂತೆ ಕುಡಚಿ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಮುಖಂಡರು, ಸಾವಿರಾರೂ ಕಾರ್ಯಕರ್ತರು, ಮಹಿಳೆಯರು ಉಪಸ್ಥಿತರಿದ್ದರು.

## ಕಾವೇರಿ ನೀರು ದುರುಪಯೋಗ ಮಾಡಿದವರಿಗೆ ಬಿಗ್ ಶಾಕ್: ಲಕ್ಷ, ಲಕ್ಷ ದಂಡ ವಸೂಲಿ



ಬೆಂಗಳೂರು: ಬರಗಾಲದಲ್ಲಿ ಕಾವೇರಿ ನೀರನ್ನು ದುರುಪಯೋಗ ಮಾಡಿದ ಸಿಲಿಕಾನ್ ಸಿಟಿ ಮಂದಿಗೆ ನೀರಾವರಿ ಇಲಾಖೆ ಬಿಗ್ ಶಾಕ್ ನೀಡಿದೆ. ಕುಡಿಯೋ ನೀರನ್ನು ಅನ್ಯ ಕೆಲಸಕ್ಕೆ ಬಳಸಿದ ಬರೋಬ್ಬರಿ 407 ಮಂದಿಗೆ ಜಲಮಂಡಳಿ ದಂಡ ವಿಧಿಸಿದೆ.

ಬೆಂಗಳೂರು ನಗರದಲ್ಲಿ ಕುಡಿಯುವ ನೀರನ್ನು ಮಿತವಾಗಿ ಬಳಸುವಂತೆ ಜಲಮಂಡಳಿ ಕಟ್ಟುನಿಟ್ಟಿನ ಸೂಚನೆ ಕೊಟ್ಟಿದೆ.

ಆದರೂ ವಾಹನಗಳ ಸ್ವಚ್ಛತೆಗೆ, ಕೈದೋಟಕ್ಕೆ, ಕಟ್ಟಡ ನಿರ್ಮಾಣಕ್ಕೆ ಬಳಸಬಾರದು. ಆದರೆ ಕಾವೇರಿ ನೀರಲ್ಲಿ ಕಾರು, ಬೈಕ್ ವಾಶ್ ಮಾಡಿದವರಿಗೆ ಬೆಂಗಳೂರು ಜಲ ಮಂಡಳಿ ದಂಡ ಹಾಕಿದೆ. ದಂಡ ಹಾಕಿದ ಹಣದಿಂದಲೇ ಜಲಮಂಡಳಿಗೆ ಬರೋಬ್ಬರಿ 20 ಲಕ್ಷದ 25 ಸಾವಿರ ರೂಪಾಯಿ ಹಣ ಹರಿದು ಬಂದಿದೆ.

## ಸಿಡಿಲು ಬಡಿದು ಮಹಿಳೆ ದುರ್ಮರಣ: ಧರೆಗುರುಳಿದ 10 ವಿದ್ಯುತ್ ಕಂಬಗಳು

ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಬಿರುಗಾಳಿ ಸಹಿತ ಭಾರಿ ಮಳೆಯಾಗಿದ್ದು, ವಿಜಯಪುರ ಜಿಲ್ಲೆಯಲ್ಲಿ ಸಿಡಿಲಿಗೆ ಮಹಿಳೆಯೊಬ್ಬರು ಬಳಿಯಾಗಿದ್ದಾರೆ.

ಇಂಡಿ ತಾಲೂಕಿನ ತುಂಬಾ ಗ್ರಾಮದಲ್ಲಿ ಸಿಡಿಲು ಬಡಿದು ಮಹಿಳೆ ಮೃತಪಟ್ಟಿದ್ದಾರೆ. 40 ವರ್ಷದ ಭಾರತಿ ಕೆಂಗನಾಳ ಮೃತ ಮಹಿಳೆ.

ಜಮೀನಿನಲ್ಲಿ ಕೃಷಿ ಕೆಲಸ ಮಾಡುತ್ತಿದ್ದಾಗ ಸಿಡಿಲು ಬಡಿದಿದ್ದು, ಮಹಿಳೆ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಇಂದಿ ಗ್ರಾಮೀಣ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

ಇನ್ನು ನಿನ್ನೆ ಕೂಡ ವಿಜಯಪುರದಲ್ಲಿ ಸಿಡಿಲಬ್ಬರದ ಮಳೆಯಾಗಿದ್ದು ಸಿಡಿಲಾರ್ಭಟಕ್ಕೆ 16 ವರ್ಷದ ಬಾಲಕ ಕೊನೆಯುಸಿರೆಳೆದಿದ್ದಾನೆ. ಈ ಘಟನೆ ಬೆನ್ನಲ್ಲೇ ಇಂದು ಮತ್ತೊಂದು ದುರಂತ ಸಂಭವಿಸಿದೆ.

ಇನ್ನು ಧಾರವಾಡ ಜಿಲ್ಲೆಯಲ್ಲಿ ಮಳೆ ಅಬ್ಬರಕ್ಕೆ 10 ವಿದ್ಯುತ್ ಕಂಬಗಳು ಧರೆಗುರುಳಿವೆ.

ಧಾರವಾಡ ಜಿಲ್ಲೆಯ ಕಲಘಟಗಿ ಬಳಿ ಈ ಘಟನೆ ನಡೆದಿದ್ದು, ಅದೃಷ್ಟವಶಾತ್ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ.

## ದೇವನಹಳ್ಳಿ; ಪತ್ನಿ ಮೇಲೆ ಲೈಂಗಿಕ ದೌರ್ಜನ್ಯ: ತಲೆಮರೆಸಿಕೊಂಡಿದ್ದ ಪತಿ ಸೆರೆ



ವಿಜಯಪುರ(ದೇವನಹಳ್ಳಿ): ಪತ್ನಿಯ ಮೇಲೆ ಹಲ್ಲೆ, ಲೈಂಗಿಕ ದೌರ್ಜನ್ಯ ಮತ್ತು ಜಾತಿ ನಿಂದನೆ ಮಾಡಿ ತಲೆಮರೆಸಿಕೊಂಡಿದ್ದ ಆರೋಪಿ ಪತಿಯನ್ನು ಶನಿವಾರ ಬಂಧಿಸಿ, ನ್ಯಾಯಾಂಗಕ್ಕೆ ಒಪ್ಪಿಸಲಾಗಿದೆ.

ಪಟ್ಟಣದ ನಿವಾಸಿ ಪುರುಷೋತ್ತಮ್ ಮತ್ತು ಇವರ ಅಣ್ಣ ಪದ್ಮನಾಭಯ್ಯ ಬಂಧಿತರು.

'ನನ್ನ ಪತಿ ಪುರುಷೋತ್ತಮ್ ?14 ಲಕ್ಷ ಹಣ ಪಡೆದುಕೊಂಡು, ಆರು ವರ್ಷ ನನ್ನ ಜತೆ ಸಂಸಾರ ನಡೆಸಿದ್ದರು. ನಂತರ ನನ್ನ ಜಾತಿಯನ್ನು ನಿಂದಿಸಿ, ಹಲ್ಲೆ ನಡೆಸಿ ಮನೆಯಿಂದ ಹೊರಹಾಕಿದ್ದಾರೆ' ಎಂದು ಆರೋಪಿಸಿ ಶಾರದಾ ಎಂಬುವವರು ಪುರುಷೋತ್ತಮ್ ಮನೆ ಮುಂದೆ ಪ್ರತಿಭಟನೆ ನಡೆಸಿದ್ದರು.

ಬಳಿಕ ಪಟ್ಟಣದ ಠಾಣೆಗೆ ತೆರಳಿ 'ಎರಡು ಮಕ್ಕಳ ಇರುವ ನನಗೆ ಬೆದರಿಕೆ ಹಾಕಿ, ನನ್ನ ಗಂಡನಿಂದ ದೂರ ಮಾಡಿ, ಮದುವೆ ಮಾಡಿಕೊಂಡು, ಮೋಸ ಮಾಡಿದ್ದಾರೆ' ಎಂದು ಕಳೆದ ಮಾರ್ಚ್ 21ರಂದು ದೂರು ಸಲ್ಲಿಸಿದ್ದರು.

ಹಲ್ಲೆ, ಜಾತಿ ನಿಂದನೆ, ಲೈಂಗಿಕ ದೌರ್ಜನ್ಯದಡಿಯಲ್ಲಿ ಪೊಲೀಸರು ದೂರು ದಾಖಲಿಸಿಕೊಂಡಿದ್ದರು. ಪುರುಷೋತ್ತಮ್ ಸೇರಿ ನಾಲ್ವರ ವಿರುದ್ಧ ಪ್ರಕರಣ ದಾಖಲಾಗಿತ್ತು. ಇದರಿಂದ ಇಷ್ಟು ಮಂದಿ ತಲೆ ಮರೆಸಿಕೊಂಡಿದ್ದರು.

ತಲೆ ರೆಸಿಕೊಂಡಿದ್ದ ಪುರುಷೋತ್ತಮ್ ಹಾಗೂ ಮತ್ತೊಬ್ಬ ಆರೋಪಿ ಪದ್ಮನಾಭಯ್ಯ ಅವರು ಬೆಂಗಳೂರಿನ ಗಾಂಧಿನಗರದಲ್ಲಿ ಇರುವ ಕುರಿತು ಖಚಿತ ಮಾಹಿತಿ ಕಲೆ ಹಾಕಿದ್ದ ಪೊಲೀಸರಾದ ನವೀನ್ ಕುಮಾರ್ ಹಾಗೂ ಪ್ರದೀಪ್ ಎರಡು ದಿನಗಳ ಕಾಲ ವಸತಿ ಗೃಹದಲ್ಲಿದ್ದುಕೊಂಡು ಯೋಜನೆ ರೂಪಿಸಿ,ಇಬ್ಬರನ್ನು ಬಂಧಿಸಿ, ಠಾಣೆಗೆ ಕರೆದುಕೊಂಡು ಬಂದು ಮಹಜರಿ ಮಾಡಿ, ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

## ಸಚಿವೆ ಲಕ್ಷ್ಮೀ ವಿರುದ್ಧ ವಿವಾದಾತ್ಮಕ ಹೇಳಿಕೆ ನೀಡಿದ ಸಂಜಯ ಪಾಟೀಲ್



ಬೆಳಗಾವಿ: ಮಾತಿನ ಭರದಲ್ಲಿ ಬಿಜೆಪಿಯ ಮಾಜಿ ಶಾಸಕ ಸಂಜಯ ಪಾಟೀಲ್ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ವಿರುದ್ಧ ವಿವಾದಾತ್ಮಕ ಹೇಳಿಕೆ ನೀಡಿದ್ದಾರೆ.

ಶನಿವಾರ ಬೆಳಗಾವಿ ಗ್ರಾಮೀಣ ವಿಧಾನಸಭಾ ಮತಕ್ಷೇತ್ರದಲ್ಲಿ ಬಿಜೆಪಿಯಿಂದ ಆಯೋಜಿಸಲಾಗಿದ್ದ ಸಮಾವೇಶ ಉದ್ದೇಶಿಸಿ ಮಾತನಾಡಿದ ಸಂಜಯ ಪಾಟೀಲ್, ಬೆಳಗಾವಿ ಗ್ರಾಮೀಣ ಮತಕ್ಷೇತ್ರದಲ್ಲಿ ಮಹಿಳೆಯರುವುದು ನೋಡಿದರೆ ಅವರಿಗೆ ನಿದ್ದೆ ಬರುವುದಿಲ್ಲ. ರಮೇಶ ಜಾರಕಿಹೊಳಿ ಬಂದಿರುವುದು ನೋಡಿದರೆ ಕಷ್ಟವಾಗುತ್ತದೆ. ಲಕ್ಷ್ಮೀ ಅವರು ಇವತ್ತು ನಿದ್ದೆ ಮಾತ್ರೆ ತೆಗೆದುಕೊಂಡು ಮಲಗಬೇಕು. ಇಲ್ಲದಿದ್ದರೆ ಒಂದು ಎಕ್ಸಟ್ರಾ ಪೆಗ್ ಹೊಡೆಯಬೇಕಾಗುತ್ತದೆ ಎಂದಿರುವುದು ಮಹಿಳೆಯರನ್ನು ಕೆರಳಿಸುವಂತೆ ಮಾಡಿದೆ.

ಬಿಜೆಪಿ ಮಹಿಳೆಯರಿಗೆ ಗೌರವ, ರಕ್ಷಣೆ ಕೊಡುವ ಪಕ್ಷ. ಬಿಜೆಪಿಯ ಮಾಜಿ ಶಾಸಕ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ವಿರುದ್ಧ ಹಗುರವಾಗಿ ಮಾತನಾಡಿರುವುದನ್ನು ಮಹಿಳಾ ಕಾಂಗ್ರೆಸ್ ಕಾರ್ಯಕರ್ತರು ಸಂಜಯ ಪಾಟೀಲ್ ಹೇಳಿಕೆಗೆ ತೀವ್ರವಾಗಿ ಖಂಡಿಸಿದ್ದಾರೆ.

## ಬೆಂಗಳೂರು: ನೀರಿನ ಸಮಸ್ಯೆ ಪರಿಹಾರಕ್ಕೆ ವಿದ್ಯಾರ್ಥಿಗಳಿಂದ ಪ್ರಯತ್ನ



ಬೆಂಗಳೂರು: ಪಿಇಎಸ್ ಪಾಲಿಟೆಕ್ನಿಕ್ ಶಿಕ್ಷಣ ಸಂಸ್ಥೆಯು ನೀರಿನ ಸಮರ್ಥ ನಿರ್ವಹಣೆಗೆ ಸಂಬಂಧಿಸಿದಂತೆ ಪಿಇಎಸ್ ವಿಶ್ವವಿದ್ಯಾಲಯದಲ್ಲಿ ಆಯೋಜಿಸಿದ್ದ 'ಐಡಿಯಾಥಾನ್'ನಲ್ಲಿ 120ಕ್ಕೂ ಅಧಿಕ ವಿದ್ಯಾರ್ಥಿಗಳು ವಿನೂತನ ಆಲೋಚನೆಗಳ ಮೂಲಕ ನಗರದ ನೀರಿನ ಸಮಸ್ಯೆ ಪರಿಹರಿಸುವ ಪ್ರಯತ್ನ ಮಾಡಿದರು.

ಈ ಕಾರ್ಯಕ್ರಮದಲ್ಲಿ ವಿವಿಧ ಪಾಲಿಟೆಕ್ನಿಕ್ ಕಾಲೇಜಿನ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಪಿಇಎಸ್ ಪಾಲಿಟೆಕ್ನಿಕ್‌ನ 4ನೇ ಸೆಮಿಸ್ಟರ್ ಕಂಪ್ಯೂಟರ್ ಸೈನ್ಸ್ ವಿದ್ಯಾರ್ಥಿಗಳಾದ ಪುಣ್ಯ ಚಂದ್ರಶೇಖರ್, ಮನಸ್ವಿನಿ ಮತ್ತು ಸಾಯಿಕೃಷ್ಣ ಶರ್ಮಾ ಅವರು ಪ್ರಥಮ ಬಹುಮಾನ ಪಡೆದರು. ಅವರು ನೀರಿನ ಸೋರಿಕೆ ಪತ್ತೆ ಹಚ್ಚುವ ಹಾಗೂ ಅದನ್ನು ತಡೆಯುವ ಐಒಟಿ ತಂತ್ರಜ್ಞಾನ ಆಧಾರಿತ ನಿರ್ವಹಣಾ ವ್ಯವಸ್ಥೆಯ ಪರಿಕಲ್ಪನೆಯನ್ನು ಪ್ರಸ್ತುತಪಡಿಸಿದ್ದರು.

ಪಿಇಎಸ್ ಪಾಲಿಟೆಕ್ನಿಕ್‌ನ 4ನೇ ಸೆಮಿಸ್ಟರ್‌ನ ಮೆಕ್ಯಾನಿಕಲ್ ಎಂಜಿನಿಯರಿಂಗ್‌ನ ನಿತೇಶ್ ಕುಮಾರ್, ಸುಮನ್ ಕೆ.ಟಿ. ಮತ್ತು ಮನೋಜ್ ಕುಮಾರ್ ಅವರು ಅಪಾರ್ಟ್‌ಮೆಂಟ್ ಸಂಕೀರ್ಣದಲ್ಲಿ ಉಪ ರಸ್ತೆಗಳು ಮತ್ತು ಆಂತರಿಕ ರಸ್ತೆಗಳಿಗಾಗಿ ಪರ್ವಿಯಸ್ ಕಾಂಕ್ರೀಟ್‌ನ ಕಲ್ಪನೆ ರೂಪಿಸಿದ್ದರು. ಅವರು ಎರಡನೇ ಬಹುಮಾನ ಪಡೆದರು.

## ನಮ್ಮ ಮೆಟ್ರೋ ಸ್ಕೈವಾಕ್'ನಲ್ಲಿ ಕಾಲೇಜು ಯುವತಿಯೊಂದಿಗೆ ಅನುಚಿತ ವರ್ತನೆ: ಪ್ರಕರಣ ದಾಖಲು

ಬೆಂಗಳೂರು: ಕುಡಿದ ಮತ್ತಿನಲ್ಲಿದ್ದ ವ್ಯಕ್ತಿಯೊಬ್ಬ ನಮ್ಮ ಮೆಟ್ರೋ ಸ್ಕೈವಾಕ್'ನಲ್ಲಿ ಕಾಲೇಜು ಯುವತಿಯೊಂದಿಗೆ ಅನುಚಿತವಾಗಿ ವರ್ತಿಸಿರುವ ಘಟನೆಯೊಂದು ಮೆಟ್ರೋದ ಪರ್ಪಲ್ ಲೈನ್‌ನಲ್ಲಿರುವ ಬೆನ್ನಿಗಾನಹಳ್ಳಿ ನಿಲ್ದಾಣದ ಬಳಿ ನಡೆದಿದೆ.

ಸ್ಕೈವಾಕ್‌ನಲ್ಲಿ ಗುರುವಾರ ಮಧ್ಯಾಹ್ನ 32 ವರ್ಷದ ವ್ಯಕ್ತಿಯೊಬ್ಬ ಕಾಲೇಜು ವಿದ್ಯಾರ್ಥಿನಿಯೊಂದಿಗೆ ಅನುಚಿತವಾಗಿ ವರ್ತಿಸಿದ್ದಾನೆ.

ಈ ಸಬಂಧ ವಿದ್ಯಾರ್ಥಿನಿ ರಾಮಮೂರ್ತಿ ನಗರದ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದು, ಎಫ್ಐಆರ್ ಬೇಡ ಎಂದು ವಿದ್ಯಾರ್ಥಿನಿ ಹೇಳಿದ ಹಿನ್ನೆಲೆಯಲ್ಲಿ ಎಚ್ಚರಿಕೆ ನೀಡಿ ಆರೋಪಿಯನ್ನು ಬಿಡುಗಡೆ ಮಾಡಲಾಗಿದೆ ಎಂದು ತಿಳಿದುಬಂದಿದೆ.

ಗುರುವಾರ ಮಧ್ಯಾಹ್ನ 2 ಗಂಟೆಯ ಸುಮಾರಿಗೆ ವಿದ್ಯಾರ್ಥಿನಿ ಹಳೇ ಮದ್ರಾಸ್ ರಸ್ತೆ ದಾಟಲು ಫುಟ್ ಓವರ್ ಬ್ರಿಡ್ಜ್ ನಲ್ಲಿ ನಡೆದು ಸಾಗುತ್ತಿದ್ದಾಗ (ಬಿ ಪ್ರವೇಶದ್ವಾರದಿಂದ ಎ ಪ್ರವೇಶದ್ವಾರದವರೆಗೆ) ಈ ಘಟನೆ ಸಂಭವಿಸಿದೆ.

# "ನನ್ನ ತಂದೆ-ತಾಯಿಯರಿಗೆ ನಾನು 14 ನೇ ರತ್ನ" ಎನ್ನುತ್ತಿದ್ದ ಅಂಬೇಡ್ಕರು



ಇಂದು ಡಾ.ಬಿ.ಆರ್.ಅಂಬೇಡ್ಕರ್ ರವರ ಜನ್ಮದಿನ, ಇವರು ಸಾಮಾಜಿಕ ಸಮಾನತೆ, ಅಸ್ಪ್ರುಶ್ಯತಾ ನಿವಾರಣೆಗಾಗಿ ಹೋರಾಡಿದ ಮಹಾನ್ ಭಾರತೀಯ ನಾಯಕರಲ್ಲೊಬ್ಬರು. ಭಾರತದ ಸಂವಿಧಾನವನ್ನು ರಚಿಸಿದ ಇವರನ್ನು ಸಂವಿಧಾನ ಶಿಲ್ಪಿ ಎಂದು ಕರೆಯುತ್ತಾರೆ. ಡಾ ಬಿ. ಆರ್ ಅಂಬೇಡ್ಕರ್ ರವರು 14 ನೇ ಏಪ್ರಿಲ್ 1891 ಮಧ್ಯಪ್ರದೇಶದ ಮಾಹೋ ಎಂಬ ಮಿಲಿಟರಿ ಕ್ಯಾಂಪ್ ನಲ್ಲಿ ಹುಟ್ಟಿದರು. ಅಂಬೇಡ್ಕರ್ ರವರು ಮೂಲತಃ ಮಹಾರಾಷ್ಟ್ರದ ರತ್ನಗಿರಿ ಜಿಲ್ಲೆಯ ಖೇಡಾ ತಾಲ್ಲೂಕಿನ ಅಂಬೆವಾಡ ಗ್ರಾಮದವರು. ಇವರು ಮಹಾರ ಜಾತಿಯಲ್ಲಿ ಹುಟ್ಟಿದರು. ಈ ಜಾತಿಯವರು ಹೆಚ್ಚಿನ ಜನ ಬ್ರಿಟಿಷ್ ಸರ್ಕಾರದ ಮಿಲಿಟರಿ ಸೇವೆಯಲ್ಲಿ ಉದ್ಯೋಗಕ್ಕಾಗಿ ಸೇರುತ್ತಿದ್ದರು. ಇವರ ಅಜ್ಜ ಮಾಲೋಜಿ ಸಕ್ಪಾಲ್ ಅವರು ಬ್ರಿಟಿಷ್ ಈಸ್ಟ್ ಇಂಡಿಯಾ ಕಂಪನಿ ಬಾಂಬೆ ಸೇನೆಯಲ್ಲಿ ಸೇರಿ, ಹವಾಲ್ದಾರರಾಗಿ ನಿವೃತ್ತಿ ಹೊಂದಿದ್ದರು. ಇವರು ಆ ಕಾಲಕ್ಕೆ 19 ಮೆಡಲ್ ಗಳನ್ನು ಗಳಿಸಿದ್ದರು. ಇವರಿಗೆ ಇಬ್ಬರು ಮಕ್ಕಳು ರಾಮಜಿ ಸಕ್ಪಾಲ್, ಮೀರಾ ಸಕ್ಪಾಲ್. ರಾಮಜಿ ಸಕ್ಪಾಲ್ ಅವರ ಹೆಂಡತಿ ಭೀಮಬಾಯಿ. ರಾಮಜಿ ಮತ್ತು ಭೀಮಬಾಯಿ ರವರು ಇಬ್ಬರು ಕಷ್ಟ ಸಹಿಷ್ಣುಗಳಾದ ಸತಿಪತಿಗಳಾಗಿದ್ದರು. ಇವರಿಗೆ 14 ಮಕ್ಕಳು ಹುಟ್ಟಿದರು. ಈ 14ನೇ ಮಗುವೇ ಅಂಬೇಡ್ಕರ್. ಅಂಬೇಡ್ಕರ್ ಅವರ ಮೊದಲ ಹೆಸರು ಭೀಮರಾವ್ ಆಗಿತ್ತು. ಡಾ. ಅಂಬೇಡ್ಕರರು ನಾನು ನನ್ನ ತಂದೆ ತಾಯಿಯರಿಗೆ 14 ನೇ ರತ್ನನಾಗಿದ್ದೇನೆ ಎಂದು ಹೆಮ್ಮೆಯಿಂದ ಹೇಳಿಕೊಳ್ಳುತ್ತಿದ್ದರು. ಶಾಲೆಗೆ ಸೇರುವ ಸಂಧರ್ಭದಲ್ಲಿಯೇ ಇವರಿಗೆ ಅಸ್ಪ್ರುಶ್ಯತೆಯ ಅನುಭವವಾಗುತ್ತದೆ. ಆದರೂ ಎಲ್ಲವನ್ನು ಮೆಟ್ಟಿನಿಂತು, ಅವಮಾನಗಳನ್ನು ಎದುರಿಸುತ್ತಾ ಶಿಕ್ಷಣವನ್ನು ಪಡೆಯುವದನ್ನು ಮುಂದುವರೆಸುತ್ತಾರೆ. ಹೀಗೆ ಅತೀ ಹೆಚ್ಚು ಓದಿದ ವಿಶ್ವದ ಮಹಾನಾಯಕ ಎಂಬ ಕೀರ್ತಿಯನ್ನೂ ಸಹ ಇವರು ಪಡೆದುಕೊಳ್ಳುತ್ತಾರೆ.

ಸ್ವತಂತ್ರ ನಂತರ:- 1947 ರಲ್ಲಿ ಕಾನೂನು ಮಂತ್ರಿಯಾಗಿ ಪಂಡಿತ ಜವಹಾರಲಾಲ್ ನೆಹರೂ ಮಂತ್ರಿ ಮಂಡಲದಲ್ಲಿ ಇವರು ಪ್ರಧಾನಮಂತ್ರಿಗೆ ಆತ್ಮೀಯರಾಗುತ್ತಾರೆ. ನೆಹರೂ ಕಲ್ಪಿಸಿದ ಸಮಾಜವಾದಿ ಪ್ರಜಾಸತ್ತಾತ್ಮಕ ರಾಜ್ಯವ್ಯವಸ್ಥೆ ಡಾ.ಅಂಬೇಡ್ಕರ್ ರವರಿಂದಲೇ ಪ್ರಭಾವಿತರಾಗಿದ್ದರು. ನೆಹರೂರವರು ಹಾಕಿಕೊಂಡ ಪಂಚ ವಾರ್ಷಿಕ ಯೋಜನೆಗೆ ಅಂಬೇಡ್ಕರರವರು ಮಾರ್ಗದರ್ಶಿಗಳಾಗಿದ್ದರು. ಮತ್ತು ಭಾಕ್ರಾನಂಗಲ್ ಅಣೆಕಟ್ಟು ಕಟ್ಟಲು ಸಲಹೆ ನೀಡಿದವರೆ ಅಂಬೇಡ್ಕರರವರು. ಇವರು ಭಾರತದ ನೀರಾವರಿ ಯೋಜನೆಯ ಜನಕನಾಗಿದ್ದು, ಉತ್ತರ ಭಾರತ ಮತ್ತು ದಕ್ಷಿಣ ಭಾರತ ನದಿಗಳ ಜೋಡಣೆಗೆ 1952 ರಲ್ಲಿಯೇ ಸಲಹೆ ನೀಡಿದರು. ನೆಹರೂರವರು ವಿದೇಶಿ ಗಣ್ಯರಿಗೆ ಇವರನ್ನು ಪರಿಚಯಿಸುವಾಗ "ಇವರು ಡಾ ಅಂಬೇಡ್ಕರ್, ನನ್ನ ಮಂತ್ರಿ ಮಂಡಲದ ವಜ್ರವಾಗಿದ್ದಾರೆ" ಎಂದು ಪರಿಚಯಿಸುತ್ತಿದ್ದರು.

**ಮಹಿಳಾ ಹಿಂದೂ ಕೋಡ್-ಬಿಲ್:-** ಪಾರ್ಲಿಮೆಂಟನ ಸಭೆಯಲ್ಲಿ ಮಹಿಳೆಗೆ ಹಿಂದೂ ಕೋಡ್-ಬಿಲ್ ನಲ್ಲಿ ಕೇಳಲಾದ ಹಕ್ಕುಗಳನ್ನು ನಿರಾಕರಿಸಿತು. ಹಿಂದೂ ಕೋಡ್-ಬಿಲ್ ನಲ್ಲಿ ಪ್ರಮುಖ ನಾಲ್ಕು ಅಂಶಗಳು ಇದ್ದವು 1) ಮಹಿಳೆಯು ಕೂಡ ತನ್ನ ಪತಿಯನ್ನು ಆಯ್ಕೆಮಾಡುವ ಹಕ್ಕು. 2) ಪುರುಷರ ಹಾಗೆ ವಿಚ್ಛೇಧಿಸುವ ಹಕ್ಕು. 3) ತಂದೆಯ ಆಸ್ತಿಯಲ್ಲಿ ಗಂಡುಮಕ್ಕಳ ಸಮನಾಗಿ ಹೆಣ್ಣುಮಗಳಿಗೂ ಆಸ್ತಿ ಹಕ್ಕು. 4)ಪಿತ್ರಾರ್ಜಿತ ಆಸ್ತಿಯಲ್ಲಿ ಗಂಡು ಮಕ್ಕಳ ಜೊತೆಯಲ್ಲಿ ಹೆಣ್ಣುಮಕ್ಕಳಿಗೂ ಮತ್ತು ವಿಧವೆ ಸೊಸೆಗೂ ಸಮ ಪಾಲು ಹಕ್ಕು. ಕೊನೆಗೆ ಹಿಂದೂ ಕೋಡ್ ಬಿಲ್ ಪಾಸಾಗದ ಕಾರಣ ಅಂಬೇಡ್ಕರರವರು ಕಾನೂನು ಮ್ಯಾಟ್ರಿ ಪದವಿಗೆ ರಾಜೀನಾಮೆ ನೀಡಿದರು.

**ಬೌದ್ಧ ಧರ್ಮ ಸ್ವೀಕಾರ:-** 1951 ರಲ್ಲಿ ಜಾಗತಿಕ ಬೌದ್ಧ ಸಮ್ಮೇಳನ ರಂಗುನದಲ್ಲಿ ನಡೆಯಿತು ಅದರಲ್ಲಿ ಭಾಗವಹಿಸಿದರು. 1954ರಲ್ಲಿ ಕಟ್ಮೊಂಡಾದಲ್ಲಿ ನಡೆದ ಜಾಗತಿಕ ಬೌದ್ಧ ಸಮ್ಮೇಳನದಲ್ಲಿ ಭಾಗವಹಿಸಿದರು. 1951ರಲ್ಲಿ ಭಾರತೀಯ ಬೌದ್ಧ ಸಂಘಟನೆಯಲ್ಲಿ ಬುದ್ಧ ಮತ್ತು ಮಾರ್ಕ್ಸ ಕುರಿತು ಪ್ರಬಂಧ ಮಂಡಿಸಿದರು. 1955ರಲ್ಲಿ ಭಾರತೀಯ ಬೌದ್ಧ ಮಹಾಸಭೆ ಸ್ಥಾಪಿಸಿದರು. ಬದುಕಿನ ಕೊನೆಯ ದಿನಗಳಲ್ಲಿ ಡಾ.ಅಂಬೇಡ್ಕರರು ಬೌದ್ಧ ಧರ್ಮ ಸ್ವೀಕಾರದ ನಿರ್ಧಾರಮಾಡಿ ಅಕ್ಟೊಬರ್ 14 1956 ರಲ್ಲಿ ತನ್ನ 5 ಲಕ್ಷ ಅನುಯಾಯಿಗಳೊಂದಿಗೆ ಪತ್ನಿ ಸವಿತಾ ಅಂಬೇಡ್ಕರ್ ಜೊತೆಗೆ ನಾಗ ಜನತೆಯ ಮೂಲ ನಾಡಾದ ನಾಗಪುರದಲ್ಲಿ ಬೌದ್ಧ ಧರ್ಮ ಸ್ವೀಕಾರಮಾಡಿದರು. ಇವರಿಗೆ ಬರ್ಮಾದ ಬೌದ್ಧ ಬಂತೆ, ವೀರ ಚಂದ್ರಮಣಿ ಬೌದ್ಧಧೀಕ್ಷೆ ನೀಡಿದರು. ಮುಂದೆ ಡಿಸೆಂಬರ್ 6 1956 ರಲ್ಲಿ ದೆಹಲಿಯ ತಮ್ಮ ನಿವಾಸದಲ್ಲಿ ಕೊನೆಯುಸಿರೆಳೆದರು. ಡಿಸೆಂಬರ್ 7 ಕ್ಕೆ ಮುಂಬಯಿಯ ದಾದರಿನಲ್ಲಿ ಬೌದ್ಧ ಧರ್ಮದ ನಿಯಮದ ಪ್ರಕಾರ ಮಹಾಪರಿನಿರ್ವಾಣದ ವಿಧಿಯನ್ನು ಅಂತ್ಯಕ್ರಿಯೆಯಲ್ಲಿ ಮಾಡಲಾಯಿತು.

**ಗೌರವಗಳು:-** 1950 ರಲ್ಲಿ ಅಮೆರಿಕಾದ ಕೊಲಂಬಿಯಾ ವಿಶ್ವವಿದ್ಯಾಲಯ ಭಾರತ ಸಂವಿಧಾನ ರಚಿಸಿದ್ದಕ್ಕಾಗಿ ಇವರನ್ನು ಸಂವಿಧಾನ ಶಿಲ್ಪಿ , ಆಧುನಿಕ ಭಾರತದ ನಿರ್ಮಾಪಕ, ಸಮಾಜದ ಪ್ರವರ್ತಕ, ಎಂದು ಪರಿಗಣಿಸಿ "ಡಾಕ್ಟರ್ ಆಫ್ ಲಾ" ಪದವಿ ನೀಡಿತು, 1953ರಲ್ಲಿ ಆಂಧ್ರಪ್ರದೇಹದ ಉಸ್ಮಾನಿಯ ವಿಶ್ವವಿದ್ಯಾಲಯ ಸಂವಿಧಾನದ ಸೇವೆಯನ್ನು ಪರಿಗಣಿಸಿ "ಡಾಕ್ಟರ್ ಆಫ್ ಲಿಟರೇಚರ" ಎಂಬ ಗೌರವ ಪದವಿಯನ್ನು ನೀಡಿತು. 1951ರಿಂದ ರಾಜ್ಯಸಭಾ ಸದಸ್ಯರಾಗಿ ಆಯ್ಕೆಯಾದರು ಸಕ್ರಿಯ ರಾಜಕೀಯದಿಂದ ದೂರ ಉಳಿದರು.

**ಡಾ.ಬಿ.ಆರ್ ಅಂಬೇಡ್ಕರವರ ನುಡಿಮುತ್ತುಗಳು:-**

1) ಧರ್ಮ ಇರಬೇಕಾದುದು ತತ್ವವಾಗಿ, ಹೊರತು ನಿಯಮಾವಳಿಯಾಗಿ ಅಲ್ಲ. ಅದು ಕಡ್ಡಾಯ ನಿಯಮಗಳಾಗಿ ಮಾರ್ಪಾಡಾದ ಕೂಡಲೇ ಧರ್ಮ ಎನಿಸುವ ಅರ್ಹತೆ ಕಳೆದುಕೊಳ್ಳುತ್ತದೆ. ನೈಜ ಧರ್ಮದ ಆಂತರಂಗಿಕ ಸ್ಫೂರ್ತಿಯನ್ನೇ ಕಳೆದುಕೊಳ್ಳುತ್ತದೆ.

2) ಸಾಗರದಲ್ಲಿ ಒಂದಾಗಿ ಅಸ್ತಿತ್ವ ಕಳೆದುಕೊಳ್ಳುವ ಹನಿಯಂತಲ್ಲ ಮನುಷ್ಯ. ಆತ ಸಮಾಜದಲ್ಲಿ ಬೆರೆತಿದ್ದರೂ ತನ್ನ ಅನನ್ಯತೆ ಕಾಪಾಡಿಕೊಳ್ಳುತ್ತಾನೆ. ಆತ ಸಮಾಜದ ಬೆಳವಣಿಗೆಗಾಗಿ ಹುಟ್ಟುವುದಲ್ಲ, ತನ್ನ ಬೆಳವಣಿಗೆಗಾಗಿ.

3) ಪ್ರಜಾಪ್ರಭುತ್ವ ಎಂದರೆ ಕೇವಲ ಆಡಳಿತದ ವಿಧಾನವಲ್ಲ. ಅದೊಂದು ಜೊತೆಯಾಗಿ ಬಾಳುವ ವಿಧಾನ, ಸಮಗ್ರ ಬದುಕಿನ ಅನುಭವ. ಜೊತೆಯಲ್ಲಿರುವ ಮನುಷ್ಯರಿಗೆ ಘನತೆ, ಗೌರವ ನೀಡುವ ಕ್ರಮ.

4) ನಾನು ಒಂದು ಸಮುದಾಯದ ಬೆಳವಣಿಗೆಯನ್ನು ಅಳೆಯುವುದು ಅಲ್ಲಿರುವ ಮಹಿಳೆಯರು ಎಷ್ಟು ಪ್ರಮಾಣದ ಪ್ರಗತಿ ಸಾಧಿಸಿದ್ದಾರೆ ಎಂಬುದರ ಮೇಲೆ.

5) ನಾವು ನಮ್ಮ ಹಕ್ಕುಗಳಿಗಾಗಿ ಹೋರಾಡಲೇಬೇಕು. ಅದರಿಂದಲೇ ನಮಗೆ ಅಧಿಕಾರ, ಘನತೆ ದೊರೆಯುತ್ತದೆ. ಹೋರಾಡದವನಿಗೆ ಏನೂ ದೊರೆಯುವುದಿಲ್ಲ.

**ಪ್ರಜಾಪ್ರಭುತ್ವದ ಕಲ್ಪನೆ:-** ಡಾ.ಬಿ.ಆರ್.ಅಂಬೇಡ್ಕರ ಅವರ ಪ್ರಜಾಪ್ರಭುತ್ವದ ಕಲ್ಪನೆ ಹೇಗಿತ್ತು ಮತ್ತು ಅದರಿಂದ ಅವರು ಏನನ್ನು ನಿರೀಕ್ಷಿಸಿದ್ದರು ಅನ್ನುವುದರ ಬಗ್ಗೆ ಈ ಉಲ್ಲೇಖವು ಬಹಳಷ್ಟು ತಿಳಿಸುತ್ತದೆ. ಕ್ರಾಂತಿಕಾರಕ ಬದಲಾವಣೆಗಳನ್ನು ಕೇವಲ ಕ್ರಾಂತಿಯ ಮೂಲಕವೇ ತರಬಲ್ಲೆವು ಮತ್ತು ಕ್ರಾಂತಿ ಎಂದರೆ ರಕ್ತಪಾತ ಅನ್ನುವುದು ಸಾಮಾನ್ಯ ತಿಳಿವಳಿಕೆ. ಅಲ್ಲದೆ ಕ್ರಾಂತಿಗಳು ಮತ್ತು ಪ್ರಜಾಪ್ರಭುತ್ವಗಳು ಪರಸ್ಪರ ಹೊಂದಣಿಕೆಯಾಗಲಾರವು ಎಂಬ ಗುಪ್ತ ಗುಮಾನಿಯೊ ಇದೆ. ಕ್ರಾಂತಿಯ ಬಗ್ಗೆಯ ಈ ಸಾಮಾನ್ಯ ಭಾವನೆಗಳು ತಾತ್ವಿಕವಾಗಿ ತಪ್ಪು ಎಂದು ಎತ್ತಿ ತೋರಿಸಬಹುದು. ಆ ವಿಷಯ ಬೇರೆ ಹಾಗೆಯೇ, ಪ್ರಜಾಪ್ರಭುತ್ವದ ಬಗ್ಗೆಯೂ ಕೆಲವು ಸಾಮಾನ್ಯ ಭಾವನೆಗಳಿವೆ.

ಕ್ರಮಬದ್ಧ ಚುನಾವಣೆಗಳು, ಅನೇಕ ರಾಜಕೀಯ ಪಕ್ಷಗಳು ಮತ್ತು ಪ್ರತಿ ವ್ಯಕ್ತಿಗೂ ಸಮಾನ ರಾಜಕೀಯ ಮೌಲ್ಯವನ್ನು ನೀಡುವ ಒಂದು ಪ್ರಾತಿನಿಧಿಕ ಸರ್ಕಾರದ ರೂಪ ಅದು ಎಂದು ಪರಿಗಣಿಸಲ್ಪಟ್ಟಿದೆ. ಪ್ರಜಾಪ್ರಭುತ್ವದ ಎದ್ದು ಕಾಣುವ ಸ್ಥೂಲ ಸಂರಚನೆಯ ಮುಖ್ಯ ಶಿಲ್ಪಿ ಎಂದು ಡಾ.ಬಿ.ಆರ್.ಅಂಬೇಡ್ಕರ್ ಅವರು ಪರಿಗಣಿಸಲ್ಪಟ್ಟಿದ್ದರು. ಅಂಬೇಡ್ಕರ ಅವರ ಪ್ರಜಾಪ್ರಭುತ್ವದ ಕಲ್ಪನೆ ತೀರ ವಿಭಿನ್ನ ಸಮಾಜವನ್ನು ಆದರ್ಶ ಸಮಾಜವನ್ನಾಗಿ ತಮ್ಮ ಕಲ್ಪನೆಯ ಸುಖಿರಾಜ್ಯ ವನ್ನಾಗಿ ಬದಲಾಯಿಸಿ, ಸ್ವಾತಂತ್ರ್ಯ, ಸಮಾನತೆ ಮತ್ತು ಭಾತೃತ್ವಗಳನ್ನು ಒಟ್ಟಿಗೆ ಸಾಧಿಸಬಲ್ಲದೆಂಬಂತೆ ಪ್ರಜಾಪ್ರಭುತ್ವವನ್ನು ಅವರು ಕಲ್ಪಿಸಿಕೊಂಡ್ಡಿದರು.

ಪ್ರಜಾಪ್ರಭುತ್ವವೆಂದರೆ ಸರ್ಕಾರದ ಒಂದು ರೂಪವೆಂದು ಅದು ಹುಟ್ಟಿದ ಪ್ರಾಚೀನತೆಯಿಂದ ಇಂದಿನ ಆಧುನಿಕತೆಯವರೆಗೂ ಕಲ್ಪಿಸಿಕೊಳ್ಳಲಾಗಿದೆ. ಆದರೆ ಪ್ರಜಾಪ್ರಭುತ್ವವು ಕೇವಲ ಸರ್ಕಾರದ ಒಂದು ರೂಪವಲ್ಲ. ಅದು ಪ್ರಮುಖವಾಗಿ ಸಹಬಾಳ್ವೆಯ ಸೊಗಸು ಮತ್ತು ಅನುಭವವನ್ನು ಪರಸ್ಪರ ದಟ್ಟೈಸುವ ಒಂದು ಜೋಡಣೆ. ಮೂಲಭೂತವಾಗಿ ಅದು ಸಹವರ್ತಿಗಳೆಡೆಗೆ ತೋರುವ ಗೌರವಾದರ ಭಾವನೆ ಎಂದು ಹೇಳಿದ್ದಾರೆ. ಅವರ ದೃಷ್ಟಿಯಲ್ಲಿ ಪ್ರಜಾಪ್ರಭುತ್ವ ಪ್ರಜಾಸತ್ತಾತ್ಮಕ ಸಮಾಜವನ್ನು ನಿರೀಕ್ಷಿಸುತ್ತದೆ.

ರಾಜಕಾರಣಿಗಳು ಪ್ರಜಾಪ್ರಭುತ್ವವು ಮೂಲಭೂತವಾಗಿ ಸಮಾಜದ ಒಂದು ಸ್ವರೂಪ ಕೇವಲ ಸರ್ಕಾರದ ಮಾದರಿ ಅಲ್ಲ ಅನ್ನುವುದನ್ನು ಗ್ರಹಿಸಲಿಲ್ಲ. ಇದು ಎರಡು ಅಂಶಗಳನ್ನು ಒಳಗೊಂಡಿದೆ.

ಮೊದಲನೆಯದು ಒಂದು ಮನೋಭಾವ, ಸಹವರ್ತಿಗಳಿಗೆ ಗೌರವ ಮತ್ತು ಸಮಾನತೆ. ಎರಡನೆಯದು ಪೆಡಸಾದ ಸಾಮಾಜಿಕ ಅಡೆ-ತಡೆಗಳಿಂದ ಮುಕ್ತ ಸಮಾಜ.ಸಾಮಾಜಿಕ ಪ್ರಜಾಪ್ರಭುತ್ವ ಅನ್ನುವ ಪದ ಸಾಮಾನ್ಯವಾಗಿ ಆರ್ಥಿಕ ಸಂಸ್ಥೆಗಳು ಹಾಗೂ ಬಂಡವಾಳ ಕ್ರಮೇಣ ಸಮಾಜವಾದಕ್ಕೆ ಹೊರಳುತ್ತದೆಂಬ ಫೇಬಿಯನ್ ನಂಬಿಕೆ ಗಳನ್ನು ಒಳಗೊಂಡಿರುತ್ತದೆ.

ಆದರೆ ಅಂಬೇಡ್ಕರ ಅವರ ಪ್ರಕಾರ ಅದು ಶ್ರೇಣೀಕೃತವಲ್ಲದ, ವಿಂಗಡಣೆ ಮತ್ತು ಪ್ರತ್ಯೇಕಗಳಿಲ್ಲದ ಸಮಾಜ. ಅದು ಭಾರತಿಯ ಸಮಾಜ ಮತ್ತು ಅದರ ಜಾತಿಗಳ ವ್ಯವಸ್ಥೆಗೆ ತೀಕ್ಷ್ಣವಾಗಿ ಅನ್ವಯಿಸುತ್ತದೆ. ಹೀಗೆ ಜಗತ್ತಿನ ಅತೀ ದೊಡ್ಡ ಸಂವಿಧಾನ ರಚಿಸಿ ಭಾರತವನ್ನು ಪ್ರಜ್ವಲಿಸುವಂತೆ ಮಾಡಿದ ಇವರಿಗೆ ಕೋಟಿ ಕೋಟಿ ನಮನ.

-ಎನ್.ಎನ್.ಕಬ್ಬೂರ
ಶಿಕ್ಷಕರು ತಾ-ಸವದತ್ತಿ
ಜಿ-ಬೆಳಗಾವಿ
ಮೊಬೈಲ್-9740043452

# ಚುನಾವಣೆ ಬಳಿಕ ರಾಜ್ಯದಲ್ಲಿ ಡಬಲ್ ಇಂಜಿನ್ ಸರ್ಕಾರ ಬರಲಿದೆ: ಶಾಸಕ ರಮೇಶ ಜಾರಕಿಹೊಳಿ

ಬೆಳಗಾವಿ: ಲೋಕಸಭಾ ಚುನಾವಣೆ ನಂತರ ಆದಷ್ಟು ಬೇಗ ರಾಜ್ಯದಲ್ಲಿ ಡಬಲ್ ಇಂಜಿನ್ ಸರಕಾರ ಬರಲಿದೆ ಎಂದು ಬೆಳಗಾವಿಯಲ್ಲಿ ಶಾಸಕ ರಮೇಶ್ ಜಾರಕಿಹೊಳಿ ಹೊಸ ಬಾಂಬ್ ಸಿಡಿಸಿದ್ದಾರೆ.

ಬೆಳಗಾವಿ ನಗರದ ಹಿಂಡಲಗಾ ಗ್ರಾಮದಲ್ಲಿ ಬಿಜೆಪಿ ಕಾರ್ಯಕರ್ತರ ಸಮಾವೇಶದಲ್ಲಿ ಮಾತನಾಡಿದ ಅವರು, ನಾನು ನನ್ನ ತಮ್ಮನಿಗೆ ಮಾತು ಕೊಟ್ಟಿದ್ದೇನೆ ಅದಕ್ಕೆ ಮಾತಾಡ್ತಿಲ್ಲ. ಹೆದರಿ ಮಾತಾಡ್ತೋದನ್ನ ಬಿಟ್ಟಿಲ್ಲ. ಚುನಾವಣೆ ಫಲಿತಾಂಶದ ಬಳಿಕ ಎಲ್ಲವನ್ನೂ ಮಾತಾಡುತ್ತೇನೆ. ಬೆಳಗಾವಿ ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಸೋಲು ಬಿಜೆಪಿ ಗೆಲುವು ಖಚಿತ. ಆದರೆ ಈ ಬಾರಿ ಜಗದೀಶ್ ಶೆಟ್ಟರ್ ಗೆಲ್ತಾರೆ ಮೋದಿಯವರು ಮೂರನೇ ಬಾರಿಗೆ ಪ್ರಧಾನಿಯಾಗ್ತಾರೆ ಎಂದ ಅವರು, ಮಹಾರಾಷ್ಟ್ರದಲ್ಲಿ ನಮ್ಮ ಸರ್ಕಾರ ಇರೋದ-ರಿಂದ ಬೆಳಗಾವಿ ಪಶ್ಚಿಮ ಭಾಗದಲ್ಲಿ ನೀರಾವರಿ ಯೋಜನೆ ಮಾಡೋದಿದೆ. ಬೆಳಗಾವಿ ಗ್ರಾಮೀಣ ಭಾಗದಲ್ಲಿ ಇಪ್ಪತ್ತೈದು ಸಾವಿರ ಲೀಡ್ ಜೊತೆಗೆ ಶೆಟ್ಟರ್ ಅವರು ಎರಡರಿಂದ ಎರಡೂವರೆ ಲಕ್ಷ ಮತಗಳಿಂದ ಗೆಲ್ತಾರೆ ಎಂದರು.

ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಮಾತನಾಡಿ, ದೇಶಕ್ಕೆ ಇಂದು ನರೇಂದ್ರ ಮೋದಿಯವರು ಅವಶ್ಯ ಇದೆ. ಶೆಟ್ಟರ್ ಅವ-ರಿಗೂ ಬೆಳಗಾವಿಗೆ ಮೂವತ್ತು ವರ್ಷದ ನಂಟಿದೆ.

ಸುರೇಶ್ ಅಂಗಡಿ ನಾವು ಸೇರಿ ಬಿಜೆಪಿ ಕಟ್ಟುವ ಕೆಲಸ ಮಾಡಿದ್ದೇವೆ. ಈ ಭಾಗದ ಅಭಿವೃದ್ಧಿಗೆ ಅಸೆಂಬ್ಲಿಯಲ್ಲಿ ಧ್ವನಿ ಎತ್ತುವ ಕೆಲಸ ಮಾಡಿದ್ದೇನೆ.

ಬೆಳಗಾವಿ ಗ್ರಾಮೀಣ ಭಾಗದಲ್ಲಿ ಅಭಿವೃದ್ಧಿ ಕಾರ್ಯ ಮುಂದುವರೆಸುವ ಕೆಲಸ ಮಾಡುತ್ತೇನೆ. ನರೇಂದ್ರ ಮೋದಿಯವರನ್ನ ಮೂರನೇ ಬಾರಿಗೆ ಪ್ರಧಾನಿ ಮಾಡಲು ಶಕ್ತಿ ಕೊಡಿ. 17 ರಂದು ನಾಮಪತ್ರ ಸಲ್ಲಿಕೆ ಮಾಡ್ತೇನಿ ಬಂದು ಎಲ್ಲರೂ ಶಕ್ತಿ ಕೊಡಿ ಎಂದರು.

ಮಾಜಿ ಶಾಸಕ ಸಂಜಯ ಪಾಟೀಲ್ ಮಾತನಾಡಿ, ಈ ಬಾರಿ ಬೆಳಗಾವಿ ಲೋಕಸಭಾ ಅಭ್ಯರ್ಥಿಯನ್ನು 2 ಲಕ್ಷ ಮತಗಳ ಅಂತರದಲ್ಲಿ



ಗೆಲ್ಲಿಸಿಕೊಂಡು ಬರುವ ಶಫತ ಮಾಡಿದ್ದೇವೆ. ವಿರೋಧ ಪಕ್ಷದವರು ಚುನಾವಣೆಯನ್ನು ಹಣದಿಂದ ಮಾಡುತ್ತಾರೆ. ಆದರೆ ಪ್ರಧಾನಿ ನರೇಂದ್ರ ಮೋದಿ 18 ಗಂಟೆಗಳ ಕಾಲ ಕಾರ್ಯನಿರ್ವಹಿಸಿ ಪ್ರೀತಿಯ ರಾಜಕಾರವನ್ನು ಮಾಡುತ್ತಿದ್ದಾರೆ.

ಸಂಸ್ಕೃತಿ. ದೇಶದ ಅಭಿವೃದ್ಧಿ ಬಿಜೆಪಿ ಸಂಸ್ಕೃತಿ. ಬಿಜೆಪಿ ಅಭ್ಯರ್ಥಿಗೆ ತಮ್ಮ ಮತವನ್ನು ನೀಡುವ ಮೂಲಕ ಮೂರನೇ ಬಾರಿಗೆ ನರೇಂದ್ರ ಮೋದಿಯವರನ್ನು ಪ್ರಧಾನಿಯನ್ನಾಗಿ ಮಾಡೋಣ ಎಂದರು.

ಸಂಸದೆ ಮಂಗಳಾ ಅಂಗಡಿಯವರು ಮಾತನಾಡಿ, ಮೋದಿ ಪವಾಡ ಪುರುಷ ಇದ್ದಂತೆ. 500 ವರ್ಷಗಳಿಂದ ಲಕ್ಷಾಂತರ ಕರಸೇವಕರು ಪ್ರಾಣ ಬಿಟ್ಟಿದ್ದು ರಾಮ ಮಂದಿರಕ್ಕಾಗಿ. ಎಲ್ಲ ಅಡೆತಡೆಗಳನ್ನು ಮೀರಿ ಮೋದಿ ಅವರು ಅಯೋಧ್ಯೆಯಲ್ಲಿ ರಾಮ ಮಂದಿರ ನಿರ್ಮಾಣ ಮಾಡಿದರು, ಮಹಿಳೆಯರಿಗೆ ಉಜ್ವಲ್ ಯೋಜನೆ ಜಾರಿ ತಂದರು ,ದೇಶದಲ್ಲಿ ಆರ್ಥಿಕ ಸುಧಾರಣೆಯಾಗಿದೆ ಎಂದು ಹೇಳಿದ್ದರು .

ಮಾಜಿ ಶಾಸಕ ಅನಿಲ್ ಬೆನಕೆ ಮಾತನಾಡಿ, ಮತದ ವಿಷ ಬೀಜ ಬಿತ್ತುವ ಮೂಲಕ ಕಾಂಗ್ರೆಸ್ ಸಮಾಜ ಒಡೆಯುವ ಕೆಲಸ ಮಾಡುತ್ತಿದೆ.

ಇದಕ್ಕೆ ಈ ಚುನಾವಣೆಯಲ್ಲಿ ಬುದ್ಧಿ ಕಲಿಸಬೇಕು ಕೋವಿಡ ಸಮಯದಲ್ಲಿ ನರೇಂದ್ರ ಮೋದಿಯವರು ವ್ಯಾಕ್ಸಿನೇಷನ್ ನೀಡಿ ಇಡೀ ಪ್ರಪಂಚಕ್ಕೆ ಭಾರತ ಶಕ್ತಿ ಏನುವುದು ತೋರಿಸಿ ಕೊಟ್ಟರು.

ವ್ಯಾಕ್ಸಿನೇಷನ್ ಕಾಂಗ್ರೆಸ್ ನವರು ಮನ ಬಂದಂತೆ ಟೀಕಿಸಿದ್ದರು ವಾಗ್ದಾಳಿ ನಡೆಸಿದ್ದರು .

ಗ್ರಾಮೀಣ ಮಂಡಳ ಅಧ್ಯಕ್ಷ ಧನಂಜಯ ಜಾಧವ್ ಮಾತನಾಡಿ ಸುರೇಶ ಅಂಗಡಿ ಹಾಗೂ ಜಗದೀಶ ಶೆಟ್ಟರ ತಮ್ಮ ಅಧಿಕಾರವಧಿಯಲ್ಲಿ ಹಲವಾರು ಯೋಜನೆಗಳ ಅನುಷ್ಠಾನದೊಂದಿಗೆ ಜಿಲ್ಲೆಗೆ ವಿಶೇಷ ಕೊಡುಗೆ ನೀಡಿದ್ದಾರೆ.

ನರೇಂದ್ರ ಮೋದಿಯಂತಹ ಧಿಮಂತ ನಾಯಕನ ಅವಶ್ಯಕತೆ ದೇಶಕ್ಕೆ ಇದೆ. ಜಮ್ಮು ಕಾಶ್ಮೀರದಲ್ಲಿ 370 ಕಲಂ ತೆಗೆದು ಹಾಕಿ, ರಾಮ ಮಂದಿರ ನಿರ್ಮಾಣ ಮಾಡಿ ದೇಶದಲ್ಲಿ ಶಾಂತತೆಯನ್ನು ನೆಲೆಸುವಂತೆ ಮಾಡಿದ್ದಾರೆ. ಬರುವ ದಿನಗಳಲ್ಲಿ ಒಂದು ದೇಶ ಒಂದು ಚುನಾವಣೆ ಹಾಗೂ ಎಲ್ಲರಿಗೂ ಒಂದೇ ಕಾನೂನು ಜಾ-ರಿಗೊಳಿಸಿ ಪಿಓಕೆಯನ್ನು ವಶಪಡಿಸಿಕೊಳ್ಳಲು ನರೇಂದ್ರ ಮೋದಿಯವರನ್ನು ಮತ್ತೊಮ್ಮೆ ಪ್ರಧಾನಿಯನ್ನಾಗಿ ಮಾಡಿ ಅಖಂಡ ಭಾರತ ನಿರ್ಮಿಸಲು ನಾವೆಲ್ಲ ಕಾರ್ಯಪ್ರವೃತ್ತರಾಗೋಣ ಎಂದರು

ಬಿಜೆಪಿ ಗ್ರಾಮೀಣ ಬೂತ್ ಮಟ್ಟದ ಸಮಾವೇಶದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಸುಭಾಷ್ ಪಾಟೀಲ್ , ಚಿಕ್ಕ ರೇವಣ್ಣ, ಸೇರಿ ಹಲವು ಜನ ಮುಖಂಡರು ಇದ್ದರು.

## ಬೆಳಗಾವಿ ಲೋಕಸಭಾ ಕ್ಷೇತ್ರ: ವೆಚ್ಚ ವೀಕ್ಷಕರ ಸಭೆ

# ಚುನಾವಣಾ ಖರ್ಚು ವೆಚ್ಚದ ಮೇಲೆ ನಿಗಾ: ಜಿಲ್ಲಾಧಿಕಾರಿ ನಿತೇಶ್ ಪಾಟೀಲ

ಬೆಳಗಾವಿ: ಚುನಾವಣಾ ಆಯೋಗದ ಮಾರ್ಗಸೂಚಿಯಂತೆ ರಾಜ-ಕೀಯ ಪಕ್ಷಗಳು ಮತ್ತು ಅಭ್ಯರ್ಥಿಗಳ ಚುನಾವಣಾ ಖರ್ಚು-ವೆಚ್ಚದ ಮೇಲೆ ನಿಗಾ ವಹಿಸಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ ತಿಳಿಸಿದರು.

ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ಶನಿವಾರ(ಏ.13) ಬೆಳಗಾವಿ ಹಾಗೂ ಚಿಕ್ಕೋಡಿ ಲೋಕಸಭಾ ಕ್ಷೇತ್ರದ ವೆಚ್ಚ ವೀಕ್ಷಕರು, ಸಹಾಯಕ ಚುನಾವಣಾಧಿಕಾರಿಗಳು ಹಾಗೂ ನೋಡಲ್ ಅಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಈಗಾಗಲೇ ಎಲ್ಲ ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಭೆಯನ್ನು ನಡೆಸಿ ವೆಚ್ಚ ನಿರ್ವಹಣೆ, ಎಸ್.ಆರ್. ದರಗಳ ನಿಗದಿ ಸೇರಿದಂತೆ ಪ್ರಮುಖ ವಿಷಯಗಳ ಕು-



ರಿತು ಮಾಹಿತಿಯನ್ನು ನೀಡಲಾಗಿದೆ.

ಬ್ಯಾಂಕರುಗಳ ಸಭೆಯನ್ನು ನಡೆಸಿ ಸಂಶಯಾಸ್ಪದ ವ್ಯವಹಾರಗಳ ಬಗ್ಗೆ ಮಾಹಿತಿಯನ್ನು ನೀಡುವಂತೆ ತಿಳಿಸಲಾಗಿದ್ದು, ಡಿಜಿಟಲ್ ಸೇರಿದಂತೆ ಪ್ರತಿಯೊಂದು ಬ್ಯಾಂಕು ವ್ಯವಹಾರಗಳ ಮೇಲೆ ನಿಗಾ ವಹಿಸಲಾಗಿದೆ. ಪ್ರಿಂಟಿಂಗ್ ಪ್ರೆಸ್ ಮಾಲೀಕರ ಸಭೆ ಕೂಡ ನಡೆಸುವ ಮೂಲಕ ಅಗತ್ಯ ತಿಳಿವಳಿಕೆ ನೀಡಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ ವಿವರಿಸಿದರು.

ಪ್ರತಿಯೊಂದು ವಿಧಾನಸಭಾ ಕ್ಷೇತ್ರಗಳಿಗೆ ಕನಿಷ್ಠ ಮೂರು ಎಫ್.ಎಸ್.ಟಿ. ತಂಡಗಳಂತೆ 28 ತಂಡಗಳನ್ನು ಹಾಗೂ 28 ಎಸ್.ಎಸ್.ಟಿ ಹಾಗೂ 25 ವಿಎಸ್ ಟಿ ತಂಡಗಳು ಕಾರ್ಯನಿರ್ವಹಿಸುತ್ತಿವೆ.

ಅಕ್ರಮ ಹಣ, ಮದ್ಯ ಮತ್ತಿತರ ವಸ್ತುಗಳ ಸಾಗಾಣಿಕೆ ಮೇಲೆ ನಿಗಾ ವಹಿಸಲಾಗಿದೆ. ಆದಾಯ ತೆರಿಗೆ, ವಾಣಿಜ್ಯ ತೆರಿಗೆ, ಅಬಕಾರಿ ಹಾಗೂ ಪೊಲೀಸ್ ಸೇರಿದಂತೆ ಪ್ರತಿಯೊಂದು ಇಲಾಖೆಯ ಅಧಿಕಾರಿಗಳು ಮತ್ತು ತಂಡಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸುತ್ತಿವೆ ಎಂದು ನಿತೇಶ್ ಪಾಟೀಲ ತಿಳಿಸಿದರು.

ಸಭೆಯಲ್ಲಿ ಮಾತನಾಡಿದ ಬೆಳಗಾವಿ ಲೋಕಸಭಾ ಕ್ಷೇತ್ರದ ವೆಚ್ಚ ವೀಕ್ಷಕರಾದ ಹರಕ್ರಿಪಾಲ್ ಖಟಾನಾ, ಕೆಲವು ಚೆಕ್ ಪೋಸ್ಟ್ ಗಳಿಗೆ ಭೇಟಿ ನೀಡಿ ಪರಿಶೀಲಿಸಲಾಗಿದ್ದು, ವಾಹನದಟ್ಟಣೆಹೆಚ್ಚಾಗಿರುವ ಕಡೆಗಳಲ್ಲಿ ಹೆಚ್ಚುವರಿ ಸಿಬ್ಬಂದಿ ನಿಯೋಜಿಸುವಂತೆ ತಿಳಿಸಿದರು.

ಪೇಡ್ ನ್ಯೂಸ್ ಸೇರಿದಂತೆ ಪ್ರತಿಯೊಂದು ವೆಚ್ಚದ ಮೇಲೆ ನಿಗಾ ವಹಿಸಬೇಕು ಎಂದು ತಿಳಿಸಿದರು. ಸಹಾಯಕ ವೆಚ್ಚ ನೋಡಲ್ ಅಧಿಕಾ-ರಿಗಳು ಹಾಗೂ ಪ್ರತಿಯೊಂದು ತಂಡದ ಕುರಿತು ಸಭೆಯಲ್ಲಿ ಮಾಹಿತಿಯನ್ನು ಪಡೆದುಕೊಂಡರು.

ಇನ್ಸೋರ್ವ ವೆಚ್ಚ ವೀಕ್ಷಕರಾದ ನರಸಿಂಗ್ ರಾವ್ ಬಿ. ಡಿಸಿಪಿ ರೋಹನ್ ಜಗದೀಶ್, ಪ್ರೊಬೇಷನರಿ ಐ.ಎ..ಎಸ್. ಅಧಿಕಾರಿ ಶುಭಂ ಶುಕ್ಲಾ ಉಪಸ್ಥಿತ-ರಿದ್ದರು.

ಅಪರ ಜಿಲ್ಲಾಧಿಕಾರಿ ವಿಜಯಕುಮಾರ್ ಹೊನಕೇರಿ, ತರಬೇತಿ ನೋಡಲ್ ಅಧಿಕಾರಿ ಶಂಕರಾನಂದ ಬನಶಂಕರಿ, ಸಹಾಯಕ ಚುನಾವಣಾಧಿಕಾರಿಗಳಾದ ಪಿ.ಎನ್.ಲೋಕೇಶ್, ಸತೀಶ್ ಕುಮಾರ್, ಪ್ರಭಾವತಿ ಫಕ್ಕೀರಪುರ, ಡಾ.ರಾಜೀವ್ ಕೂಲೇರ್, ರಾಜಶ್ರೀ ಜೈನಾಪುರ, ವೆಚ್ಚ ವೀಕ್ಷಕ ನೋಡಲ್ ಅಧಿಕಾರಿ ಗೌರಿಶಂಕರ ಕಡೇಚೂರ, ಎಂಸಿಎಂಸಿ ನೋಡಲ್ ಅಧಿಕಾರಿ ಗುರುನಾಥ ಕಡಬೂರ ಸೇರಿದಂತೆ ವಿವಿಧ ತಂಡಗಳ ಮುಖ್ಯಸ್ಥರು ಸಭೆಯಲ್ಲಿ ಪಾಲ್ಗೊಂಡಿದ್ದರು.

## ಪ್ರಿಯಕರನೊಂದಿಗೆ ಆತ್ಮಹತ್ಯೆ ಮಾಡಿಕೊಂಡ ವಿವಾಹಿತ ಮಹಿಳೆ



ಒಂದೇ ಮರಕ್ಕೆ ನೇಣು ಹಾಕಿಕೊಂಡು ಪ್ರೇಮಿಗಳು ಆತ್ಮಹತ್ಯೆ ಮಾಡಿ ಕೊಂಡಿರುವ ಘಟನೆ ಗದಗ ಜಿಲ್ಲೆಯ ಗಜೇಂದ್ರಗಡ ತಾಲೂಕಿನ ನರೇಗಲ್ ಪಟ್ಟಣದಲ್ಲಿ ನಡೆದಿದೆ.

ನರೇಗಲ್ ಪಟ್ಟಣದ ಅಪ್ಪಣ್ಣ ಗೊರಕಿ(28), ಲಲಿತಾ ಹಲಗೇರಿ (21) ಆತ್ಮಹತ್ಯೆ ಮಾಡಿಕೊಂಡ ಪ್ರೇಮಿಗಳು.

ಒಂದೇ ಗ್ರಾಮದವರಾದ ಅಪ್ಪಣ್ಣ ಗೊರಕಿ ಹಾಗೂ ಲಲಿತಾ ನಡುವೆ ಪ್ರೀತಿ ಇತ್ತು. ಅವರ ಪ್ರೀತಿಗೆ ಮನೆಯವರ ಒಪ್ಪಿಗೆ ಇರಲಿಲ್ಲ ಎಂದು ತಿಳಿದು ಬಂದಿದೆ. ಈ ಮಧ್ಯೆ ಮನೆಯವರ ಬಲವಂತಕ್ಕೆ ಲಲಿತಾ ಇದೇ ಏಪ್ರಿಲ್ 4 ರಂದು ಬೇರೆ ಯುವಕನೊಂದಿಗೆ ಮದುವೆಯಾಗಿದ್ದಳು.

ಇದರಿಂದ ಅಪ್ಪಣ್ಣ-ಲಲಿತಾ ಇಬ್ಬರು ಮನ ನೊಂದಿದ್ದರು. ಬೇರೊಬ್ಬನ ಜೊತೆಗೆ ಮದುವೆ ಆಗಿದ್ದರೂ, ಮನಸ್ಸೆಲ್ಲವೂ ಅಪ್ಪಣ್ಣನೊಂದಿಗೆ ಬೆರೆತು ಹೋಗಿತ್ತು.

ಅಪ್ಪಣ್ಣ ಹಾಗೂ ಲಲಿತಾ ಒಬ್ಬರನ್ನೊಬ್ಬರು ಬಿಟ್ಟು ಇರಲು ಆಗದೆ ಊರಿನ ಹೊರವಲಯದ ಖಾಲಿ ಜಾಗದಲ್ಲಿದ್ದ ಮರವೊಂದಕ್ಕೆ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾರೆ.

## ಬೆಳಗಾವಿ ಮೂಲದ ಕಾರಾಗೃಹ ಸಿಬ್ಬಂದಿ ಅಪಘಾತದಲ್ಲಿ ಸಾವು



ಕಾರು ಹಾಗೂ ಬೈಕ್ ನಡುವೆ ಡಿಕ್ಕಿಯಾಗಿ ಸಂಭವಿಸಿದ ಭೀಕರ ಅಪಘಾತದಲ್ಲಿ ಬೆಳಗಾವಿ ಮೂಲದ ಕಾರಾಗೃಹ ಸಿಬ್ಬಂದಿ ಮೃತಪಟ್ಟಿರುವ ಘಟನೆ ಧಾರವಾಡದಲ್ಲಿ ನಡೆದಿದೆ.

ಧಾರವಾಡದ ಗರಗ ಗ್ರಾಮದಲ್ಲಿ ಈ ಅಪಘಾತ ಸಂಭವಿಸಿದೆ. ರುದ್ರಪ್ಪ ಸಿದ್ದಣ್ಣವರ್ ಮೃತ ದುರ್ದೈವಿ.

ಬೆಳಗಾವಿ ಜಿಲ್ಲೆಯ ಬೈಲಹೊಂಗಲ ತಾಲೂಕಿನ ಬೆಳವಾಡಿ ಮೂಲದ ರುದ್ರಪ್ಪ ಸಿದ್ದಣ್ಣವರ್, ಧಾರವಾಡ ಕೇಂದ್ರ ಕಾರಾಗೃಹದ ಸಿಬ್ಬಂದಿಯಾಗಿದ್ದರು.

ಕರ್ತವ್ಯ ಮುಗಿಸಿ ಮನೆಗೆ ತೆರಳುತ್ತಿದ್ದಗ ಅಪಘಾತದಲ್ಲಿ ಸಾವನ್ನಪ್ಪಿದ್ದಾರೆ. ಗರಗ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

## 6 ವರ್ಷಗಳ ಮುನಿಸು ಮರೆತು ಶ್ರೀನಿವಾಸ್ ಪ್ರಸಾದ್ ಮನೆಗೆ ಸಿಎಂ ಭೇಟಿ

ಮೈಸೂರು: ಲೋಕಸಭಾ ಚುನಾವಣೆ ಹೊತ್ತಲ್ಲಿ ಮೈಸೂರು ಭಾಗದಲ್ಲಿ ಕಾಂಗ್ರೆಸ್ ಪಕ್ಷ ಬಲಪಡಿಸಲು ಸಿಎಂ ಸಿದ್ದರಾಮಯ್ಯ ಮುಂದಾಗಿರುವಂತೆ ಕಾಣುತ್ತಿದೆ. ರಾಜಕೀಯ ಕಾರಣಕ್ಕೆ 6 ವರ್ಷಗಳಿಂದ ಇದ್ದ ಮುನಿಸನ್ನು ಮರೆತು ಬಿಜೆಪಿ ಸಂಸದ ವಿ.ಶ್ರೀನಿವಾಸ್ ಪ್ರಸಾದ್ ಅವರನ್ನು ಸಿಎಂ ಸಿದ್ದರಾಮಯ್ಯ ಭೇಟಿಯಾಗಿದ್ದಾರೆ.

ನಾಳೆ (ಭಾನುವಾರ) ಪ್ರಧಾನಿ ಮೋದಿ ಅವರು ಮೈಸೂರಿಗೆ ಪ್ರಚಾರಕ್ಕಾಗಿ ಆಗಮಿಸಲಿದ್ದಾರೆ. ಈ ಹೊತ್ತಿನಲ್ಲೇ ಬಿಜೆಪಿ ಸಂಸದ ಶ್ರೀನಿವಾಸ ಪ್ರಸಾದ್ ಅವರನ್ನು ಸಿಎಂ ಭೇಟಿಯಾಗಿರುವುದು ಅಚ್ಚರಿ ಮೂಡಿಸಿದೆ. ಆರು ವರ್ಷಗಳಿಂದ ದಿಗ್ಗಜ ನಾಯಕರು ಪರಸ್ಪರ ಭೇಟಿಯಾಗಿರಲಿಲ್ಲ. ಮಾತುಕತೆಯೂ ಇರಲಿಲ್ಲ. ಈಗ ಚುನಾವಣೆ ಹೊಸ್ತಿಲಲ್ಲಿ ಪ್ರಸಾದ್ ಮನೆಗೆ ಸಿದ್ದರಾಮಯ್ಯ ಅವರು



ಭೇಟಿ ನೀಡಿರುವುದು ಕುತೂಹಲ ಮೂಡಿಸಿದೆ.

ಇದು ಸೌಹಾರ್ದಯುತ ಭೇಟಿಯೋ ಅಥವಾ ರಾಜಕೀಯ ಭೇಟಿಯೋ ಎಂಬ ಚರ್ಚೆ ರಾಜ-ಕೀಯ ವಲಯದಲ್ಲಿ ಶುರುವಾಗಿದೆ. ಮೈಸೂರಿನಲ್ಲಿ ಸಿಎಂ ಸಿದ್ದರಾಮಯ್ಯ ಅವರು ಶ್ರೀನಿವಾಸ್ ಪ್ರಸಾದ್ ಅವರ ಮನೆಗೆ ಭೇಟಿ ನೀಡಿದ್ದರು. ಈ ವೇಳೆ, ಬನ್ರಿ ಪ್ರಸಾದ್ ಎಂದು ಸಿಎಂ ಕುಶಲೋಪರಿ ವಿಚಾ-ರಿಸಿದರು.

ಶ್ರೀನಿವಾಸ ಪ್ರಸಾದ್ ಬಂದ ಕೂಡಲೇ ಸಿಎಂ ಎದ್ದು ನಿಲ್ಲಲು ಮುಂದಾದರು. ಆಗ ಶ್ರೀನಿವಾಸ್ ಪ್ರಸಾದ್, ಬೇಡ ಬೇಡ.. ಕೂತುಕೊಳ್ಳಿ ಎಂದರು. ಈ ವೇಳೆ ಸಿಎಂ ಬಳಿ ಪ್ರಸಾದ್ ಆರೋಗ್ಯ ಸಮಸ್ಯೆ ಹೇಳಿಕೊಂಡರು. 'ಆರೋಗ್ಯ ನಿರ್ಲಕ್ಷ್ಯ ಮಾಡಬೇಡಿ' ಎಂದು ಸಿಎಂ ಸಲಹೆ ನೀಡಿದರು.

2013 ರಲ್ಲಿ ಸಿದ್ದರಾಮಯ್ಯ ಅವರು ಸಿಎಂ ಆಗಿದ್ದಾಗ ಕಂದಾಯ ಸಚಿವರಾಗಿದ್ದ ವಿ.ಶ್ರೀನಿವಾಸ್ ಪ್ರಸಾದ್ ಅವರನ್ನು ತಮ್ಮ ಸಂಪುಟದಿಂದ ಕೈಬಿಟ್ಟಿದ್ದರು.

ಇದರಿಂದ ಕುಪಿತಗೊಂಡಿದ್ದ ಪ್ರಸಾದ್ ಕಾಂಗ್ರೆಸ್ ತೊರೆದು ಬಿಜೆಪಿ ಸೇರಿ ಚುನಾವಣೆ ಎದುರಿಸಿದ್ದರು. ಆಗ ವಿಧಾನಸಭಾ ಚುನಾವಣೆಯಲ್ಲಿ ಸೋಲು ಕಂಡಿದ್ದರು. ನಂತರ ಚಾಮರಾಜನಗರ ಕ್ಷೇತ್ರದಿಂದ ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸಿ ಪ್ರಸಾದ್ ಗೆಲುವು ಸಾಧಿಸಿದ್ದರು.

ಸಂಪುಟದಿಂದ ಕೈಬಿಟ್ಟಾಗಿನಿಂದ ಸಿದ್ದರಾಮಯ್ಯ ವಿರುದ್ಧ ಪ್ರಸಾದ್ ಅಸಮಾಧಾನ ಹೊಂದಿದ್ದರು. ಆದರೆ ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಹಲವು ಕುತೂಹಲಕಾರಿ ಬೆಳವಣಿಗೆಗಳು ನಡೆಯುತ್ತಿವೆ. ಪ್ರಸಾದ್ ಅನಾರೋಗ್ಯ ಹಾಗೂ ವಯಸ್ಸಿನ ಕಾರಣ ಚುನಾವಣಾ ರಾಜ-ಕೀಯಕ್ಕೆ ನಿವೃತ್ತಿ ಘೋಷಿಸಿದ್ದಾರೆ. ಬಿಜೆಪಿಯಿಂದ ಬಾಲರಾಜ್ ಕಣಕ್ಕಿಳಿದಿದ್ದಾರೆ. ಇತ್ತ ಕಾಂಗ್ರೆಸ್‌ನಿಂದ ಹೆಚ್.ಸಿ.ಮಹದೇವಪ್ಪ ಅವರ ಪುತ್ರ ಸುನೀಲ್ ಬೋಸ್ ಸ್ಪರ್ಧಿಸಿದ್ದಾರೆ. ಪುತ್ರನ ಗೆಲುವಿಗಾಗಿ ಕ್ಷೇತ್ರದಲ್ಲಿ ಮಹದೇವಪ್ಪ ಕಸರತ್ತು ನಡೆಸುತ್ತಿದ್ದಾರೆ. ಹೀಗಾಗಿ ಬಿಜೆಪಿಯ ಶ್ರೀನಿವಾಸ್ ಪ್ರಸಾದ್ ಮನೆಗೆ ಭೇಟಿ ನೀಡಿ ರಾಜಕೀಯ ದಾಳ ಉರುಳಿಸಿದ್ದರು.

## ಕದ್ದ ಚಿನ್ನದಲ್ಲಿ ದೇವರಿಗೂ ಪಾಲು ನೀಡುತ್ತಿದ್ದ ಖದೀಮರ ಬಂಧನ

ಬೆಂಗಳೂರು: ಕದ್ದ ಚಿನ್ನದಲ್ಲಿ ದೇವ-ರಿಗೂ ಪಾಲು ನೀಡುತ್ತಿದ್ದ ಖದೀಮರನ್ನು ಪೊಲೀಸರು ಜೈಲುಪಾಲು ಮಾಡಿದ್ದಾರೆ.

ಅಕ್ಕ-ಪಕ್ಕದವರು, ನೆರೆ ಮನೆಯವರು ಹತ್ತಿರದ ನೆಟ್ಟರು ಎನ್ನುವ ಮಾತಿದೆ. ಆದ-'ರೆ ಅದೇ ನೆರೆಯವರು ಕಳ್ಳತನಕ್ಕೆ ಇಳಿದು ಜೈಲುಪಾಲಾಗಿದ್ದಾರೆ.

ಇನ್ನೂ ಕಳ್ಳತನಕ್ಕೆ ದೇವರನ್ನೇ ಪಾರ್ಟ್ನರ್ ಮಾಡಿಕೊಂಡಿದ್ದ ಈ ಖದೀಮರು, ಪೊಲೀಸರಿಗೆ ಸಿಗಬಾರದೆಂದು ಕದ್ದ ಹಣ-ಚಿನ್ನಾಭರಣದಲ್ಲಿ ಮಲೆ ಮಹದೇಶ್ವರನಿಗೂ ಪಾಲು ನೀಡುತ್ತಿದ್ದರು. ಕಿರಣ್, ಆನಂದ್, ನಾನಿ ಬಂಧಿತ ಆರೋಪಿಗಳು.



ನೆರೆ ಮನೆಗೆ ಬೀಗ ಹಾಕಿದ್ದು ಕಂಡರೆ ಸಾಕು, ಆ ದಿನವೇ ನಕಲಿ ಕೀಯೊಂದಿಗೆ ಹಾಜರಾಗುತ್ತಿದ್ದರು. ಹಗಲು ಹೊತ್ತು ಮನೆಯ ಸುತ್ತ-ಮುತ್ತ ಓಡಾಡಿ ಪ್ಲ್ಯಾನ್ ಮಾಡುತ್ತಿದ್ದ ಈ ಕಳ್ಳರು ಎಲ್ಲರೂ ನಿದ್ದೆಗೆ ಜಾರಿದಾಗ ಮಧ್ಯರಾತ್ರಿ ಕಾರ್ಯಾಚರಣೆಗೆ ಇಳಿಯುತ್ತಿದ್ದರು. ಯಾರಿಗೂ ತಿಳಿಯದಂತೆ ನಕಲಿ ಕೀ ಬಳಸಿ ಮನೆಯೊಳಗೆ ನುಗ್ಗುತ್ತಿದ್ದ ಈ ಕಳ್ಳರು ಹಣ ಹಾಗೂ ಚಿನ್ನಾಭರಣ ಎಗರಿಸಿ ಎಸ್ಕೇಪ್ ಆಗುತ್ತಿದ್ದರು. ಹೀಗೆ ಕಳೆದ ಮಾರ್ಚ್ 29 ರಂದು ಮನೆ ಕಳವು ಮಾಡಿದ್ದರು.

ಚಾಮರಾಜಪೇಟೆಯ ಅಪ್ಪುರಾವ್ ರಸ್ತೆಯಲ್ಲಿರುವ ಉಮಾ ಎಂಬುವವರು ಮನೆಯಲ್ಲಿ ಕಳವು ಮಾಡಿದ್ದರು. ಉಮಾ ಮನೆಯಲ್ಲಿ ಇಲ್ಲದೆ ಇದ್ದಾಗ, ನಕಲಿ ಕೀ ಬಳಸಿ 6 ಲಕ್ಷ ನಗದು ಹಾಗೂ 3 ಲಕ್ಷಕ್ಕೂ ಹೆಚ್ಚು ಮೌಲ್ಯದ ಚಿನ್ನಾಭರಣ ಕದ್ದಿದ್ದರು.

ಮಲೆ ಮಹದೇಶ್ವರನಿಗೆ ತಪ್ಪು ಕಾಣಿಕೆ: ಚಿನ್ನಾಭರಣ ಕದ್ದು ಮಲೆ ಮಹದೇಶ್ವರನಿಗೆ ತಪ್ಪು ಕಾಣಿಕೆಯನ್ನು ನೀಡುತ್ತಿದ್ದರು. ನೆರೆಮನೆಯಲ್ಲಿ ಹಣ ಹಾಗೂ ಚಿನ್ನಾಭರಣ ದೋಚಿದ ಈ ಮೂವರು ಕದ್ದ ಹಣದಲ್ಲಿ ಮಲೆ ಮಹದೇಶ್ವರ ಬೆಟ್ಟಕ್ಕೆ ತೆರಳಿ ಹುಂಡಿಗೆ ಹಣ ಹಾಕಿದ್ದರು.

ಕಳವು ಪ್ರಕರಣ ಸಂಬಂಧ ಮೂವರು ಆರೋಪಿಗಳಾದ ಕಿರಣ್, ಆನಂದ್, ನಾನಿ ಎಂಬುವವರನ್ನು ಬಂಧಿಸಲಾಗಿದೆ. ಕಳೆದ ಹದಿನೈದು ವರ್ಷಗಳಿಂದ ಉಮಾ ಅವರ ನೆರೆ ಮನೆಯ ನಿವಾಸಿಗಳಾಗಿದ್ದರು ಎಂದು ತಿಳಿದು ಬಂದಿದೆ. ಸದ್ಯ ಕೆ.ಜಿ.ನಗರ ಪೊಲೀಸರು ಆರೋಪಿಗಳನ್ನು ವಶಕ್ಕೆ ಪಡೆದು ಹೆಚ್ಚಿನ ವಿಚಾರಣೆ ನಡೆಸುತ್ತಿದ್ದಾರೆ.

## ತಾಲೂಕಿನಲ್ಲಿ ಬೇಸಿಗೆ ರಜೆಯಲ್ಲಿ ವಿದ್ಯಾರ್ಥಿಗಳಿಗೆ ಬಿಸಿಯೂಟ ಪ್ರಾರಂಭ

ಬೆಳಗಾವಿ: ಬೆಳಗಾವಿ ತಾಲೂಕಿನ ಎಲ್ಲಾ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ಪ್ರಧಾನ ಮಂತ್ರಿ ಪೋಷಣ ಅಭಿಯಾನ ಯೋಜನೆಯಡಿಯಲ್ಲಿ ಮಧ್ಯಾಹ್ನ ಬಿಸಿಯೂಟವು ಶುಕ್ರವಾರ ದಿ 12ರಿಂದ ಆರಂಭ ವಾಗಿದೆ, ಎಲ್ಲಾ ಶಾಲೆಗಳಲ್ಲಿ ವ್ಯವಸ್ಥಿತವಾಗಿ ಸರ್ವ ಸಿದ್ಧತೆ ಮಾಡಿಕೊಂಡು ಬಿಸಿಯೂಟ ಕಾರ್ಯಶುಕ್ರವಾರ ಏಪ್ರಿಲ್ 12 ರಿಂದ ಆರಂಭವಾಗಿದ್ದು, ಬೇಸಿಗೆ ರಜೆ ಅವಧಿ ಮುಗಿಯುವ ವರೆಗೆ ಅಂದರೆ ಮೇ 28ರ ವರೆಗೆ 41 ದಿನಗಳ ಕಾಲ ಬಿಸಿಯೂಟವು ವಿದ್ಯಾರ್ಥಿಗಳಿಗೆ ದೊರೆಯಲಿದೆ

ಜಿಲ್ಲಾ ಅಕ್ಷರ ದಾಸೋಹ ಯೋಜನೆಯ ಅಧಿಕಾರಿಗಳಾದ ಲಕ್ಷ್ಮಣರಾವ ಯಕ್ಕುಂಡಿ, ತಾಲೂಕಾ ಕ್ಷೇತ್ರ ಶಿಕ್ಷಣಾಧಿಕಾರಿ ಎಸ್ ಪಿ ದಾಸಪ್ಪನವರ, ತಾಲೂಕಾ ಅಕ್ಷರ ದಾಸೋಹ ಯೋಜನೆಯ ಸಹಾಯಕ ನಿರ್ದೇಶಕರಾದ ಆರ್ ಸಿ ಮುದಕನಗೌಡರ ರವರ ಸಲಹೆ ಸೂಚನೆ



ಮಾರ್ಗದರ್ಶನದಂತೆ ಈ ಬಿಸಿಯೂಟ ಯೋಜನೆಯು ವ್ಯವಸ್ಥಿತವಾಗಿ ಪ್ರಾರಂಭವಾಗಿದೆ

ಬಿಸಿಯೂಟದ ಸಮಯವು ಪ್ರತಿದಿನ ಮಧ್ಯಾಹ್ನ12.30 ರಿಂದ 2 ಘಂಟೆವರೆಗೆ ಇರುತ್ತದೆ ಶನಿವಾರ ದಿನವೂ ಸಹ ಇದೇ ಸಮಯಕ್ಕೆ ಬಿಸಿಯೂಟ ನೀಡಲಾಗುವುದು

ಸರಕಾರಿ ರಜೆಗಳು ಹಾಗೂ ರವಿವಾರ ಬಿಸಿಯೂಟ ಇರುವದಿಲ್ಲ. ಈ ಬೇಸಿಗೆ ರಜೆಯಲ್ಲಿ ಹಾಲು ಹಾಗೂ ಪೌಷ್ಟಿಕ ಆಹಾರ ಕೊಡುವದಿಲ್ಲ, ಬಿಸಿಯೂಟ ಮಾತ್ರ ವಿತರಿಸಲಾಗುತ್ತಿದೆ.

ಈ ವರ್ಷ ಬಹಳಷ್ಟು ಬಿಸಿಲಿನ ತಾಪ ಇರುವುದರಿಂದ ವಿದ್ಯಾರ್ಥಿಗಳು ತಮ್ಮ ಆರೋಗ್ಯದ ಕಡೆಗೆ ಹೆಚ್ಚಿನ ಕಾಳಜಿ ವಹಿಸಬೇಕು ಶುದ್ಧವಾದ ಕುಡಿಯುವ ನೀರು ಬಳಸಬೇಕೆಂದು ಇಲಾಖೆಯೂ ಸೂಚನೆ ನೀಡಿದೆ.

ಬಿಸಿಯೂಟ ಪಡೆಯುವಲ್ಲಿ ಮಕ್ಕಳ ಹಾಜರಾತಿ ಹೆಚ್ಚಿಸಲು ಆಯಾ ಗ್ರಾಮಗಳ ಪಾಲಕರು ಊರಿನ ಹಿರಿಯರು ಮಕ್ಕಳಿಗೆ ಪ್ರೇರಣೆ ನೀಡಬೇಕು. ಬಿಸಿಯೂಟ ಪಡೆಯಲು ಪಾಲಕರು ತಮ್ಮ ಮಕ್ಕಳನ್ನು ಶಾಲೆಗೆ ಕಳಿಸಬೇಕು.

ಈ ಬೇಸಿಗೆ ಅವಧಿಯಲ್ಲಿ ಒಂದು ವೇಳೆ ಶಾಲೆಗೆ ಬೇರೆ ಊರಿನ ಸರ್ಕಾರಿ ಹಾಗೂ ಅನುದಾನಿತ ಶಾಲೆಯ ಮಕ್ಕಳು ಬಂದರೆ ಅವರಿಗೂ ಬಿಸಿ ಊಟ ವಿತ-ರಿಸಲಾಗುವುದು.

ಒಟ್ಟಾರೆ ಮಕ್ಕಳ ಹಿತ ದೃಷ್ಟಿಯಿಂದ ಇಲಾಖೆ ಹಮ್ಮಿಕೊಂಡ ಈ ಕಾರ್ಯಕ್ರಮವನ್ನು ಅತ್ಯಂತ ವ್ಯವಸ್ಥಿತವಾಗಿ ನಿರ್ವಹಿಸಿ ಯಶಸ್ವಿಗೊಳಿಸಲು ಸರ್ವರ ಸಹಕಾರ ಅವಶ್ಯಕವಾಗಿದೆ ಎಂದು ಜಿಲ್ಲಾ ಅಕ್ಷರ ದಾಸೋಹ ಅಧಿಕಾರಿಗಳಾದ ಲಕ್ಷ್ಮಣರಾವ ಯಕ್ಕುಂಡಿ ಹಾಗೂ ತಾಲೂಕಾ ಅಕ್ಷರ ದಾಸೋಹ ಸಹಾಯಕ ನಿರ್ದೇಶಕರಾದ ಆರ್ ಸಿ ಮುದಕನಗೌಡರ ಅಭಿಪ್ರಾಯ ಪಟ್ಟು ಬಿಸಿಯೂಟ ಯೋಜನೆ ಯಶಸ್ವಿಗೊಳಿಸಲು ವಿನಂತಿಸಿದ್ದಾರೆ.

ಬೆಳಗಾವಿ ತಾಲೂಕಿನ ಮಾಸ್ತಮರಡಿಯ ಸರಕಾರಿ ಮಾದರಿ ಪ್ರಾಥಮಿಕ ಕನ್ನಡ ಶಾಲೆಯಲ್ಲಿ ಬೇಸಿಗೆ ರಜೆಯ ಬಿಸಿಯೂಟ ವಿತರಣೆ ಮಾಡುವ ಮೂಲಕ ಮುಖ್ಯೋಪಾಧ್ಯಾಯರಾದ ಬಸವರಾಜ ಸುಣಗಾರ ರವರು ಚಾಲನೆ ನೀಡಿದರು.

## ದೇಶದ ಯಾವ ಭಾಗದಲ್ಲೂ ಮೋದಿ ಅಲೆಯಿಲ್ಲ: ವಿನಯ್ ಕುಮಾರ್ ಸೊರಕೆ

ಬೆಂಗಳೂರು: ರಾಜ್ಯ ಸರ್ಕಾರ ಜಾರಿಗೆ ತಂದಿರುವ ಐದು ಭರವಸೆಗಳು ಮತ್ತು ಚುನಾವಣಾ ಪ್ರಣಾಳಿಕೆಯಲ್ಲಿನ ಐದು 'ನ್ಯಾಯ' ಗಳ ಅಡಿಯಲ್ಲಿ ನೀಡಿದ 25 ಭರವಸೆಗಳ ಮೇಲೆ ಪಕ್ಷದ ಪ್ರಚಾರ ಕೇಂದ್ರೀಕೃತವಾಗಿರುತ್ತದೆ ಎಂದು ಎಂದು ಕೆಪಿಸಿಸಿ ಚುನಾವಣಾ ಪ್ರಚಾರ ಸಮಿತಿ ಅಧ್ಯಕ್ಷ ವಿನಯ್ ಕುಮಾರ್ ಸೊರಕೆ ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ದೇಶದ ಯಾವ ಭಾಗದಲ್ಲೂ ಪ್ರಧಾನಿ ನರೇಂದ್ರ ಮೋದಿ ಅಲೆ ಇಲ್ಲ. ಕಾಂಗ್ರೆಸ್ ಪಕ್ಷವು ಗ್ಯಾರಂಟಿಗಳ ಬಲದಲ್ಲೇ ಗೆಲುವು ಸಾಧಿಸಲಿದೆ ಅಭಿವೃದ್ಧಿಯನ್ನೇ ಮುಂದಿಟ್ಟುಕೊಂಡು ಕಾಂಗ್ರೆಸ್ ಪಕ್ಷವು ಚುನಾವಣೆ ಎದುರಿಸಲಿದೆ. ನಮ್ಮ ಸರ್ಕಾರದ ಗ್ಯಾರಂಟಿ ಯೋಜನೆಗಳು ನಾಡಿನ ಜನರ ಹಿತ ರಕ್ಷಿಸುತ್ತಿವೆ. ಅದಕ್ಕೆ ಪ್ರತಿಯಾಗಿ ಜನರು ಕಾಂಗ್ರೆಸ್ ಪಕ್ಷದ ಕೈ ಹಿಡಿಯಲಿದ್ದಾರೆ ಎಂದರು.

ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳನ್ನು ಬಿಟ್ಟಿ ಭಾಗ್ಯ ಎಂದು ಟೀಕಿಸಿದ್ದ ವಿರೋಧ ಪಕ್ಷದವರು ಈಗ ಗ್ಯಾರಂಟಿಗಳ ಮೊರೆ ಹೋಗಿದ್ದಾರೆ. ಬಿಜೆಪಿಯವರ ಬಳಿ ಮತದಾರರಿಗೆ ತಿಳಿಸಲು ಯಾವ ಯೋಜನೆಗಳೂ ಇಲ್ಲ. ಗ್ಯಾರಂಟಿ ಯೋಜನೆಗಳು ಸುಳ್ಳು ಎನ್ನುತ್ತಿರುವ ಬಿಜೆಪಿಗೆ ಜನರು ಈ ಚುನಾವಣೆಯಲ್ಲಿ ಬುದ್ಧಿ ಕಲಿಸುತ್ತಾರೆ ಎಂದು ಹೇಳಿದರು. ಬಿಜೆಪಿ ನಡೆಸುತ್ತಿರುವ ಮಹಿಳಾ ಸಮಾವೇಶಗಳಲ್ಲಿ ಅಭಿಪ್ರಾಯ ಸಂಗ್ರಹಿಸಲಿ. ರಾಜ್ಯದ ಮಹಿಳೆಯರೆಲ್ಲರೂ ಗ್ಯಾರಂಟಿ ಯೋಜನೆಗಳ ಲಾಭ ಪಡೆದಿರುವುದು ಗೊತ್ತಾಗುತ್ತದೆ ಎಂದರು.

ಮನೆ ಮನೆಗೂ ಗ್ಯಾರಂಟಿ ಯೋಜನೆಗಳ ಮಾಹಿತಿಯುಳ್ಳ ಕಾರ್ಡ್‌ಗಳನ್ನು ವಿತರಿಸಲಾಗುವುದು. ವಿದ್ಯಾರ್ಥಿಗಳ ಶೈಕ್ಷಣಿಕ ಸಾಲ ಮನ್ನಾ, ಮಹಾಲಕ್ಷ್ಮಿ ಯೋಜನೆ, ಸರ್ಕಾರಿ ಹುದ್ದೆಗಳ ಭರ್ತಿ ಸೇರಿದಂತೆ ಕಾಂಗ್ರೆಸ್ ಪ್ರಣಾಳಿಕೆಯಲ್ಲಿನ ಭರವಸೆಗಳನ್ನೂ ಪ್ರತಿ ಮನೆಗೆ ತಲುಪಿಸಲು ಕಾರ್ಯಕ್ರಮ ರೂಪಿಸಲಾಗಿದೆ ಎಂದು ಸೊರಕೆ ಹೇಳಿದರು.



'ಗೃಹ ಲಕ್ಷ್ಮಿ' ಗ್ಯಾರಂಟಿ ತನ್ನ ಕುಟುಂಬಕ್ಕೆ ಸಹಾಯ ಮಾಡಿದೆ ಎಂದು ದ್ವಿತೀಯ ಪಿಯುಸಿ ರ್ಯಾಂಕ್ ಪಡೆದ ವಿದ್ಯಾರ್ಥಿ ಹೇಳಿಕೊಂಡಿದ್ದಾರೆ ಮತ್ತು ಮಹಿಳೆಯೊಬ್ಬರು ಹಣವನ್ನು ಉಳಿಸಿ ಫ್ರಿಡ್ಜ್ ಖರೀದಿಸಿದ್ದಾರೆ ಎಂದು ಸೊರಕೆ ಗ್ಯಾರಂಟಿ ಯೋಜನೆಗಳ ಪ್ರಯೋಜನಗಳ ಬಗ್ಗೆ ವಿವ-ರಿಸಿದ್ದಾರೆ.

ಮಹಿಳೆಯರು ಉತ್ತಮ ಜೀವನ ನಡೆಸಲು ಸಮರ್ಥರಾಗಿದ್ದಾರೆ. ಈ ನಿಟ್ಟಿನಲ್ಲಿ ಬಿಜೆಪಿ ಕೊಡುಗೆ ಎಷ್ಟು? ಖಾತ್ರಿಗಳ ಬಗ್ಗೆ ಬಿಜೆಪಿಯವರು ಸುಳ್ಳು ಹೇಳಿದರೆ ಫಲಾನುಭವಿಗಳು ತಕ್ಕ ಪಾಠ ಕಲಿಸುತ್ತಾರೆ ಎಂದರು.

ದೇಶದಲ್ಲಿ ಕಾಂಗ್ರೆಸ್ ಪರ ಅಲೆ ಇದ್ದು, ರಾಜ್ಯದಲ್ಲಿ ಪಕ್ಷ 20 ಸ್ಥಾನ ಗೆಲ್ಲಲಿದೆ ಎಂದರು. ಕೆಪಿಸಿಸಿ ಚುನಾವಣಾ ಪ್ರಚಾರ ಸಮಿತಿ ಸಹ ಅಧ್ಯಕ್ಷ ಎಲ್. ಹನುಮಂತಯ್ಯ ಮಾತನಾಡಿ, 'ಕಾಂಗ್ರೆಸ್ ಪಕ್ಷದ ಗ್ಯಾರಂಟಿ ಯೋಜನೆಗಳಿಂದ ಬಿಜೆಪಿ ಹೆದರಿದೆ. ಈ ಕಾರಣದಿಂದ ಗ್ಯಾರಂಟಿ ಯೋಜನೆ ಕು-ರಿತ ಮಾಹಿತಿಯುಳ್ಳ ಪತ್ರಗಳನ್ನು ವಿತರಿಸದಂತೆ ತಡೆಯಲು ಪ್ರಯತ್ನಿಸುತ್ತಿದೆ ಎಂದರು.

## ಬೆಳಗಾವಿ: ದಾಖಲೆಗಳಿಲ್ಲದೆ ಸಾಗುಸುತ್ತಿದ್ದ 5 ಲಕ್ಷ ರೂ. ನಗದು ವಶ




ಬೆಳಗಾವಿ: ಕಣಬರ್ಗಿ ಬಳಿ ಇರುವ ಲೋಕಸಭಾ ಚುನಾವಣೆ ಪ್ರಯುಕ್ತ ಉತ್ತರ ಮತಕ್ಷೇತ್ರದ ಚಕಪೋಸ್ಟ ಬಳಿ ಗೋಕಾಕನಿಂದ ಬೆಳಗಾವಿಗೆ ಪ್ರಯಾಣಿಸುತ್ತಿರುವ ಕಾರಿನಲ್ಲಿ ದಾಖಲೆಗಳಿಲ್ಲದೆ ಸಾಗುಸುತ್ತಿದ್ದ 5,26,500 ನಗದು ಹಣವನ್ನು ಚಕಪೋಸ್ಟ ತನಿಖಾ ತಂಡದ ಮುಖ್ಯಸ್ಥರಾದ ಹರ್ಷವರ್ಧನ ಅಗಸರ್ ಮತ್ತು ಮಾಳಮಾರುತಿ ಪೋಲೀಸ್ ಠಾಣೆಯ ಸಿಬ್ಬಂದಿ ತಿರಿಥಿ ರೇಶ್ಮಿ ಅವರು ವಶಕ್ಕೆ ಪಡೆದು ಪ್ರಕರಣವನ್ನು ದಾಖಲಿಸಿಕೊಂಡಿದ್ದಾರೆ.

ಸೂಕ್ತ ದಾಖಲೆಗಳನ್ನು ನೀಡಿ ಹಣವನ್ನು ಪಡೆದುಕೊಳ್ಳಬಹುದು. ಇಲ್ಲವಾದರೆ ಕಾನೂನು ಪ್ರಕಾರ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

## ವಿನಾಶಕಾಲೆ ವಿಪರೀತ ಬುದ್ಧಿ ಎಂಬಂತಹ ಸ್ಥಿತಿ ಬಿಜೆಪಿಗೆ ಬಂದಿದೆ: ಶಾಸಕ ಸವದಿ ಆಕ್ರೋಶ



ಕಲಬುರಗಿ: ಕಾಂಗ್ರೆಸ್ ಶಾಸಕ ಲಕ್ಷ್ಮಣ ಸವದಿ ಅವರು ಭಾರತ್ ಮಾತಾ ಕಿ ಜೈ ಎಂಬುದಾಗಿ ಕೂಗುವ ಮೊದಲು "ಖರ್ಗೆಯವರು ತಪ್ಪು ತಿಳಿದುಕೊಳ್ಳಬಾರದು" ಎಂದು ಹೇಳಿರುವುದು ಈಗ ರಾಜಕೀಯ ಮೇಲಾಟಕ್ಕೆ ಕಾರಣವಾಗಿದೆ. "ಕಾಂಗ್ರೆಸ್‌ನಲ್ಲಿ ಭಾರತ್ ಮಾತಾ ಕಿ ಜೈ ಎಂದು ಕೂಗಲು ಕೂಡ ಅನುಮತಿ ಪಡೆಯಬೇಕಾದ ದುಸ್ಥಿತಿ ಇದೆ" ಎಂದು ಬಿಜೆಪಿ ಟೀಕಿಸಿದ ಬೆನ್ನಲ್ಲೇ ಲಕ್ಷ್ಮಣ ಸವದಿ ತಿರುಗೇಟು ನೀಡಿದ್ದಾರೆ. "ಭಾರತ್ ಮಾತಾ ಕಿ ಜೈ ಎಂಬ ಘೋಷಣೆಯು ಬಿಜೆಪಿ ಮನೆ ಆಸ್ತಿನಾ" ಎಂದು ಪ್ರಶ್ನಿಸಿದ್ದಾರೆ.

ಕಲಬುರಗಿಯಲ್ಲಿ ಮಾತನಾಡಿದ ಲಕ್ಷ್ಮಣ ಸವದಿ, "ವಿನಾಶಕಾಲೆ ವಿಪರೀತ ಬುದ್ಧಿ ಎಂಬಂತಹ ಸ್ಥಿತಿ ಬಿಜೆಪಿಗೆ ಬಂದಿದೆ. ಭಾರತ್ ಮಾತಾ ಕಿ ಜೈ ಅನ್ನೋದು ದೇಶದ ಪ್ರತಿಯೊಬ್ಬ ಪ್ರಜೆಯ ಹಕ್ಕು, ಅಭಿಮಾನ ಹಾಗೂ ದೇಶಭಕ್ತಿಯಾಗಿದೆ. ಕಾಂಗ್ರೆಸ್‌ನಲ್ಲಿ ಕೂಡ ಭಾರತ್ ಮಾತಾ ಕಿ ಜೈ ಎನ್ನುತ್ತೇವೆ. ದೇಶಭಕ್ತಿ, ಘೋಷಣೆಗಳು ಬಿಜೆಪಿಯವರಿಗೆ ಗುತ್ತಿಗೆ ಕೊಡಲಾಗಿದೆಯೇ? ವಂದೇ ಮಾತರಂ ಅನ್ನುತ್ತೇವೆ, ಜೈ ಹಿಂದು ಕೂಡ ಎನ್ನುತ್ತೇವೆ. ನಮ್ಮಲ್ಲಿ ಇವರಿಗಿಂತ ದೇಶಭಕ್ತಿ ಹೆಚ್ಚಿದೆ" ಎಂದು ತಿರುಗೇಟು ನೀಡಿದರು.

ಬಿಜೆಪಿಯವರ ದೇಶಭಕ್ತಿಯು ತೋರಿಕೆಗೆ ಸೀಮಿತವಾಗಿದೆ. ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟಿದ್ದೇ ಕಾಂಗ್ರೆಸ್. 400ಕ್ಕೂ ಅಧಿಕ ಸೀಟು ಗೆದ್ದರೆ ಸಂವಿಧಾನ ಬದಲಾಯಿಸುತ್ತೇವೆ ಎಂಬುದಾಗಿ ಹೇಳುತ್ತಾರೆ.

ಹಾಗಾಗಿ, ಬಿಜೆಪಿಯವರೇ ನಿಜವಾದ ದೇಶದ್ರೋಹಿಗಳು. ಸಂವಿಧಾನವನ್ನು ವಿರೋಧಿಸುತ್ತಾರೆ, ಜಾತಿ ವಿರೋಧ ಮಾಡುತ್ತಾರೆ. ಇವರ ಮನಸ್ಥಿತಿಯಿಂದಾಗಿ ದೇಶಕ್ಕೆ ಹಾನಿಯಾಗುತ್ತಿದೆ" ಎಂದು ಹೇಳಿದರು.

ನನ್ನ ಹೆಸರೇ ಲಕ್ಷ್ಮಣ, ಜೈ ಶ್ರೀರಾಮ್ ಎನ್ನುವೆ: ದೇಶದಲ್ಲಿ ಘೋಷಣೆ ಕೂಗಲು ಬಿಜೆಪಿಯವರ ಪರ್ಮಿಷನ್ ತೆಗೆದುಕೊಳ್ಳಬೇಕಾ? ಅದೇ ಅವರ ಅಪ್ಪನ ಮನೆ ಆಸ್ತಿಯೇ? ನನ್ನ ಹೆಸರೇ ಲಕ್ಷ್ಮಣ. ರಾಮನ ತಮ್ಮನ ಹೆಸರು ಲಕ್ಷ್ಮಣ. ಜೈ ಶ್ರೀರಾಮ್ ಎಂದು ಘೋಷಣೆ ಕೂಗುತ್ತೇವೆ. ಭಾರತ್ ಮಾತಾ ಕಿ ಜೈ ಎನ್ನುತ್ತೇವೆ. ದೇಶಭಕ್ತಿಯ ಪಾಠವನ್ನು ಬಿಜೆಪಿಯವರಿಂದ ಕಲಿಯಬೇಕಿಲ್ಲ" ಎಂದರು.

ರಾಮೇಶ್ವರಂ ಕೆಫೆ ಸ್ಫೋಟದ ಕುರಿತು ಮಾತನಾಡಿದ ಲಕ್ಷ್ಮಣ ಸವದಿ, "ಪ್ರತಿಯೊಂದು ವಿಷಯದಲ್ಲೂ ರಾಜಕೀಯ ಮಾಡುವುದು ಬಿಜೆಪಿಯವರ ಕೆಲಸ. ಇಂತ ಕೀಳು ರಾಜಕೀಯದಿಂದಾಗಿಯೇ ಅವರು ಕೇಂದ್ರದಲ್ಲಿ ಅಧಿಕಾರಕ್ಕೆ ಬರಲ್ಲ" ಎಂದು ವಾಗ್ದಾಳಿ ನಡೆಸಿದರು.

## ಸಂವಿಧಾನ ಬದಲಾಯಿಸುತ್ತೇವೆ ಎಂದು ಹೇಳಿಕೆ ನೀಡಿರುವ ಸಂಸದರನ್ನು ಉಚ್ಚಾಟಿಸಲಿ: ಮೋದಿಗೆ ಡಿಕೆಶಿ ಸವಾಲು



ಬೆಂಗಳೂರು: ಸಂವಿಧಾನದ ಬದಲಾಯಿಸುತ್ತೇವೆ ಎಂದು ಹೇಳಿಕೆ ನೀಡಿರುವ ತಮ್ಮ ಸಂಸದರನ್ನು ಪ್ರಧಾನಿ ಮೋದಿಯವರು ಮೊದಲು ಉಚ್ಚಾಟಿಸಲಿ ಎಂದು ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಸವಾಲು ಹಾಕಿದರು.

ಅಂಬೇಡ್ಕರ್ ಬಂದರೂ ಸಹ ಸಂವಿಧಾನ ಬದಲಿಸಲು ಸಾಧ್ಯವಿಲ್ಲ ಎನ್ನುವ ಮೋದಿ ಹೇಳಿಕೆಗೆ ಪ್ರತಿಕ್ರಿಯೆ ನೀಡಿರುವ ಡಿಕೆಶಿ, ಮೋದಿಯವರು ಚುನಾವಣೆ ಸಂದರ್ಭದಲ್ಲಿಯೇ ಈ ಮಾತು ಯಾಕೆ ಹೇಳಿದರು? ಅವರಿಗೆ ಸಂವಿಧಾನದ ಮೇಲೆ ನಂಬಿಕೆ ಇಲ್ಲ. ಅವರಿಗೆ ನಂಬಿಕೆ ಇದ್ದಿದ್ದರೆ ತಮ್ಮದೇ ಪಕ್ಷದ ನಾಯಕರು ಸಂವಿಧಾನ ಬದಲಾವಣೆ ಕುರಿತು ಹೇಳಿಕೆ ನೀಡಿದ್ದಾಗ ಯಾಕೆ ಸುಮ್ಮನಿದ್ದರು? ಮೊದಲು ಅವರನ್ನು ಉಚ್ಚಾಟಿಸಲಿ ಎಂದು ಆಕ್ರೋಶ ಹೊರಹಾಕಿದರು.

ರಾಜ್ಯ ಸರ್ಕಾರಕ್ಕೆ ಗ್ಯಾರಂಟಿಯಿಲ್ಲ ಎನ್ನುವ ದೇವೇಗೌಡರ ಹೇಳಿಕೆಗೆ ಪ್ರತಿಕ್ರಿಯಿಸಿದ ಡಿಕೆಶಿ, ದೇವೇಗೌಡರು ಎಷ್ಟು ಭವಿಷ್ಯಗಾರರನ್ನು ನೋಡಿದ್ದಾರೋ ನಾವು ಅಷ್ಟೇ ನೋಡಿದ್ದೇನೆ. ಅವರಿಗೆ 60 ವರ್ಷದ ರಾಜಕಾರಣದ ಅನುಭವ ಇರಬಹುದು. ನನಗೆ 40 ವರ್ಷಗಳ ಅನುಭವ ಇದೆ. 136 ಪ್ಲಸ್ ಪ್ಲಸ್ ಸೀಟು ಇವೆ. ಅವರ ಪಾರ್ಟಿ ಇರುತ್ತದೋ ಇಲ್ಲವೋ ಎಂಬುದರ ಬಗ್ಗೆ ಅವರಿಗೆ ಮೊದಲು ಸ್ಪಷ್ಟತೆ ಇರಲಿ. ನಮ್ಮ ಸರ್ಕಾರ ಅಸ್ತಿತ್ವದಲ್ಲಿದೆ. ಆದರೆ, ಅವರ ಪಾರ್ಟಿಗೆನೆ ಅಸ್ತಿತ್ವ ಇಲ್ಲ ಎಂದು ತಿರುಗೇಟು ನೀಡಿದರು.




## ಕಾರು–ಲಾರಿ ಅಪಘಾತ; ನಾಲ್ವರು ಸ್ಥಳದಲ್ಲೇ ಸಾವು

ವಿಜಯಪುರ: ಇಲ್ಲಿನ ಬಬಲೇಶ್ವರ ತಾಲೂಕಿನ ಅರ್ಜುಣಗಿ ಗ್ರಾಮದ ಬಳಿ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ನಾಲ್ವರು ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ನಡೆದಿದೆ.

ಕಾರು ಹಾಗೂ ಲಾರಿ ಮಧ್ಯೆ ಭೀಕರ ಅಪಘಾತವಾಗಿ ಸ್ಥಳದಲ್ಲೇ ನಾಲ್ವರು ಮೃತಪಟ್ಟಿದ್ದಾರೆ. ಇಬ್ಬರು ಪುರುಷರು, ಓರ್ವ ಮಹಿಳೆ, ಓರ್ವ ಬಾಲಕ ಸಾವಿಗೀಡಾಗಿದ್ದಾರೆ. ಮೃತರ ಹೆಸರು ಇನ್ನು ತಿಳಿದು ಬಂದಿಲ್ಲ.

ವಿಜಯಪುರದಿಂದ ಜಮಖಂಡಿಗೆ ಕಾರು ಹೊರಟಿತ್ತು. ಜಮಖಂಡಿ ಕಡೆಯಿಂದ ವಿಜಯಪುರಕ್ಕೆ ಲಾರಿ ಬರುವ ವೇಳೆ ಅಪಘಾತ ಸಂಭವಿಸಿದೆ.

ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸುತ್ತಿದ್ದಾರೆ. ಬಬಲೇಶ್ವರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

## ಕಾಂಗ್ರೆಸ್ ಗೆದ್ದರೆ ಬೆಳಗಾವಿ ತ್ವರಿತಗತಿಯಲ್ಲಿ ಅಭಿವೃದ್ಧಿ: ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಭರವಸೆ



ಬೆಳಗಾವಿ: ಕಾಂಗ್ರೆಸ್ ಪಕ್ಷದಿಂದ ಮಾತ್ರ ದೀನ ದಲಿತರ ಏಳಿಗೆ ಸಾಧ್ಯ. ಮುಂಬರುವ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಬೇಕು ಎಂದು ಮಹಿಳಾ ಮತ್ತು ಮಹಿಳಾ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ವಿನಂತಿಸಿದರು.


ಬೆಳಗಾವಿ ದಕ್ಷಿಣ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ವಡಗಾವಿ, ಹುಂಚನಹಟ್ಟಿ, ಪೀರಣವಾಡಿ, ಸಮರ್ಥ ನಗರದಲ್ಲಿ ಮತಯಾಚಿಸಿದ ಸಚಿವರು, ಕಾಂಗ್ರೆಸ್‌ನಿಂದ ಯೋಗ್ಯ ಅಭ್ಯರ್ಥಿ ಸ್ಪರ್ಧಿಸಿದ್ದು, ಈ ಬಾರಿ ಕಾಂಗ್ರೆಸ್ ಜಯಿಸಲು ಉತ್ತಮ ವಾತಾವರಣವಿದೆ ಎಂದು ಹೇಳಿದರು.

**ಹೊರಗಿನ ಅಭ್ಯರ್ಥಿಯನ್ನು ತಿರಸ್ಕರಿಸಿ:** ಸಾಧನೆಯೂ ಇಲ್ಲದ, ಬೆಳಗಾವಿಗೆ ಸಂಬಂಧವೂ ಇಲ್ಲದ, ಬೆಳಗಾವಿಗೆ ನಿರಂತರ ಅನ್ಯಾಯ ಮಾಡಿರುವ ಜಗದೀಶ್ ಶೆಟ್ಟರ್ ಅವರನ್ನು ತಿರಸ್ಕರಿಸಿ, ಸ್ಥಳೀಯ ಮನೆ ಮಗ ಮೃಣಾಲ್ ಹೆಬ್ಬಾಳ್ಕರ್ ಅವರನ್ನು ಬೆಂಬಲಿಸಿ ಎಂದು ಸಚಿವರು ಮನವಿ ಮಾಡಿದರು. ಹುಬ್ಬಳ್ಳಿಯಲ್ಲಿ ಆರು ಬಾರಿ ಶಾಸಕರಾಗಿ, ಎರಡು ಬಾರಿ ವಿರೋಧ ಪಕ್ಷದ ನಾಯಕರಾಗಿ, ಮುಖ್ಯಮಂತ್ರಿ ಆಗಿದ್ದರೂ ಬಿಜೆಪಿಗೆ ದ್ರೋಹ ಎಸಗಿ ಕಳೆದ ವರ್ಷ ಕಾಂಗ್ರೆಸ್ ಗೆ ಬಂದರು. ಬಿಜೆಪಿ ನಾಯಕರನ್ನು ಬೈಯುತ್ತಲೇ ಏಕಾಏಕಿ ಕಾಂಗ್ರೆಸ್ ಬಿಟ್ಟು, ಬಿಜೆಪಿಗೆ ಹೋದರು. ಇಂತ ಸಮಯಸಾಧಕ ರಾಜಕಾರಣಿ ನಮ್ಮ ಜಿಲ್ಲೆಗೆ ಬೇಕಾ ಎಂದು ಪ್ರಶ್ನಿಸಿದರು.

ದೀನ ದಲಿತರ ಏಳಿಗೆಗಾಗಿ ಕಾಂಗ್ರೆಸ್ ಪಕ್ಷ ಹಲವು ಯೋಜನೆಗಳನ್ನ ತಂದಿದೆ. ಪಂಚ ಗ್ಯಾರಂಟಿ ಯೋಜನೆಗಳ ಮೂಲಕ ಪ್ರತಿ ಮನೆಗೆ ಸರಾಸರಿ 4 ರಿಂದ 5 ಸಾವಿರ ರೂಪಾಯಿ ತಲುಪುತ್ತಿದೆ. ಬಿಜೆಪಿ ಶ್ರೀಮಂತರ ಸಾಲ ಮನ್ನಾ ಮಾಡುವ ಮೂಲಕ ಶ್ರೀಮಂತರಿಗಷ್ಟೇ ಸೀಮಿತವಾಗಿದೆ ಎಂದು ಆರೋಪಿಸಿದರು. ಮೃಣಾಲ್ ಹೆಬ್ಬಾಳ್ಕರ್ ಗೆದ್ದರೆ ಕ್ಷೇತ್ರದ ಮನೆ ಮಗನಾಗಿ ಕೆಲಸ ಮಾಡಲಿದ್ದಾನೆ ಎಂದು ಹೇಳಿದರು. ನಿಮ್ಮ ಮಗನಿಗೆ ಮತ ನೀಡಿ, ಕ್ಷೇತ್ರದ ಅಭಿವೃದ್ಧಿಗೆ ಕೈಜೋಡಿಸಿ ಎಂದು ಕರೆ ನೀಡಿದರು.

ಸಚಿವರು ಹೋದಲೆಲ್ಲಾ ಸ್ಥಳೀಯ ಕಾರ್ಯಕರ್ತರು ಪಟಾಕಿ ಸಿಡಿಸಿ ಅದ್ದೂರಿ ಸ್ವಾಗತ ನೀಡಿದರು. ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಪರಶುರಾಮ ಢಗೆ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎಂ.ಜೆ.ಪ್ರದೀಪ್ ಮೊದಲಾದವರು ಸಚಿವರಿಗೆ ಸಾಥ್ ನೀಡಿದರು.

## ಬಾಲ್ಯ ವಿವಾಹದಿಂದ ತಪ್ಪಿಸಿಕೊಂಡಿದ್ದ ಬಾಲಕಿ ಬೋರ್ಡ್ ಪರೀಕ್ಷೆಯಲ್ಲಿ ಟಾಪರ್




ಹೈದರಾಬಾದ್: ಬಾಲ್ಯ ವಿವಾಹದ ಪಿಡುಗಿನಿಂದ ತಪ್ಪಿಸಿಕೊಂಡಿದ್ದ ಆಂಧ್ರಪ್ರದೇಶದ ಬಾಲಕಿ ಇದೀಗ ಇಂಟರ್ ಮೀಡಿಯೇಟ್ ಬೋರ್ಡ್ ಪರೀಕ್ಷೆಯಲ್ಲಿ ಟಾಪರ್ ಆಗಿದ್ದಾಳೆ.

ಆಂಧ್ರಪ್ರದೇಶದ ಕರ್ನೂಲ್ ಜಿಲ್ಲೆಯ ಅದೋನಿ ಮಂಡಲದ ಪೆದ್ದಹರಿವನಂ ಗ್ರಾಮದ ನಿರ್ಮಲಾ ಎಂಬ ಬಾಲಕಿ ಆಂಧ್ರಪ್ರದೇಶದ ಇಂಟರ್ ಮೀಡಿಯೇಟ್ ಪರೀಕ್ಷೆಯಲ್ಲಿ ಟಾಪರ್ ಆಗಿದ್ದಾಳೆ. ಈಕೆ 10 ನೇ ತರಗತಿಯಲ್ಲಿ 537 ಅಂಕ ಪಡೆದಿದ್ದಳು. ಆದರೆ ಹತ್ತನೇ ತರಗತಿ ಮುಗಿದ ಬಳಿಕ ಆಕೆಗೆ ಬಾಲ್ಯ ವಿವಾಹ ಮಾಡಿಸಲು ಮನೆಯವರು ಮುಂದಾಗಿದ್ದರು.

ಆದರೆ ಇದರ ವಿರುದ್ಧ ಸಿಡಿದು ನಿಂತ ನಿರ್ಮಲಾ ನನಗೆ ಮುಂದೆ ಐಪಿಎಸ್ ಆಗಬೇಕೆಂದು ಗುರಿ ಇಟ್ಟುಕೊಂಡು ಶಿಕ್ಷಣ ಮುಂದುವರಿಸಿದ್ದಳು. ಈಕೆಯ ತಂದೆ ಶ್ರೀನಿವಾಸ್ ಮತ್ತು ತಾಯಿ ಹನುಮಂತಮ್ಮ ಅವರ ನಾಲ್ವರು ಮಕ್ಕಳಲ್ಲಿ ಈಕೆ ಕಿರಿಯ ಮಗಳು. ಮನೆಯಲ್ಲಿ ತೀವ್ರ ಬಡತನದಿಂದಾಗಿ ಉಳಿದೊಬ್ಬ ಮಗಳನ್ನು ಅಪ್ರಾಪ್ತ ವಯಸ್ಸಿಗೇ ಮದುವೆ ಮಾಡಲು ಪೋಷಕರು ತೀರ್ಮಾನಿಸಿದ್ದರು. ಆಕೆಗೆ ಅದೋನಿ ಶಾಸಕ ಸಾಯಿಪ್ರಸಾದ್ ರೆಡ್ಡಿ ಹಾಗೂ ಸ್ಥಳೀಯ ಅಧಿಕಾರಿಗಳು ಬೆಂಬಲವಾಗಿ ನಿಂತು ಶಿಕ್ಷಣಕ್ಕೆ ಸಹಾಯ ಮಾಡಿದ್ದಾರೆ. ಇದೀಗ ಬಾಲ್ಯ ವಿವಾಹಕ್ಕೆ ಸೆಡ್ಡು ಹೊಡೆದು ಓದಿನಲ್ಲಿ ಗೆದ್ದು ಎಲ್ಲರಿಗೂ ಮಾದರಿಯಾಗಿದ್ದಾಳೆ.

## ಹುಬ್ಬಳ್ಳಿಯಲ್ಲಿ ಫ್ಲಿಪ್ ಕಾರ್ಟ್ ನ ದಿನಸಿ ಸೆಂಟರ್ ಆರಂಭ



ಹುಬ್ಬಳ್ಳಿ: ಭಾರತದ ಸ್ವದೇಶಿ ಇ–ಕಾಮರ್ಸ್ ಮಾರ್ಕೆಟ್ ಪ್ಲೇಸ್ ಆಗಿರುವ ಫ್ಲಿಪ್ ಕಾರ್ಟ್ ಹುಬ್ಬಳ್ಳಿಯಲ್ಲಿ ತನ್ನ ಹೊಸ ದಿನಸಿ ಫುಲ್ ಫಿಲ್ಮೆಂಟ್ ಕೇಂದ್ರವನ್ನು ಆರಂಭಿಸಿದೆ.

ಗ್ರಾಹಕರಿಗೆ ಆರ್ಡರ್ ಮಾಡಿದ ಮರುದಿನವೇ ದಿನಸಿ ಉತ್ಪನ್ನಗಳನ್ನು ತಲುಪಿಸುವ ಬದ್ಧತೆಯನ್ನು ಪೂರೈಸುವ ನಿಟ್ಟಿನಲ್ಲಿ ಈ ಕೇಂದ್ರ ಕಾರ್ಯನಿರ್ವಹಿಸಲಿದೆ. ಈ ಕೇಂದ್ರದಿಂದ 6,000 ಕ್ಕೂ ಅಧಿಕ ಉತ್ಪನ್ನಗಳನ್ನು ಗ್ರಾಹಕರ ಮನೆ ಬಾಗಿಲಿಗೆ ತಲುಪಿಸುವ ಉದ್ದೇಶ ಹೊಂದಿದೆ. ನಂದಿನಿ ಉತ್ಪನ್ನಗಳು, ವಿಜಯ್ ಸೇರಿದಂತೆ ಜನಪ್ರಿಯ ಉತ್ಪನ್ನಗಳು ಸೇರಿದಂತೆ ಇನ್ನಿತರ ಬ್ರ್ಯಂಡ್ ಗಳ ಉತ್ಪನ್ನಗಳನ್ನು ಈ ಕೇಂದ್ರಗಳಿಂದ ವಿತರಿಸಲಾಗುತ್ತದೆ.

ತಿಂಗಳಿಂದ ತಿಂಗಳಿಗೆ ಹುಬ್ಬಳ್ಳಿಯ ಆನ್ ಲೈನ್ ದಿನಸಿ ಮಾರುಕಟ್ಟೆ ಶೇ.15 ರಷ್ಟು ಹೆಚ್ಚಳ ಕಾಣುತ್ತಿದೆ. ಇದಲ್ಲದೇ, ಈ ಭಾಗದಲ್ಲಿ ತ್ವರಿತವಾದ ವಾಣಿಜ್ಯದ ಅಲಭ್ಯತೆಯಿಂದಾಗಿ ಗ್ರಾಹಕರಲ್ಲಿ ಮೌಲ್ಯಾಧಾರಿತ ಆಯ್ಕೆಯ ದಿನಸಿ ಪದಾರ್ಥಗಳಿಗೆ ಬೇಡಿಕೆ ಹೆಚ್ಚಳ ಕಂಡುಬರುತ್ತಿದೆ. ಈ ಬೇಡಿಕೆ ಹೆಚ್ಚಳದ ಹಿನ್ನೆಲೆಯಲ್ಲಿ ಈ ಸೆಂಟರ್ ಆರಂಭಿಸಲು ಕಾರಣವಾಗಿದೆ. ಇದು ಕರ್ನಾಟಕದ ಮೂರನೇ ಫುಲ್ ಫಿಲ್ಮೆಂಟ್ ಸೆಂಟರ್ ಆಗಿದೆ.

60,000 ಚದರಡಿಗೂ ಅಧಿಕ ವಿಸ್ತೀರ್ಣದಲ್ಲಿ ಆರಂಭವಾಗಿರುವ ಈ ಕೇಂದ್ರವು ಹುಬ್ಬಳ್ಳಿ ಮತ್ತು ಬಳ್ಳಾರಿ, ದಾವಣಗೆರೆ, ಧಾರವಾಡ, ಶಿವಮೊಗ್ಗ ಮತ್ತು ದಕ್ಷಿಣ & ಉತ್ತರ ಭಾಗದ ಗೋವಾಗಳಿಗೂ ಪ್ರತಿದಿನ 9,000 ಕ್ಕೂ ಅಧಿಕ ಆರ್ಡರ್ ಗಳನ್ನು ಪೂರೈಸುವ ಸಾಮರ್ಥ್ಯ ಹೊಂದಿದೆ. ಈ ಕೇಂದ್ರ ಆರಂಭಿಸುವ ಮೂಲಕ ಫ್ಲಿಪ್ ಕಾರ್ಟ್ ಡೈರಿ ಉತ್ಪನ್ನಗಳು, ಪಾನೀಯಗಳು, ಸ್ಟಾಪೆಲ್ ಗಳು, ಕ್ಲೀನಿಂಗ್ ಏಡ್ಸ್, ಆರೋಗ್ಯ & ಸೌಂದರ್ಯವರ್ಧಕ ಮತ್ತು ಇನ್ನಿತರ ಉತ್ಪನ್ನಗಳು ಸೇರಿದಂತೆ ವೈವಿಧ್ಯಮಯ ಗುಣಮಟ್ಟದ ಉತ್ಪನ್ನಗಳನ್ನು ಗ್ರಾಹಕರಿಗೆ ಅನುಕೂಲಕ್ಕೆ ತಕ್ಕಂತೆ ತಲುಪಿಸುವ ಬದ್ಧತೆ ಹೊಂದಿದೆ.

ಫ್ಲಿಪ್ ಕಾರ್ಟ್ ಗ್ರೂಪ್ ನ ಚೀಫ್ ಕಾರ್ಪೊರೇಟ್ ಅಫೇರ್ಸ್ ಆಫೀಸರ್ ರಜನೀಶ್ ಕುಮಾರ್ ಮಾತನಾಡಿ, "ಕರ್ನಾಟಕದಲ್ಲಿ ನಮ್ಮ ಮೂರನೇ ದಿನಸಿ ಫುಲ್ ಫಿಲ್ಮೆಂಟ್ ಸೆಂಟರ್ ಆರಂಭಿಸಿರುವುದು ನಮ್ಮ ಗ್ರಾಹಕರಿಗೆ ತಾಜಾತನದ ದಿನಸಿ ಪದಾರ್ಥಗಳನ್ನು ತಲುಪಿಸುವ ನಮ್ಮ ಬದ್ಧತೆಗೆ ಹಿಡಿದ ಕನ್ನಡಿಯಾಗಿದೆ. ಫ್ಲಿಪ್ ಕಾರ್ಟ್ ನಲ್ಲಿ ಸ್ಥಳೀಯ ಆರ್ಥಿಕತೆಯನ್ನು ಉತ್ತೇಜಿಸುವ ಮೂಲಕ ಪ್ರತಿಯೊಬ್ಬರನ್ನೂ ಭಾರತದ ಡಿಜಿಟಲ್ ಚಟುವಟಿಕೆಯ ಭಾಗವಾಗಿಸಲು ನಾವು ಬದ್ಧತೆ ಹೊಂದಿದ್ದೇವೆ. ರೈತ ಉತ್ಪಾದಕ ಸಂಸ್ಥೆಗಳೊಂದಿಗೆ ನಮ್ಮ ಕಾರ್ಯತಂತ್ರದ ಪಾಲುದಾರಿಕೆ ಬಲಪಡಿಸುವ ಮೂಲಕ ಮತ್ತು ರಾಜ್ಯದಲ್ಲಿನ ಕಾರ್ಯತಂತ್ರದ ಹೂಡಿಕೆಗಳನ್ನು ನಾವು ಸ್ಥಳೀಯ ಮಟ್ಟದ ಸಾವಿರಾರ ಎಂಎಸ್‌ಎಂಇಗಳು, ಸಣ್ಣ ಉದ್ಯಮಗಳು ಮತ್ತು ರೈತರಿಗೆ ಸೂಕ್ತ ಮಾರುಕಟ್ಟೆ ಪ್ರವೇಶವನ್ನು ಸುಗಮಗೊಳಿಸುವ ನಮ್ಮ ಕಾರ್ಯಚಟುವಟಿಕೆ ಮುಂದುವರಿಸುತ್ತೇವೆ" ಎಂದರು.

ಈ ಹಿಂದೆ ಹುಬ್ಬಳ್ಳಿಯು ಬೆಂಗಳೂರಿನಲ್ಲಿರುವ ಫುಲ್ ಫಿಲ್ಮೆಂಟ್ ಸೆಂಟರ್ ಮೇಲೆ ಅವಲಂಬಿತವಾಗಿತ್ತು. ಇದೀಗ ಹುಬ್ಬಳ್ಳಿಯಲ್ಲಿಯೇ ಕೇಂದ್ರ ಆರಂಭಿಸಿರುವುದರಿಂದ ತ್ವರಿತವಾಗಿ ಉತ್ಪನ್ನಗಳು ಗ್ರಾಹಕರ ಮನೆ ಬಾಗಿಲಿಗೆ ತಲುಪುವುದು ಸುಲಭವಾಗಿದೆ. ಫ್ಲಿಪ್ ಕಾರ್ಟ್ ನ ವಿಐಪಿ ಚಂದಾದಾರಿಕೆಗೆ ಅಪ್ ಗ್ರೇಡ್ ಮಾಡಿದ ಗ್ರಾಹಕರು ತಮ್ಮ ಎಲ್ಲಾ ದಿನಸಿ ಖರೀದಿಗಳಲ್ಲಿ ಶೇ.5 ರಷ್ಟು ಸೂಪರ್ ಕಾಯಿನ್ ಗಳನ್ನು ಗಳಿಸಬಹುದಾಗಿದೆ. ಈ ಕಾಯಿನ್ ಗಳಿಗೆ ಬದಲಾಗಿ ಫ್ಲಿಪ್ ಕಾರ್ಟ್ 'ಗ್ರಾಸರಿ ಪಾಸ್' ಅನ್ನೂ ನೀಡಲಾಗುತ್ತದೆ. ವಾಯ್ಸ್–ಎನೇಬಲ್ಡ್ ಶಾಪಿಂಗ್, ಪ್ರಾದೇಶಿಕ ಭಾಷೆ, ಕ್ರೆಡಿಟ್ ಆಫರ್ ಗಳು ಮತ್ತು ಓಪನ್ ಡೆಲಿವರಿ ವೈಶಿಷ್ಟ್ಯತೆಗಳ ಮೂಲಕ ಫ್ಲಿಪ್ ಕಾರ್ಟ್ ನ ಗ್ರಾಹಕ–ಮೊದಲ ವಿಧಾನವು ದಿನಸಿ ಶಾಪಿಂಗ್ ಅನುಭವವನ್ನು ಕ್ರಾಂತಿಕಾರಿಗೊಳಿಸಲಿದೆ.

## ಬೆಳಗಾವಿ ಲೋಕಸಭಾ ಕ್ಷೇತ್ರ: ಚುನಾವಣಾ ವೆಚ್ಚ ವೀಕ್ಷಕರು ಸಾರ್ವಜನಿಕ ಭೇಟಿಗೆ ಲಭ್ಯ

ಬೆಳಗಾವಿ: ಚುನಾವಣಾ ಆಯೋಗವು ನೇಮಿಸಿರುವ ಬೆಳಗಾವಿ ಲೋಕಸಭಾ ಕ್ಷೇತ್ರದ ಚುನಾವಣಾ ವೀಕ್ಷಕರು ಜಿಲ್ಲೆಗೆ ಆಗಮಿಸಿದ್ದು, ಸಾರ್ವಜನಿಕರ ಭೇಟಿಗೆ ಲಭ್ಯವಿರುತ್ತಾರೆ.

02–ಬೆಳಗಾವಿ ಲೋಕಸಭಾ ಕ್ಷೇತ್ರದ ವ್ಯಾಪ್ತಿಯ ಒಟ್ಟು ಎಂಟು ವಿಧಾನಸಭಾ ಕ್ಷೇತ್ರಗಳಿಗೆ ಸಂಬಂಧಿಸಿದಂತೆ ಇಬ್ಬರು ವೆಚ್ಚ ವೀಕ್ಷಕರನ್ನು ನೇಮಿಸಲಾಗಿದ್ದು, ತಲಾ ನಾಲ್ಕು ವಿಧಾನಸಭಾ ಕ್ಷೇತ್ರಗಳ ಮೇಲೆ ಇವರು ನಿಗಾ ವಹಿಸಲಿದ್ದಾರೆ.

**ವೆಚ್ಚ ವೀಕ್ಷಕರ ಹೆಸರು, ಮೊಬೈಲ್ ಸಂಖ್ಯೆ, ಭೇಟಿಯ ಸಮಯ ಹಾಗೂ ಸ್ಥಳದ ವಿವರ:**

ಐಆರ್ ಎಸ್ ಅಧಿಕಾರಿಗಳಾದ ಹರಕ್ರಿಪಾಲ್ ಖಟಾನಾ(ಅರಭಾವಿ, ಗೋಕಾಕ, ಬೆಳಗಾವಿ–ಉತ್ತರ ಮತ್ತು ಬೆಳಗಾವಿ–ದಕ್ಷಿಣ) ಮೊಬೈಲ್ ಸಂಖ್ಯೆ–7259751395); ಲೋಕೋಪಯೋಗಿ ಇಲಾಖೆಯ ಪ್ರವಾಸಿಮಂದಿರ(ಹಳೆ ಐಬಿ) ಕೊಠಡಿ ಸಂಖ್ಯೆ–4, ಬೆಳಗಾವಿ. ಸಮಯ–ಬೆಳಿಗ್ಗೆ 10 ರಿಂದ 11 ಗಂಟೆ. ನರಸಿಂಗ್ ರಾವ್ ಬಿ.(ಬೆಳಗಾವಿ–ಗ್ರಾಮೀಣ, ಬೈಲಹೊಂಗಲ, ಸವದತ್ತಿ–ಯಲ್ಲಮ್ಮ ಮತ್ತು ರಾಮದುರ್ಗ) ಮೊಬೈಲ್ ಸಂಖ್ಯೆ–7348921395); ಲೋಕೋಪಯೋಗಿ ಇಲಾಖೆಯ ಪ್ರವಾಸಿಮಂದಿರ(ಹಳೆ ಐಬಿ) ಕೊಠಡಿ ಸಂಖ್ಯೆ–9, ಬೆಳಗಾವಿ. ಸಮಯ–ಬೆಳಿಗ್ಗೆ 10 ರಿಂದ 11 ಗಂಟೆ.

ಬೆಳಗಾವಿ ಲೋಕಸಭಾ ಕ್ಷೇತ್ರಕ್ಕೆ ನೇಮಕಗೊಂಡಿರುವ ಚುನಾವಣಾ ವೆಚ್ಚ ವೀಕ್ಷಕರು ಸಾರ್ವಜನಿಕರ ಭೇಟಿಗೆ ಲಭ್ಯವಿರುತ್ತಾರೆ ಎಂದು ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ ಅವರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ಗವನಾಳ ಸಂಕೇಶ್ವರದಲ್ಲಿ ಕೆಎಲ್‌ಇ ಆಂಗ್ಲ ಮಾಧ್ಯಮ ಶಾಲೆ ಉದ್ಘಾಟನೆ



ಬೆಳಗಾವಿ: ಕೆಎಲ್‌ಇ ಸಂಸ್ಥೆಯು ನಾಡಿನಲ್ಲಿ ಅಕ್ಷರ ಬೀಜವನ್ನು ಭಿತ್ತಿ ಕೋಟ್ಯಂತರ ವಿದ್ಯಾರ್ಥಿಗಳನ್ನು ರೂಪಿಸಿದೆ. ಸಪ್ತರ್ಷಿಗಳು ಕಂಡ ಕನಸನ್ನು ಸಾಕಾರಗೊಳಿಸಿದೆ. ಜನಮುಖಿಯಾದ ಕಾರ್ಯಗಳನ್ನು ಮಾಡಿ ಮಾದರಿಯಾಗಿದೆ ಎಂದು ರಾಜ್ಯಸಭಾ ಸದಸ್ಯೆ ಹಾಗೂ ಇನ್ಫೋಸಿಸ್ ಫೌಂಡೇಶನ್ ಅಧ್ಯಕ್ಷರಾದ ಪದ್ಮಭೂಷಣ ಡಾ.ಸುಧಾ ಮೂರ್ತಿಯವರು ಹೇಳಿದರು.

ಅವರು ಗವನಾಳ–ಸಂಕೇಶ್ವರದಲ್ಲಿ ಕೆ–ಎಲ್‌ಇ ಆಂಗ್ಲ ಮಾಧ್ಯಮ (ಸಿಬಿಎಸ್‌ಸಿ) ಶಾಲೆಯ ನೂತನ ಕಟ್ಟಡ ಉದ್ಘಾಟನೆ, ಶ್ರೀಮತಿ ಮಾಲುತಾಯಿ ಶಿವಪುತ್ರ ಶಿರಕೋಳಿ ನಾಮಕರಣ ಸಮಾರಂಭವನ್ನು ದಿ. 13 ಏಪ್ರಿಲ್ 2024 ರಂದು ನೆರವೇರಿಸಿ ಮಾತನಾಡಿದರು, 'ಜೀವನದಲ್ಲಿ ಕಷ್ಟಪಟ್ಟು ಓದಿದರೆ ಯಾವುದು ಅಸಾಧ್ಯವಲ್ಲ. ನನಗೆ ವಿದ್ಯಾಭ್ಯಾಸವನ್ನು ನೀಡಿ ಆತ್ಮಬಲ ತುಂಬಿದ ಕೆಎಲ್‌ಇ ಸಂಸ್ಥೆ ಋಣವನ್ನು ನಾನು ಎಂದು ಮರೆಯಲಾರೆ. ವಿದ್ಯಾರ್ಥಿಗಳು ಪರಿಶ್ರಮ ಪಡಬೇಕು. ಕಲಿಯುವ ಕಾಲಕ್ಕೆ ಕಲಿಯಬೇಕು, ಜೀವನವು ಪ್ರತಿದಿನವು ಪರೀಕ್ಷೆಯಿಂದ ಕೂಡಿದೆ. ಕಷ್ಟಪಟ್ಟು ಓದಿದರೆ ಪ್ರತಿಫಲ ತಾನಾಗಿಯೇ ಬರುತ್ತದೆ. ನಮ್ಮ ಮನಸ್ಸಿನ ದೇವರಿಗೆ ವಿರುದ್ಧವಾಗಿ ನಡೆಯಬಾರದು. ಯಶಸ್ಸಿನ ಮೆಟ್ಟಲು ಎಷ್ಟೋ ಸಲ ವಿಫಲವಾಗುತ್ತದೆ. ಅದನ್ನು ಸವಾಲಾಗಿ ಸ್ವೀಕರಿಸಿದಾಗ ಜಯ ನಮ್ಮದೇ. ಪ್ರತಿನಿತ್ಯ ಎಷ್ಟು ಶ್ರಮಿಸುತ್ತೀರಿ ಅಷ್ಟು ನಿಮಗೆ ಪ್ರತಿಫಲ ದೊರೆಯುತ್ತದೆ. ಹಿರಿಯರು, ಶಿಕ್ಷಕರ ಅನುಭವಗಳನ್ನು ಪಡೆಯಬೇಕು. ಹಿರಿಯರ ಮಾತಿಗೊಂದು ತೂಕವಿದೆ. ಅದನ್ನು ಅನುಕರಣೆಗೆ ತರಬೇಕು. ಆಚಾರ್ಯ ದೇವೋಭವ ಎಂಬ ಮಾತಿನಂತೆ ಶಿಕ್ಷಕರ ಮಾರ್ಗದರ್ಶನದೊಂದಿಗೆ ಜೀವನವನ್ನು ರೂಪಿಸಿಕೊಳ್ಳಬೇಕು' ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

'ಸೌಹಾರ್ದಯುತ ಜೀವನವಿರಬೇಕು. ಟೆನಿಸ್ ಆಟಗಾರನಂತೆ ಒಂಟಿಯಾಗಿ ನಿರ್ಧಾರಕೈಗೊಳ್ಳಬೇಕು. ಕ್ರಿಕೆಟ್ ತಂಡದಂತೆ ಸಾಂಘಿಕವಾಗಿ ಕಾರ್ಯನಿರ್ವಹಿಸಿದಾಗ ಜಯ ನಮ್ಮದಾಗುತ್ತದೆ. ಪರರ ಧನಮುಟ್ಟದೆ ಕಾರ್ಯನಿರ್ವಹಿಸುತ್ತಾ ಸಾಗಬೇಕು. ಕಾರ್ಯದಲ್ಲಿ ವಿಫಲತೆ ಯಾದಾಗ ಅದು ಯಶಸ್ಸಿಗೆ ದಾರಿ. ತನು ಮನದಿಂದ ಮಾಡುವ ದಾನವುಪುಣ್ಯದ ಕೆಲಸ.ಅದು ಲಿಂಗಪೂಜೆಯಂತೆ. ಅದರಲ್ಲಿ ಶಿಕ್ಷಣಕ್ಕಾಗಿನೀಡುವ ಭೂದಾನ ಅತ್ಯಂತ ಶ್ರೇಷ್ಠವಾದ್ದು. ಶಿರಕೋಳಿ ಕುಟುಂಬದವರು ಶಿಕ್ಷಣಕ್ಕಾಗಿ ನೀಡಿದ ದಾನ ಅಮರವೆನಿಸಿಕೊಂಡಿದೆ. ಹಳ್ಳಿಯಲ್ಲಿ ಕೆ–ಎಲ್‌ಇ ಸಂಸ್ಥೆಯು ಮಾದರ್ಶಶಾಲೆಯನ್ನು ಪ್ರಾರಂಭಿಸುವ ಮೂಲಕ ಮಹತ್ತರವಾದ ಕೊಡುಗೆಯನ್ನ ನೀಡಿದೆ.ಗ್ರಾಮೀಣ ಶಾಲೆಗಳು ಬಹಳ ದುಸ್ಥಿತಿಯಲ್ಲಿದ್ದು ಅವುಗಳ ಕಡೆ ಸರ್ಕಾರ ಗಮನ ಹರಿಸಬೇಕು. ಬೆಂಗಳೂರಿನಂತ ಮಹಾನಗರಗಳಲ್ಲಿ ಶಿಕ್ಷಣ ದುಬಾರಿಯಾಗಿದೆ. ಆದರೆ ಈ ಭಾಗದಲ್ಲಿ ಅತ್ಯಂತ ಕಡಿಮೆ ವೆಚ್ಚದಲ್ಲಿ ಗುಣಮಟ್ಟದ ಶಿಕ್ಷಣ ನೀಡಲಾಗುತ್ತಿದೆ. ಕೆಎಲ್‌ಇ ಸಂಸ್ಥೆಯ ಛತ್ರದಲ್ಲಿ ಕೋಟ್ಯಂತರ ವಿದ್ಯಾರ್ಥಿಗಳು ರಾಷ್ಟ್ರ ನಿರ್ಮಾಣದಲ್ಲಿ ತೊಡಗಲಿ' ಎಂದು ಹಾರೈಸಿದರು.

ಸಭಿಕರನ್ನು ಸ್ವಾಗತಿಸಿ ಪ್ರಾಸ್ತಾವಿಕ ನುಡಿಗಳನ್ನಾಡಿದ ಕೆಎಲ್‌ಇ ಸಂಸ್ಥೆಯ ಕಾರ್ಯಾಧ್ಯಕ್ಷರಾದ ಡಾ.ಪ್ರಭಾಕರ ಕೋರೆಯವರು, 'ಗ್ರಾಮೀಣ ವಿದ್ಯಾರ್ಥಿಗಳ ಗುಣಾತ್ಮಕ ಶಿಕ್ಷಣಕ್ಕಾಗಿಯೇ ಕೆಎಲ್‌ಇ ಸಂಸ್ಥೆಯು ಅಂತರಾಷ್ಟ್ರೀಯ ಗುಣಮಟ್ಟದ ಆಂಗ್ಲ ಮಾಧ್ಯಮ ಶಾಲೆಯನ್ನು ಪ್ರಾರಂಭಿಸಿರುವುದು ಹೆಮ್ಮೆ ತಂದಿದೆ. ಈ ಶಾಲೆ ಪ್ರಾರಂಭಗೊಳ್ಳಲು ದಾನವನ್ನು ನೀಡಿದ ಶ್ರೀಮತಿ ಮಾಲುತಾಯಿ ಶಿವಪುತ್ರ ಶಿರಕೋಳಿಯವರನ್ನು ನಾನು ಸಂಸ್ಥೆಯಿಂದ ಅಭಿನಂದಿಸುತ್ತೇನೆ. ಉತ್ತರ ಕರ್ನಾಟಕದ ಮಕ್ಕಳಿಗೆ ಶಿಕ್ಷಣವನ್ನು ನೀಡಬೇಕೆಂಬ ಉದ್ದೇಶದಿಂದಲೇ ಅಸಂಖ್ಯೆ ದಾನಿಗಳು ಹಾಗೂ ಮಹಾದಾನಿಗಳು ಭೂಮಿ ಹಾಗೂ ಹಣವನ್ನು ನೀಡಿದ್ದನ್ನು ಸಂಸ್ಥೆಯು ಎಂದಿಗೂ ಮರೆಯುವುದಿಲ್ಲ. ಮುಂಬರುವ ಎರಡುವರ್ಷಗಳಲ್ಲಿ ಅನೇಕ ಕಾರ್ಯಕ್ರಮಗಳ ಮೂಲಕ ಜನಸೇವೆಗೆ ತೊಡಗಿಸಿಕೊಳ್ಳಲಿದೆ. ಕೇವಲ ಆರು ತಿಂಗಳಲ್ಲಿ ಹುಬ್ಬಳ್ಳಿಯ ವೈದ್ಯಕೀಯ ಮಹಾವಿದ್ಯಾಲಯ ಹಾಗೂ ಮುಂಬಯಿನ ಶಾಲೆ ಜನ ಸೇವೆಗೆ ಅರ್ಪಣೆಯಾಗಲಿದೆ. ಅಲ್ಲದೆ ಇನ್ನೆರಡು ತಿಂಗಳಲ್ಲಿ ಬೆಳಗಾವಿಯಲ್ಲಿ 300 ಹಾಸಿಗೆಗಳ ಕ್ಯಾನ್ಸರ್ ಆಸ್ಪತ್ರೆ ಲೋಕಾರ್ಪಣೆಗೊಳ್ಳಲಿದೆ. ಸಂಸ್ಥೆಯು ಕನ್ನಡವನ್ನು ಕಟ್ಟಿಬೆಳೆಸುವಲ್ಲಿ ಕಂಕಣಬದ್ಧವಾಗಿದ್ದು ಗ್ರಾಮೀಣ ಪ್ರದೇಶಗಳಲ್ಲಿ ಕನ್ನಡ ಕಾನ್ವೆಂಟ್ ಶಾಲೆಗಳನ್ನು ತೆರೆಯಲಿದೆ. 4500 ಹಾಸಿಗೆಗಳ ಆಸ್ಪತ್ರೆಯ ಮೂಲಕ ರೋಗಿಗಳ ಸೇವೆಯಲ್ಲಿ ನಿರತವಾಗಿರುವ ಸಂಸ್ಥೆಯು ಅಂಗಾಂಗ ಕಸಿ ಮಾಡುವಲ್ಲಿ ಮುಂಚೂಣಿಯಲ್ಲಿದೆ. ಶೀಘ್ರದಲ್ಲಿಯೇ ಲಂಗ್ಸ್(ಶ್ವಾಸಕೋಶ) ಕಸಿ ನೆರವೇರಿಸಲು ಅಣಿಯಾಗಿದ್ದೇವೆ' ಎಂದು ಹೇಳಿದರು.

ಹುಕ್ಕೇರಿ ಮತಕ್ಷೇತ್ರದ ಶಾಸಕರಾದ ನಿಖಿಲ್ ಕತ್ತಿ ಅವರು ಮಾತನಾಡಿದರು. ನಿಡಸೋಸಿ ದುರದುಂಡೀಶ್ವರ ಸಂಸ್ಥಾನದ ಜಗದ್ಗುರುಗಳಾದ ಪಂಚಮ ಶಿವಲಿಂಗೇಶ್ವರ ಮಹಾಸ್ವಾಮೀಜಿಯವರು ಆಶೀರ್ವಚನ ನೀಡುತ್ತಾ,ಕೆ–ಎಲ್‌ಇ ಸಂಸ್ಥೆಯು ಅಗಾಧವಾಗಿ ಬೆಳೆದು ನಿಂತಿದೆ. ಗ್ರಾಮೀಣ ಭಾಗದಲ್ಲಿ ಅದ್ಭುತವಾದ ಶಾಲೆಗಳನ್ನು ನಿರ್ಮಿಸಿ ಅಕ್ಷರ ಬೀಜ ಬಿತ್ತುವ ಮಹತ್ತರ ಕೆಲಸಮಾಡಿದೆ ಎಂದ ಅವರು ಯಾವ ತಾಲೂಕಿನಲ್ಲಿ ಶಿಕ್ಷಣ ಹಿಂದುಳಿದಿದೆ ಎಂದು ಗಮನಿಸಿ ಆ ಪ್ರದೇಶದಲ್ಲಿಕೆಎಲ್‌ಇ ಸಂಸ್ಥೆಯು ಶಾಲೆಗಳನ್ನು ತೆರೆಯುವುದರ ಮೂಲಕ ನಾಂದಿ ಹಾಡಬೇಕೆಂದು ನುಡಿದರು. ಸಮಾರಂಭದ ಅಧ್ಯಕ್ಷತೆಯನ್ನು ಸಂಸ್ಥೆಯ ಅಧ್ಯಕ್ಷರು ಹಾಗೂ ಶಾಸಕರಾದ ಮಹಾಂತೇಶ ಕೌಜಲಗಿಯವರು ವಹಿಸಿದ್ದರು.

ಇದೇ ಸಂದರ್ಭದಲ್ಲಿ ನೂತನವಾಗಿ ರಾಜ್ಯಸಭೆಗೆ ಆಯ್ಕೆಯಾದ ಡಾ.ಸುಧಾ ಮೂರ್ತಿಯವರನ್ನು ಹಾಗೂ ದಾನಿಗಳಾದ ಅಪ್ಪಾಸಾಹೇಬ ಶಿರಕೋಳಿ ಹಾಗೂ ಕುಟುಂಬದವರನ್ನು ಕೆಎಲ್‌ಇ ಸಂಸ್ಥೆಯಿಂದ ಸತ್ಕರಿಸಲಾಯಿತು. ವಿಧಾನ ಪರಿಷತ್ ಸದಸ್ಯರಾದ ಪ್ರಕಾಶ ಹುಕ್ಕೇರಿ, ರಾಹುಲ್ ಜಾರಕಿಹೊಳಿ, ಕೆಎಲ್‌ಇ ಆಡಳಿತ ಮಂಡಳಿಯ ಸದಸ್ಯರಾದ ಶಂಕರಣ್ಣಾ ಮುನವಳ್ಳಿ, ವಾಯ್.ಎಸ್.ಪಾಟೀಲ, ಜಯಾನಂದ ಮುನವಳ್ಳಿ, ಬಾಬಣ್ಣ ಮೆಟಗುಡ್ಡ, ಅನೀಲ ಪಟ್ಟೇದ, ಬಿ.ಆರ್.ಪಾಟೀಲ, ಮಹಾಂತೇಶ ಕವಟಗಿಮಠ, ಅಮಿತ ಕೋರೆ, ಪ್ರವೀಣ ಬಾಗೇವಾಡಿ, ಡಾ.ಎಚ್.ಬಿ.ರಾಜಶೇಖರ, ಆಶಾ ಕೋರೆ,–ಎಂ.ಸಿ.ಕೊಳ್ಳಿ ಮೊದಲಾದ ಗಣ್ಯರು ಉಪಸ್ಥಿತರಿದ್ದರು. ಐಶ್ವರ್ಯಾ ಗಣಾಚಾರಿ ನಿರೂಪಿಸಿ ವಂದಿಸಿದರು.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089